ಸಂಪುಟ: 04 ಸಂಚಿಕೆ: 333 ಪುಟಗಳು: 08 ಶುಕ್ರವಾರ 14 ಫೆಬ್ರವರಿ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833

₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಓದುವುದನ್ನು
ಬರೆಯುವುದನ್ನು
ಕಲಿಯುವುದು
ವಿದ್ಯಾಭ್ಯಾಸವಲ್ಲ,
ವಿನಯವನ್ನು ವಿವೇಕವನ್ನು
ಕಲಿಸುವುದೇ ವಿದ್ಯಾಭ್ಯಾಸ.

## ದಲೈ ಲಾಮಾಗೆ ಭಾರತದಾದ್ಯಂತ ಝಡ್ ಕೆಟಗರಿಯ ಭದ್ರತೆ

• ಉದಯವಾಹಿನಿ, ನವದೆಹಲಿ

ಕೇಂದ್ರ ಗೃಹ ಸಚಿವಾಲಯ ಟಿಬೆಟಿಯನ್ ಆಧ್ಯಾತ್ಮಿಕ ನಾಯಕ ದಲೈ ಲಾಮಾ ಅವರಿಗೆ ಇರುವ ಭದ್ರತಾ ಬೆದರಿಕೆಗಳನ್ನು ಗಮನದಲ್ಲಿಟ್ಟುಕೊಂಡು ಭಾರತದಾದ್ಯಂತ ಝಡ್-ಕೆಟಗರಿಯ ಭದ್ರತೆ ಒದಗಿಸಿದೆ. ಕೇಂದ್ರ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಭದ್ರತೆಯನ್ನು ನೀಡಲಾಗಿದೆ. 89 ವರ್ಷದ ನಾಯಕ ದಲೈ ಲಾಮಾ ಅವರ ರಕ್ಷಣೆಗೆ ಸಿಆರ್‌ಪಿಎಫ್ ವಿಐಪಿ ಭದ್ರತಾ ವಿಭಾಗವು ಜವಾಬ್ದಾರವಾಗಿರುತ್ತದೆ. ಮೂಲಗಳ ಪ್ರಕಾರ, ದಲೈ ಲಾಮಾ ಅವರಿಗೆ ಝಡ್- ಕೆಟಗರಿಯ ರಕ್ಷಣೆ ನೀಡಲಾಗುವುದು. ಸಿಆರ್‌ಪಿಎಫ್ ಕಮಾಂಡೋಗಳು ದೇಶಾದ್ಯಂತ ದಲೈ ಲಾಮಾ ಅವರಿಗೆ ಭದ್ರತೆಯನ್ನು ನೀಡಲಿದ್ದಾರೆ. 30 ಸಿಆರ್‌ಪಿಎಫ್ ಕಮಾಂಡೋಗಳು ಪಾಳಿಯಲ್ಲಿ ಕೆಲಸ ಮಾಡುತ್ತಾರೆ. ದಲೈ ಲಾಮಾ ಅವರಿಗೆ ಹಿಮಾಚಲ ಪ್ರದೇಶದ ಪೊಲೀಸರಿಂದ ರಕ್ಷಣೆ ಇತ್ತು. ಅವರು ದೆಹಲಿ ಅಥವಾ ಯಾವುದೇ ಇತರ ಸ್ಥಳಕ್ಕೆ ಪ್ರಯಾಣಿಸಿದಾಗ ಸ್ಥಳೀಯ ಪೊಲೀಸರು ಭದ್ರತೆಯನ್ನು ನೀಡುತ್ತಿದ್ದರು. ಆದರೆ, ಕೇಂದ್ರ ಗುಪ್ತಚರ ಸಂಸ್ಥೆಗಳ ಪರಿಶೀಲನೆಯ ನಂತರ ಸರ್ಕಾರ ಈಗ ಅವರಿಗೆ ಏಕರೂಪದ ಭದ್ರತಾ ವ್ಯವಸ್ಥೆಯನ್ನು ನೀಡಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಬಿರೇನ್ ಸಿಂಗ್ ರಾಜೀನಾಮೆ ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ

• ಉದಯವಾಹಿನಿ, ಮಣಿಪುರ


ಮುಖ್ಯಮಂತ್ರಿ ಬಿರೇನ್ ಸಿಂಗ್ ರಾಜೀನಾಮೆ ನೀಡಿದ 4 ದಿನಗಳ ನಂತರ ಇಂದು ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಹೇರಲಾಗಿದೆ. ಮಣಿಪುರದ ಮುಖ್ಯಮಂತ್ರಿ ಎನ್. ಬಿರೇನ್ ಸಿಂಗ್ ಈ ವಾರದ ಆರಂಭದಲ್ಲಿ ತಮ್ಮ ಸಿಎಂ ಹುದ್ದೆಗೆ ರಾಜೀನಾಮೆ ನೀಡಿದ್ದರು. ಅದಾದ ಕೆಲವು ದಿನಗಳ ನಂತರ ಈ ಬೆಳವಣಿಗೆ ಸಂಭವಿಸಿದೆ. ಇಂದಿನಿಂದ ಹಿಂಸಾಚಾರ ಪೀಡಿತ ಮಣಿಪುರದಲ್ಲಿ ಕೇಂದ್ರ ಸರ್ಕಾರ ರಾಷ್ಟ್ರಪತಿ ಆಳ್ವಿಕೆ ಹೇರಿದೆ. ಮಣಿಪುರದಲ್ಲಿ ನಡೆದ ಜನಾಂಗೀಯ ಹಿಂಸಾಚಾರದಲ್ಲಿ 250ಕ್ಕೂ ಹೆಚ್ಚು ಜನರು ಸಾವನ್ನಪ್ಪಿ, ಸಾವಿರಾರು ಜನರು ಸ್ಥಳಾಂತರಗೊಂಡಿದ್ದರು. ಮಣಿಪುರದಲ್ಲಿ 21 ತಿಂಗಳಿಂದ ಜನಾಂಗೀಯ ಹಿಂಸಾಚಾರ ನಡೆಯುತ್ತಿದೆ. ಇದಾದ ನಂತರ ಬಿರೇನ್ ಸಿಂಗ್ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದರು.

## ಕಾಶ್ಮೀರ ಸಮಸ್ಯೆ ಚರ್ಚಿಸಿ ಪರಿಹರಿಸಿಕೊಳ್ಳಿ: ಟರ್ಕಿ ಸಲಹೆ

• ಉದಯವಾಹಿನಿ, ಬೆಂಗಳೂರು

ಕಾಶ್ಮೀರ ಜನರ ಒಳಿತು ಗಮನದಲ್ಲಿಟ್ಟುಕೊಂಡು, ಕಾಶ್ಮೀರ ಸಮಸ್ಯೆಯನ್ನು ಮಾತುಕತೆ ಮೂಲಕ ಪರಿಹರಿಸಿಕೊಳ್ಳಬೇಕು ಎಂದು ಪಾಕಿಸ್ತಾನ ಮತ್ತು ಭಾರತಕ್ಕೆ ಟರ್ಕಿ ಅಧ್ಯಕ್ಷ ರೆಸೆಪ್ ತಯ್ಯಿಪ್ ಎರ್ಡೋಗನ್ ಸಲಹೆ ನೀಡಿದ್ದಾರೆ. ಎರಡು ದಿನಗಳ ಪಾಕಿಸ್ತಾನ ಪ್ರವಾಸದಲ್ಲಿರುವ ಟರ್ಕಿ ಅಧ್ಯಕ್ಷ ಎರ್ಡೋಗನ್, ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅವರ ಜೊತೆಗಿನ ಮಾತುಕತೆ ಬಳಿಕ ಕಾಶ್ಮೀರ ಸಮಸ್ಯೆ ಕುರಿತು ಪ್ರಸ್ತಾಪಿಸಿದರು. ಇದೇ ಸಂದರ್ಭದಲ್ಲಿ ಉಭಯ ದೇಶಗಳ ನಾಯಕರು 24 ಒಪ್ಪಂದಗಳಿಗೆ ಸಹಿ ಹಾಕಿದರು. ಆ ಬಳಿಕ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧವನ್ನು ಗಟ್ಟಿಗೊಳಿಸಲು ಕಾರ್ಯಪ್ರವೃತ್ತರಾಗುವುದಾಗಿ ಉಭಯ ನಾಯಕರು ತಿಳಿಸಿದರು.

# ಜೆಪಿಸಿ ವಕ್ಫ್ ತಿದ್ದುಪಡಿ ಅಗೌರವ ತೋರಿಸಬೇಡಿ




**ವಕ್ಫ್ ಅಂಗೀಕಾರ ತಂತ್ರ- ಪ್ರತಿತಂತ್ರಗಳ ಅಬ್ಬರ**

• ಉದಯವಾಹಿನಿ, ನವದೆಹಲಿ

ಬಿಜೆಪಿ ಸಂಸದ ಮತ್ತು ವಕ್ಫ್ ಮಸೂದೆಯ ಜಂಟಿ ಸಂಸದೀಯ ಸಮಿತಿಯ (ಜೆಪಿಸಿ) ಅಧ್ಯಕ್ಷ ಜಗದಾಂಬಿಕಾ ಪಾಲ್ ಮಾತನಾಡಿ, ಆರು ತಿಂಗಳ ರಾಷ್ಟ್ರವ್ಯಾಪಿ ಸಮಾಲೋಚನೆಯ ನಂತರ ಜೆಪಿಸಿ ತನ್ನ ವರದಿಯನ್ನು ಸಂಸತ್ತಿನಲ್ಲಿ ಮಂಡಿಸಲಿದೆ. ಸಮಿತಿಯು ವರದಿ ಅಂತಿಮಗೊಳಿಸುವ ಮೊದಲು ಒಳಹರಿವು ಸಂಗ್ರಹಿಸಲು ದೇಶಾದ್ಯಂತ ಪ್ರವಾಸ ಮಾಡಿತು. ಇದರಲ್ಲಿ 14 ಷರತ್ತುಗಳಲ್ಲಿ 25 ತಿದ್ದುಪಡಿಗಳನ್ನು ಅಳವಡಿಸಲಾಗಿದೆ. ಜೆಪಿಸಿ ತನ್ನ ವರದಿಯನ್ನು ಸಂಸತ್ತಿನಲ್ಲಿ ಮಂಡಿಸಲಿದೆ. ವಿಸ್ತೃತ ಚರ್ಚೆ ಮತ್ತು ಸಮಾಲೋಚನೆ ನಡೆಸಲು ಆರು ತಿಂಗಳ ಹಿಂದೆ ಜೆಪಿಸಿ ರಚಿಸಲಾಗಿದೆ. ಕಳೆದ ಆರು ತಿಂಗಳಲ್ಲಿ ಇಡೀ ದೇಶವನ್ನು ಸುತ್ತಿ ವರದಿಯನ್ನು ಸಿದ್ಧಪಡಿಸಿದ್ದೇವೆ. ನಾವು 14 ಕಲಂಗಳಲ್ಲಿ 25 ತಿದ್ದುಪಡಿಗಳನ್ನು ಅಂಗೀಕರಿಸಿದ್ದೇವೆ'' ಎಂದು ಹೇಳಿದರು.

ಜೆಪಿಸಿಯ ಕೆಲ ಸದಸ್ಯರು ಕಿವಿಗೊಟ್ಟಿಲ್ಲ ಎಂಬ ದೂರು ಕೇಳಿ ಬಂದಿದ್ದು, ವರದಿ ಅಂಗೀಕಾರದ ಬಳಿಕ ಭಿನ್ನಾಭಿಪ್ರಾಯ ಪತ್ರ ಸಲ್ಲಿಸುವಂತೆ ತಿಳಿಸಿದವು. ವರದಿಯ ಅನುಬಂಧಕ್ಕೆ ಭಿನ್ನಾಭಿಪ್ರಾಯದ ಟಿಪ್ಪಣಿಯನ್ನೂ ಲಗತ್ತಿಸಿದ್ದೇವೆ. ಮಧ್ಯಸ್ಥಗಾರರ ದಾಖಲೆಗಳನ್ನೂ ಮಂಡಿಸುತ್ತೇವೆ ಎಂದು ಜಗದಾಂಬಿಕಾ ಪಾಲ್ ತಿಳಿಸಿದರು.

1 ಸಂಸತ್ತಿನಲ್ಲಿ ಜೆಪಿಸಿ ವಕ್ಫ್ ತಿದ್ದುಪಡಿ ಮಸೂದೆ ವರದಿ ಮಂಡನೆ

2 ಲೋಕಸಭೆ, ರಾಜ್ಯಸಭೆಯಲ್ಲಿ ವಿಪಕ್ಷಗಳಿಂದ ತೀವ್ರ ಕೋಲಾಹಲ

3 ಲೋಕಸಭೆಯಲ್ಲಿ ಪ್ರತಿಪಕ್ಷಗಳಿಗೆ ತಾಳ್ಮೆಯ ಪಾಠ ಮಾಡಿದ ಅಮಿತ್ ಶಾ

4 ವಿಪಕ್ಷಗಳ ಸಲಹೆಯನ್ನು ಸೇರಿಸಲು ಅಭ್ಯಂತರವಿಲ್ಲ ಎಂದ ಅಮಿತ್ ಶಾ

### ವಿಪಕ್ಷಗಳಿಗೆ ಅಮಿತ್ ಶಾ ತಾಳ್ಮೆಯ ಪಾಠ

ಲೋಕಸಭೆಯಲ್ಲಿ ಜೆಪಿಸಿ ಪುರಸ್ಕೃತ ವಕ್ಫ್ ತಿದ್ದುಪಡಿ ಮಸೂದೆ ವರದಿ ಮಂಡನೆ ಮತ್ತು ಪ್ರತಿಪಕ್ಷಗಳ ಪ್ರತಿಭಟನೆಯನ್ನು ಗಮನಿಸುತ್ತಿದ್ದ ಕೇಂದ್ರ ಗೃಹ ಸಚಿವ ಅಮಿತ್ ಶಾ, ವಿಪಕ್ಷ ಸದಸ್ಯರಿಗೆ ತಾಳ್ಮೆಯ ಪಾಠ ಮಾಡಿದ್ದಾರೆ. ಈ ಕುರಿತು ಲೋಕಸಭೆಯಲ್ಲಿ ಮಾತನಾಡಿದ ಅಮಿತ್ ಶಾ, ಜೆಪಿಸಿ ವಕ್ಫ್ ತಿದ್ದುಪಡಿ ಮಸೂದೆ ವರದಿಯ ಬಗ್ಗೆ ಪ್ರತಿಪಕ್ಷಗಳ ಕೆಲವು ಸದಸ್ಯರು ಅನವಶ್ಯಕವಾಗಿ ಆತಂಕಗೊಂಡಿದ್ದಾರೆ. ತಮ್ಮ ಅಭಿಪ್ರಾಯಗಳನ್ನು ಸಂಪೂರ್ಣವಾಗಿ ವರದಿಯಲ್ಲಿ ಸೇರಿಸಲಾಗಿಲ್ಲ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಪ್ರತಿಪಕ್ಷಗಳ ಕಳವಳವನ್ನು ಪರಿಗಣಿಸಿ, ಈ ಅಭಿಪ್ರಾಯಗಳು ಸೂಕ್ತವಾಗಿವೆಎಂದು ಕಂಡುಬಂದಲ್ಲಿ ಅವುಗಳನ್ನು ವರದಿಯಲ್ಲಿ ಸೇರಿಸಲು ನಮ್ಮ ಪಕ್ಷಕ್ಕೆ ಖಂಡಿತವಾಗಿಯೂ ಅಭ್ಯಂತರವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.


### ಸರ್ಕಾರದ ವಾದವೇನು

ಜೆಪಿಸಿ ವಕ್ಫ್ ತಿದ್ದುಪಡಿ ಮಸೂದೆ ವರದಿಯ ಬಗ್ಗೆ ಪ್ರಸ್ತುತ ಸಂದರ್ಭದಲ್ಲಿ ಚರ್ಚೆ ನಡೆಸುವ ಅಗತ್ಯವಿಲ್ಲ ಎಂದು ಸರ್ಕಾರ ವಾದಿಸುತ್ತಿದೆ. ಕೇಂದ್ರ ಕಾನೂನು ಸಚಿವ ಕಿರಣ್ ರಿಜಿಜು ಅವರು ನೈಜ ವಕ್ಫ್ ತಿದ್ದುಪಡಿ ಮಸೂದೆಯನ್ನು ಸದನದಲ್ಲಿ ಮಂಡಿಸಿದಾಗ ಈ ಕುರಿತು ವಿಸ್ತೃತ ಚರ್ಚೆ ನಡೆಸಬಹುದು ಎಂದು ಸರ್ಕಾರ ಸಲಹೆ ನೀಡಿದೆ. ಆದರೆ ಸರ್ಕಾರದ ಈ ವಾದವನ್ನು ತಿರಸ್ಕರಿಸಿರುವ ವಿಪಕ್ಷಗಳು, ಜೆಪಿಸಿ ವರದಿಯ ಬಗ್ಗೆಯೂ ಸದನದಲ್ಲಿ ಚರ್ಚೆಯಾಗಬೇಕು ಎಂದು ಪಟ್ಟು ಹಿಡಿದಿವೆ. ವರದಿಯಲ್ಲಿನ ಅಂಶಗಳನ್ನು ಯಥಾವತ್ತಾಗಿ ಜಾರಿ ಮಾಡಲು ನಾವು ಬಿಡುವುದಿಲ್ಲ ಎಂದು ಪ್ರತಿಪಕ್ಷಗಳು ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಅಬ್ಬರಿಸಿವೆ.

■ ರಾಜ್ಯಸಭೆಯಲ್ಲಿ ವಕ್ಫ್ ಜಂಟಿ ಸಂಸದೀಯ ಸಮಿತಿ ವರದಿ ಮಂಡನೆ
■ ರಾಜ್ಯಸಭೆಯಲ್ಲಿ ವಕ್ಫ್ (ತಿದ್ದುಪಡಿ) ವಿಧೇಯಕದ ಜೆಪಿಸಿ ವರದಿ ಮಂಡನೆ;
■ ಮೇಲ್ಮನೆಯಲ್ಲಿ ಕೋಲಾಹಲ ■ ರಾಜ್ಯಸಭೆಯಲ್ಲಿ ವಕ್ಫ್ ಜೆಪಿಸಿ ವರದಿ ಮಂಡನೆ
■ ಇದು ಪ್ರಜಾಪ್ರಭುತ್ವ ವಿರೋಧಿ ಎಂದು ಖರ್ಗೆ ಆಕ್ರೋಶ

**ಮೇಲ್ಮನೆಯಲ್ಲಿ ಕೋಲಾಹಲ:** ವರದಿ ಮಂಡನೆಯ ನಂತರ ಮೇಲ್ಮನೆಯಲ್ಲಿ ಕೋಲಾಹಲ ಉಂಟಾಯಿತು. ಇದರಿಂದಾಗಿ ಅಧಿವೇಶನವನ್ನು ಬೆಳಗ್ಗೆ 11.20 ರವರೆಗೆ ಮುಂದೂಡಲಾಯಿತು. ಆದಾಗ್ಯೂ, ಕಲಾಪಗಳು ಪುನರಾರಂಭಗೊಂಡ ಕೂಡಲೇ, ವಿರೋಧ ಪಕ್ಷದ ಸದಸ್ಯರು ಮತ್ತೆ ಗದ್ದಲ ಎಬ್ಬಿಸಿದರು. ಇದಕ್ಕೂ ಮುನ್ನ, ಬಿಜೆಪಿ ಸಂಸದ ಮತ್ತು ವಕ್ಫ್ (ತಿದ್ದುಪಡಿ) ಮಸೂದೆಯ ಜಂಟಿ ಸಂಸದೀಯ ಸಮಿತಿ (ಜೆಪಿಸಿ) ಅಧ್ಯಕ್ಷ ಜಗದಾಂಬಿಕಾ ಪಾಲ್, ಆರು ತಿಂಗಳ ರಾಷ್ಟ್ರವ್ಯಾಪಿ ಸಮಾಲೋಚನೆಯ ನಂತರ ಜೆಪಿಸಿ ತನ್ನ ವರದಿಯನ್ನು ಸಂಸತ್ತಿನಲ್ಲಿ ಮಂಡಿಸಲಿದೆ ಎಂದು ಹೇಳಿದ್ದರು. ಎಎನ್‌ಐ ಜೊತೆ ಮಾತನಾಡಿದ ಜೆಪಿಸಿ ಅಧ್ಯಕ್ಷರು, ವರದಿಯನ್ನು ಅಂತಿಮಗೊಳಿಸುವ ಮೊದಲು ಸಲಹೆ ಸೂಚನೆಗಳನ್ನು ಪಡೆದುಕೊಳ್ಳಲು ಸಮಿತಿಯು ದೇಶಾದ್ಯಂತ ಪ್ರವಾಸ ಮಾಡಿದೆ ಎಂದು ಒತ್ತಿ ಹೇಳಿದರು. ಇದರಲ್ಲಿ 14 ನಿಯಮಗಳಿಗೆ 25 ತಿದ್ದುಪಡಿಗಳನ್ನು ಅಂಗೀಕರಿಸುವುದು ಕೂಡ ಸೇರಿದೆ ಎಂದು ಅವರು ಇದೇ ವೇಳೆ ಸ್ಪಷ್ಟಪಡಿಸಿದರು.

**ರಾಜಕೀಯ ಪ್ರೇರಿತ ತಿದ್ದುಪಡಿ:** ಈ ಬಗ್ಗೆ ಮಾತನಾಡಿದ ಕಾಂಗ್ರೆಸ್ ಸಂಸದ ಗೌರವ್ ಗೊಗೊಯ್, ಈಗಾಗಲೇ ಜಾರಿಯಲ್ಲಿರುವ ವಕ್ಫ್ ಕಾಯ್ದೆಯನ್ನು ಮುಂದುವರಿಸುವ ಬದಲು ರಾಜಕೀಯ ಪ್ರೇರಿತ ತಿದ್ದುಪಡಿಯನ್ನು ತರಲು ಪ್ರಯತ್ನಿಸಲಾಗುತ್ತಿದೆ. ಎಎನ್‌ಐ ಜೊತೆ ಮಾತನಾಡಿದ ಗೊಗೊಯ್, ಜೆಪಿಸಿ ವರದಿಯಲ್ಲಿ ಹಲವಾರು ಸಂಸತ್ ಸದಸ್ಯರು ತಮ್ಮ ಭಿನ್ನಾಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಈ ಮಸೂದೆಯಲ್ಲಿ ಸಾಂವಿಧಾನಿಕ ನಿಯಮಾವಳಿಗಳ ಬಗ್ಗೆ ನಿರ್ಲಕ್ಷ್ಯ ಮಾಡಲಾಗಿದೆ ಎಂಬುದು ಸ್ಪಷ್ಟವಾಗಿದೆ. ಪ್ರಸ್ತುತ, ವಕ್ಫ್ ಆಸ್ತಿಗಳನ್ನು ನಿರ್ವಹಿಸಲು ಕಾಯ್ದೆ ಇದೆ ಮತ್ತು ಸರ್ಕಾರವು ಈ ಕಾಯ್ದೆಯನ್ನು ಹೇಗೆ ಉತ್ತಮವಾಗಿ ಜಾರಿಗೊಳಿಸಬಹುದು ಎಂಬುದರ ಮೇಲೆ ಗಮನ ಕೇಂದ್ರೀಕರಿಸುವ ಬದಲು, ರಾಜಕೀಯ ಪ್ರೇರಿತ ತಿದ್ದುಪಡಿಯನ್ನು ತರುವ ಪ್ರಯತ್ನ ಮಾಡುತ್ತಿದೆ ಎಂದು ಆರೋಪಿಸಿದರು.



### ಪ್ರತಿಪಕ್ಷಗಳಿಂದ ಸಭಾತ್ಯಾಗ

ಜೆಪಿಸಿ ವರದಿ ಮಂಡಿಸುತ್ತಿದ್ದಂತೆ ವಿರೋಧ ಪಕ್ಷಗಳು ಇದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿ ಕೋಲಾಹಲ ಸೃಷ್ಟಿಸಿದವು ಮತ್ತು ಸಭಾತ್ಯಾಗ ಮಾಡಿ ಸದನದಿಂದ ಹೊರ ನಡೆದರು. ಜೆಪಿಸಿ ಸದಸ್ಯರಾದ ಬಿಜೆಪಿ ಸಂಸದೆ ಮೇಧಾ ವಿಶ್ರಮ್ ಕುಲಕರ್ಣಿ ಅವರು ವರದಿ ಮಂಡಿಸಿದರು. ವರದಿ ಮಂಡಿಸಿದ ನಂತರ ವಿರೋಧ ಪಕ್ಷದ ಸದಸ್ಯರು ಗದ್ದಲ ಎಬ್ಬಿಸಿದರು. ಈ ವೇಳೆ ಮಧ್ಯ ಪ್ರವೇಶಿಸಿದ ಸಭಾಧ್ಯಕ್ಷ ಜಗದೀಪ್ ಧಂಖರ್ ಅವರು, ಭಾರತದ ರಾಷ್ಟ್ರಪತಿಗಳಿಗೆ ಅಗೌರವ ತೋರಿಸಬೇಡಿ... ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ವಿರೋಧ ಪಕ್ಷದ ಸದಸ್ಯರಿಗೆ ತಮ್ಮ ಸ್ಥಾನಗಳಲ್ಲಿ ಕುಳಿತುಕೊಳ್ಳುವಂತೆ ಹೇಳಬೇಕು ಎಂದು ಒತ್ತಾಯಿಸಿದರು.

## ಶೇ 70ಕ್ಕಿಂತ ಅಧಿಕ ಹೆಚ್ಚಳವಾಗಿದ್ದರೆ ಶೇ 30ರಷ್ಟು ಇಳಿಕೆ

• ಉದಯವಾಹಿನಿ, ಬೆಂಗಳೂರು

**ಮೆಟ್ರೊ ಪ್ರಯಾಣ ದರ**

'ನಮ್ಮ ಮೆಟ್ರೊ' ಪ್ರಯಾಣ ದರ ಏರಿಕೆಯಾಗಿರುವುದನ್ನು ಮತ್ತೆ ಪರಿಷ್ಕರಿಸುವುದಿಲ್ಲ. ಆದರೆ, ತಾಂತ್ರಿಕ ಕಾರಣಗಳಿಂದ ಕೆಲವು ನಿಲ್ದಾಣಗಳಿಗೆ ಶೇ 70ರಿಂದ ಶೇ 100ರಷ್ಟು ಹೆಚ್ಚಳವಾಗಿದೆ. ಅಂಥ ಕಡೆಗಳಲ್ಲಿ ಶೇ 30ರಷ್ಟು ಕಡಿಮೆ ಮಾಡಲಾಗುವುದು ಎಂದು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಎಸ್. ಮಹೇಶ್ವರ ರಾವ್ ತಿಳಿಸಿದ್ದಾರೆ.

ಮೆಟ್ರೊ ಪ್ರಯಾಣ ಏರಿಕೆ ದರದಲ್ಲಿ ಯಾವುದೇ ಬದಲಾವಣೆ ಇಲ್ಲ. ಒಟ್ಟು ಹೆಚ್ಚಳದಲ್ಲಿ ಇಳಿಕೆಯೂ ಇರುವುದಿಲ್ಲ. ಕನಿಷ್ಠದರ 10, ಗರಿಷ್ಠ ದರ 90 ನಿಗದಿ ಮಾಡಲಾಗಿದ್ದು, ಅದೇ ದರ ಮುಂದುವರಿಯಲಿದೆ ಎಂದು ತಿಳಿಸಿದರು. ಒಟ್ಟು 70 ಮೆಟ್ರೊ ನಿಲ್ದಾಣಗಳಿವೆ. ದರ ಹೆಚ್ಚಳ ವೇಳೆ ಕೆಲವು ಸ್ಟೇಜ್‌ಗಳ ದರದಲ್ಲಿ ವ್ಯತ್ಯಾಸವಾಗಿದೆ. ಈ ವ್ಯತ್ಯಾಸವನ್ನು ಮಾತ್ರ ಸರಿಪಡಿಸಲಾಗುವುದು. ಇದರಿಂದ 2.5 ಲಕ್ಷ ಪ್ರಯಾಣಿಕರಿಗೆ ತುಸು ಇಳಿಕೆಯ ಅನುಕೂಲ ಸಿಗಲಿದೆ ಎಂದು ಸ್ಪಷ್ಟಪಡಿಸಿದರು.


8 ವರ್ಷ ಹೆಚ್ಚಳವಾಗಿಲ್ಲ: '2017ರ ನಂತರ ಮೆಟ್ರೊ ದರ ಹೆಚ್ಚಳವಾಗಿಲ್ಲ. 8 ವರ್ಷಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಯ ವೇತನ ಶೇ 43ರಷ್ಟು ಹೆಚ್ಚಳವಾಗಿದೆ. ವಿದ್ಯುತ್ ವೆಚ್ಚವು ಶೇ 40ರಷ್ಟು ಜಾಸ್ತಿಯಾಗಿದೆ. ನಮ್ಮ ಹಲವು ರೈಲುಗಳು, ನಿಲ್ದಾಣಗಳಿಗೆ 15 ವರ್ಷವಾಗುತ್ತಾ ಬಂದಿದ್ದು, ಅವುಗಳ ನಿರ್ವಹಣೆಯ ವೆಚ್ಚ ಶೇ 60ರಷ್ಟು ಹೆಚ್ಚಾಗಿದೆ. ಇವುಗಳನ್ನೆಲ್ಲ ಪರಿಶೀಲಿಸಿ, ಪರಿಗಣಿಸಿ ದರ ನಿಗದಿ ಸಮಿತಿ ವರದಿ ನೀಡಿದೆ ಎಂದು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಎಸ್. ಮಹೇಶ್ವರ ರಾವ್ ಪ್ರತಿಕ್ರಿಯಿಸಿದರು.

ಪ್ರಯಾಣದ ದರ ಅಂದರೆ ಎಲ್ಲಾ ವೆಚ್ಚಗಳನ್ನು ಸೇರಿಸಿಯೇ ಇರುತ್ತದೆ. ಸಾಲವನ್ನು ಕೂಡ ಪ್ರಯಾಣಿಕರ ಸಂಚಾರಕ್ಕಾಗಿಯೇ ಮಾಡಲಾಗಿರುತ್ತದೆ. ಇನ್ನು ಐದು ವರ್ಷದಲ್ಲಿ 10,422 ಕೋಟಿ ಸಾಲ ಮರುಪಾವತಿ ಮಾಡಬೇಕಿದೆ ಎಂದರು.



## ಕೈಗಾ ಅಣು ವಿದ್ಯುತ್ ಸ್ಥಾವರದ 6ನೇ ಘಟಕ 2031ಕ್ಕೆ ಕಾರ್ಯಾರಂಭ

• ಉದಯವಾಹಿನಿ, ನವದೆಹಲಿ



ಉತ್ತರ ಕನ್ನಡ ಜಿಲ್ಲೆಯ ಕೈಗಾ ಅಣು ವಿದ್ಯುತ್ ಸ್ಥಾವರದ ಐದು ಹಾಗೂ ಆರನೇ ಘಟಕ ನಿರ್ಮಾಣದ ಗುತ್ತಿಗೆಯನ್ನು ಮೇಘಾ ಎಂಜಿನಿಯರಿಂಗ್ ಮತ್ತು ಇಸ್ಫ್ರಾಸ್ಟ್ರಕ್ಚರ್ ಲಿಮಿಟೆಡ್‌ಗೆ ವಹಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಕಾಂಗ್ರೆಸ್ ಸದಸ್ಯ ಜಿ.ಸಿ.ಚಂದ್ರಶೇಖರ್ ಗುರುವಾರ ಕೇಳಿದ ಪ್ರಶ್ನೆಗೆ ಸಚಿವ ಡಾ.ಜಿತೇಂದ್ರ ಸಿಂಗ್ ಉತ್ತರಿಸಿ, 'ಐದು ಹಾಗೂ ಆರನೇ ಘಟಕ ನಿರ್ಮಾಣಕ್ಕೆ 21,000 ಕೋಟಿ ವೆಚ್ಚವಾಗಲಿದ್ದು, 2030-31ರ ವೇಳೆಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ' ಎಂದರು.

ಇಲ್ಲಿ ತಲಾ 700 ಮೆಗಾವಾಟ್ ಸಾಮರ್ಥ್ಯದ ಎರಡು ಘಟಕಗಳ ಸ್ಥಾಪನೆಗೆ ಅಣುಶಕ್ತಿ ನಿಯಂತ್ರಣ ಮಂಡಳಿಯು ಅನುಮತಿ ನೀಡಿದೆ. ಕೈಗಾ ಘಟಕದ ವಿಸ್ತರಣೆಗೆ ಕೇಂದ್ರ ಸಚಿವ ಸಂಪುಟವು 2017ರಲ್ಲಿ ಅನುಮೋದನೆ ನೀಡಿದೆ. ಈ ಘಟಕಗಳ ನಿರ್ಮಾಣ ಪೂರ್ಣಗೊಂಡ ಬಳಿಕ ಕೈಗಾದಲ್ಲಿ ಒಟ್ಟು 2,280 ಮೆಗಾವಾಟ್ ವಿದ್ಯುತ್ ಉತ್ಪಾದನೆಯಾಗಲಿದೆ. ಪ್ರಸ್ತುತ ತಲಾ 220 ಮೆಗಾವಾಟ್ ಸಾಮರ್ಥ್ಯದ ನಾಲ್ಕು ಘಟಕಗಳು ಕಾರ್ಯ ನಿರ್ವಹಿಸುತ್ತಿದ್ದು, 880 ಮೆಗಾವಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ. ವಿದ್ಯುತ್ ಸಚಿವಾಲಯದ ಮಾನದಂಡಗಳ ಪ್ರಕಾರ, ಕರ್ನಾಟಕವು ಈ ಯೋಜನೆಯಿಂದ 700 ಮೆಗಾವ್ಯಾಟ್ ಪಾಲನ್ನು ಮತ್ತು 210 ಮೆಗಾವ್ಯಾಟ್‌ನ ಹಂಚಿಕೆಯಾಗದ ಕೋಟಾದಲ್ಲಿ ಒಂದು ಪಾಲು ಪಡೆಯಲಿದೆ ಎಂದು ಅವರು ವಿವರ ನೀಡಿದರು.

## ಈ ಕೆವೈಸಿಗಾಗಿ ಪಡಿತರ ವಿತರಕರನ್ನು ಒತ್ತಾಯಿಸುವುದು ಸರಿಯಲ್ಲ: ಕೃಷ್ಣಪ್ಪ

• ಉದಯವಾಹಿನಿ ಬೆಂಗಳೂರು



**ಸರ್ಕಾರವೇ ಸೂಕ್ತ ಕ್ರಮ ಕೈಗೊಳ್ಳಲಿ**

ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಡಿತರ ವಿತರಕರಿಗೆ ಪಡಿತರ ಕಾರ್ಡುದಾರರ ಈ ಕೆ ವೈ ಸಿ ಯನ್ನು ಕಲೆಹಾಕುವಂತೆ ಸರ್ಕಾರದ ಹಿರಿಯ ಅಧಿಕಾರಿಗಳು ಒತ್ತಾಯ ಮಾಡುತ್ತಿರುವುದು ಸರಿಯಲ್ಲ. ಈ ಹಿಂದೆ 2017ನೇ ಸಾಲಿನಲ್ಲಿ ಸರ್ಕಾರದ ನಿರ್ದೇಶನದಂತೆ ಪಡಿತರ ವಿತರಕರು ರಾಜ್ಯದಲ್ಲಿರುವ ಪಡಿತರ ಕಾಡುದಾರರ ಶೇಕಡ 95 ರಷ್ಟು ಈ ಕೆ ವೈಸಿ ಯನ್ನು ಪೂರ್ಣಗೊಳಿಸಿದ್ದು, ಇದರ ಹಣವನ್ನೇ ಇದುವರೆಗೂ ಸಹ ಸರ್ಕಾರ ಪಡಿತರ ವಿತರಕರಿಗೆ ಬಿಡುಗಡೆ ಮಾಡಿರುವುದಿಲ್ಲ. ಪಡಿತರ ಕಾರ್ಡುದಾರರು ಈ ಕೆ ವೈಸಿ ಮಾಡಿಕೊಳ್ಳದೆ ಇದ್ದಲ್ಲಿ, ಅಂಥವರ ಪಡಿತರ ವಿತರಣೆಗೆ ತಡೆಹಿಡಿದು ಸರ್ಕಾರವೇ ಸೂಕ್ತ ಕ್ರಮ ಕೈಗೊಳ್ಳಬೇಕು. ಇದನ್ನು ಬಿಟ್ಟು ಪಡಿತರ ಕಾರ್ಡುದಾರರಿಗೆ ಹೊಣೆ ಮಾಡುವುದು ಸರಿಯಲ್ಲ ಎಂದು ಕರ್ನಾಟಕ ರಾಜ್ಯ ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯ ಅಧ್ಯಕ್ಷ ಕೃಷ್ಣಪ್ಪ ಹೇಳಿದ್ದಾರೆ.

ಸರ್ಕಾರ ಈ ಹಿಂದೆ ಪಡಿತರ ಕಾರ್ಡುದಾರರಿಗೆ ದಿನಬಳಕೆ ವಸ್ತುಗಳಾದ ಉಪ್ಪು ಸೋಪು ತಾಳೆ ಎಣ್ಣೆ ಸೇರಿದಂತೆ ಇನ್ನಿತರ ಪದಾರ್ಥಗಳನ್ನು ಮಾರಾಟ ಮಾಡಬಹುದು ಎಂದು ಈ ಹಿಂದೆ ನಿರ್ದೇಶನ ನೀಡಲಾಗಿತ್ತು. ಈಗ ಕೆಲವು ಜಿಲ್ಲೆಗಳಲ್ಲಿ ಅಧಿಕಾರಿಗಳು ನ್ಯಾಯಬೆಲೆ ಅಂಗಡಿಗಳಲ್ಲಿ ಇನ್ನಿತರ ವಸ್ತುಗಳನ್ನು ಮಾರಾಟ ಮಾಡಬಾರದೆಂದು ಒತ್ತಾಯ ಮಾಡುತ್ತಿದ್ದಾರೆಂದು ರಾಜ್ಯ ಪಡಿತರ ವಿತರಕರ ಸಂಘಕ್ಕೆ ಕೆಲವು ಜಿಲ್ಲೆಗಳ ನ್ಯಾಯಬೆಲೆ ಅಂಗಡಿ ಮಾಲೀಕರು ದೂರು ನೀಡಿದ್ದು, ಅಧಿಕಾರಿಗಳ ಈ ವರ್ತನೆ ಸರಿಯಲ್ಲ. ಈ ಹಿಂದೆ ಸರ್ಕಾರ ನೀಡಿದ ನಿರ್ದೇಶನವನ್ನೇ ಮುಂದುವರಿಸಿ ಪಡಿತರ ವಿತರಕರು ದಿನಬಳಕೆ ವಸ್ತುಗಳನ್ನು ಮಾರಾಟ ಮಾಡಿ, ತಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಿಕೊಳ್ಳಲು ಅವಕಾಶ ಕಲ್ಪಿಸಬೇಕೆಂದು ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷ ಕೃಷ್ಣಪ್ಪ ಒತ್ತಾಯಿಸಿದ್ದಾರೆ.

# ಅನಾರೋಗ್ಯದ ನಡುವೆಯೂ ಅಧಿವೇಶನದಲ್ಲಿ ಪಾಲ್ಗೊಂಡ ಎಚ್‌ಡಿ ದೇವೇಗೌಡ!

● ಕೃಷಿ ಉತ್ಪನ್ನಗಳಿಗೆ ನಾವು ಹೆಚ್ಚು ಬೆಂಬಲ ನೀಡುವುದನ್ನು ನಾವು ಮುಂದುವರಿಸಬೇಕು ● ಮಖಾನಾ ಮಂಡಳಿ ರಚನೆಗೆ ಸ್ವಾಗತ

• ಉದಯವಾಹಿನಿ, ಬೆಂಗಳೂರು

ನವದೆಹಲಿ: ಅನಾರೋಗ್ಯದ ನಡುವೆಯೂ ರಾಜ್ಯಸಭೆಯಲ್ಲಿ ಗುರುವಾರ ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡಿದ್ದ ಮಾಜಿ ಪ್ರಧಾನಿಗಳಾದ ಎಚ್‌ಡಿ ದೇವೇಗೌಡರು ಕರ್ನಾಟಕದ 3 ಬೆಳೆಗೆ ಮಂಡಳಿ ರಚಿಸಲು ಒತ್ತಾಯ ಮಾಡಿದರು.

ಕೃಷಿ ಉತ್ಪನ್ನಗಳಿಗೆ ನಾವು ಹೆಚ್ಚು ಬೆಂಬಲ ನೀಡುವುದನ್ನು ನಾವು ಮುಂದುವರಿಸಬೇಕು. ಬಿಹಾರದಲ್ಲಿ ಮಖಾನಾ ಮಂಡಳಿ ರಚನೆ ಮಾಡಿರುವುದನ್ನು ನಾನು ಸ್ವಾಗತ ಮಾಡುತ್ತೇನೆ ಎಂದ ದೇವೇಗೌಡರು, ಅದೇ ರೀತಿ ಹಲಸಿನ ಹಣ್ಣು, ನೇರಳೆ, ಹುಣಸೆಹಣ್ಣು ಮಂಡಳಿ ರಚಿಸಬೇಕು ಎಂದು ಒತ್ತಾಯ ಮಾಡಿದರು.

**ಕನಿಷ್ಠ ಬಂಡವಾಳದಿಂದ ನೈಸರ್ಗಿಕ ಬೆಳೆ**

ಅತಿ ಕಡಿಮೆ ಬಂಡವಾಳದಿಂದ ಮಖಾನಾ ಬೆಳೆಯಲಾಗುತ್ತಿದೆ. ಇದರಿಂದ ರೈತರಿಗೆ ಹೆಚ್ಚು ಅನುಕೂಲ ಆಗುತ್ತಿದೆ. ಮಂಡಳಿ ರಚನೆಯಿಂದ ಮತ್ತಷ್ಟು ಅನುಕೂಲ ಆಗುತ್ತದೆ. ಹೀಗಿದ್ದ ಮೇಲೆ ಕನಿಷ್ಠ ಬಂಡವಾಳದಿಂದ ನೈಸರ್ಗಿಕವಾಗಿ ಬೆಳೆಯಲಾಗುವ ಹಲಸಿನ ಹಣ್ಣು, ನೇರಳೆ ಹಾಗೂ ಹುಣಸೆಹಣ್ಣು ಮಂಡಳಿಯನ್ನು ರಚಿಸಬಾರದೇಕೆ ಎಂದು ಮಾಜಿ ಪ್ರಧಾನಿಗಳು ಸಲಹೆ ನೀಡಿದರು.

**ನಗರಗಳಿಗೆ ವಲಸೆ ಬಗ್ಗೆ ಕಳವಳ:** ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗದಿಂದ ಯುವಜನರು ನಗರಗಳಿಗೆ ವಲಸೆ ಬರುವವರ ಪ್ರಮಾಣ ಹೆಚ್ಚುತ್ತಲೇ ಇದೆ ಎಂದು ದೇವೇಗೌಡರು ಕಳವಳ ವ್ಯಕ್ತಪಡಿಸಿದರು.

ಬೆಂಗಳೂರಿನ ಜನಸಂಖ್ಯೆ ಈಗ 1.4 ಕೋಟಿಗೆ ಮುಟ್ಟಿದೆ. ಎಲ್ಲಾ ಯುವಕರು ತಮ್ಮ ವಿದ್ಯಾಭ್ಯಾಸ ಮುಗಿದ ತಕ್ಷಣ ಹಳ್ಳಿಗಳನ್ನು ತೊರೆದು ನಗರಗಳಿಗೆ ಬಂದು ಸೇರುತ್ತಿದ್ದಾರೆ. ಇದು ಜೀವನೋಪಾಯದ ಸಮತೋಲನವನ್ನು ತಪ್ಪಿಸುತ್ತಿದೆ. ಯುವಕರಿಗೆ ತಮ್ಮ ಪ್ರದೇಶಗಳಿಗಳಲ್ಲಿಯೇ ಹೆಚ್ಚೆಚ್ಚು ಉದ್ಯೋಗವಕಾಶ ಕಲ್ಪಿಸುವ ಅಗತ್ಯವಿದೆ ಎಂದು ಮಾಜಿ ಪ್ರಧಾನಿಗಳು ಸಲಹೆ ನೀಡಿದರು. ಸಮತೋಲಿತ ಜೀವನೋಪಾಯ ಸೃಷ್ಟಿ ಮಾಡುವ ನಿಟ್ಟಿನಲ್ಲಿ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಗಾತ್ರದ ಉದ್ಯಮಗಳನ್ನು ಬೆಂಬಲಿಸಲು ಹೆಚ್ಚು ಸೂಕ್ತವಾದ ಉಪಕ್ರಮಗಳನ್ನು ಕೈಗೊಳ್ಳಬೇಕಾದ ಅಗತ್ಯವನ್ನು ಮಾಜಿ ಪ್ರಧಾನಿಗಳು ಒತ್ತಿ ಹೇಳಿದರು. ಹಣಕಾಸು ಬೆಂಬಲ ಪಡೆಯುವಲ್ಲಿ ಅತಿಸಣ್ಣ, ಸಣ್ಣ ಕೈಗಾರಿಕೆಗಳು ಮಧ್ಯಮ ಗಾತ್ರದ ಕೈಗಾರಿಕೆಗಳೊಂದಿಗೆ ಸ್ಪರ್ಧಿಸಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಈ ಉದ್ದೇಶಕ್ಕಾಗಿ ಪ್ರತ್ಯೇಕ ನೀತಿ, ಕಾರ್ಯಕ್ರಮಗಳನ್ನು ರೂಪಿಸುವ ಅಗತ್ಯ ತುಂಬಾ ಇದೆ ಎಂದು ಮಾಜಿ ಪ್ರಧಾನಿಗಳು ಹೇಳಿದರು.



### ಬೆಂಗಳೂರು ನೀರಿನ ಸಮಸ್ಯೆ ; ಪುನಾ ಪ್ರಸ್ತಾಪಿಸಿದ ದೇವೇಗೌಡರು

ರಾಜ್ಯಸಭೆಯಲ್ಲಿ ಮತ್ತೊಮ್ಮೆ ಬೆಂಗಳೂರಿನ ಕುಡಿಯುವ ನೀರಿನ ಬವಣೆಯ ಬಗ್ಗೆ ಗಮನ ಸೆಳೆದರು ಮಾಜಿ ಪ್ರಧಾನಿಗಳು. ಬೆಂಗಳೂರಿನಲ್ಲಿ ನೀರಿನ ಟ್ಯಾಂಕರ್‌ಗಳು ಬಡ ನಿವಾಸಿಗಳನ್ನು ಶೋಷಿಸುತ್ತಿವೆ ಎಂಬ ಅಂಶವನ್ನು ಸದನದ ಗಮನಕ್ಕೆ ತಂದ ಅವರು; ಹಣಕಾಸು ಸಚಿವರು ಕುಡಿಯುವ ನೀರಿನ ಯೋಜನೆಗಳಿಗೆ ರೂ.1,400 ಕೋಟಿ ಮಂಜೂರು ಮಾಡಿದ್ದಾರೆ. ಆದರೆ ದೀರ್ಘಾವಧಿಯ ನೀರಿನ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಗೋದಾವರಿ-ಕಾವೇರಿ ಜೋಡಣೆಗೆ ಆದ್ಯತೆ ನೀಡಬೇಕು ಎಂದು ಅವರು ಒತ್ತಿ ಹೇಳಿದರು. ನದಿ ಜಲ ಸಂಪನ್ಮೂಲ ಸದ್ವಿಯೋಗಕ್ಕೆ ಎಲ್ಲಾ ಪರಿಣಾಮಕಾರಿ ಕ್ರಮಗಳ ಅಗತ್ಯವಿದೆ. ಅದಕ್ಕೆ ದೀರ್ಘಾವಧಿ ಕಾರ್ಯಕ್ರಮಗಳ ಅನುಷ್ಠಾನ ಅಗತ್ಯವಿದೆ. ಈ ನಿಟ್ಟಿನಲ್ಲಿ ಗೋದಾವರಿ-ಕಾವೇರಿ ನದಿ ಜೋಡಣೆ ಯೋಜನೆಗೆ ಆದ್ಯತೆ ನೀಡಬೇಕು ಎಂದು ಅವರು ಹೇಳಿದರು.

**ರೈತರ ಸಿಬಿಲ್ ಸ್ಕೋರ್ ಪರಿಗಣಿಸಬೇಡಿ:** ಅತಿ ಸಣ್ಣ, ಸಣ್ಣ ಕೈಗಾರಿಕೆಗಳಿಗೆ ಸಾಲದ ಅನುಮೋದನೆ ನೀಡುವಾಗ ಸಿಬಿಲ್ ಸ್ಕೋರ್ ಮಾನದಂಡವನ್ನು ಪರಿಗಣಿಸಬಾರದು. ಬಡ್ಡಿದರಗಳನ್ನು ಶೇ.7 ರಿಂದ 8ಕ್ಕೆ ಇಳಿಸಬೇಕು ಮತ್ತು ಆರಂಭಿಕ ಸಾಲ ಮರುಪಾವತಿಗಾಗಿ ಸ್ವತ್ತುಗಳ ಮರುಸ್ವಾಧೀನ ದಂಡ ಪ್ರಯೋಗವನ್ನು ಕೈಬಿಡಬೇಕು ಎಂದು ದೇವೇಗೌಡರು ಸರಕಾರವನ್ನು ಒತ್ತಾಯಿಸಿದರು. ತಮ್ಮ ಭಾಷಣದ ಕೊನೆಯಲ್ಲಿ ದೀರ್ಘಾವಧಿಯ ಆರ್ಥಿಕ ಸ್ಥಿರತೆಯತ್ತ ಗಮನ ಹರಿಸುವಂತೆ ಸರಕಾರಕ್ಕೆ ಸಲಹೆ ನೀಡಿದರಲ್ಲದೆ; ನಾವು ಅಲ್ಪಾವಧಿಯ ಜನಪರ ಕ್ರಮಗಳನ್ನು ಮೀರಿ ಮುನ್ನಡೆಯಬೇಕು ಮತ್ತು ಭವಿಷ್ಯದ ಪೀಳಿಗೆಗೆ ಆಸ್ತಿಗಳನ್ನು ನಿರ್ಮಿಸಬೇಕು ಎಂದರು. ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ, ಸಣ್ಣ ಅತಿ ಸಣ್ಣ ಕೈಗಾರಿಕೆಗಳಿಗೆ ಬೆಂಬಲ ಹಾಗೂ ಅತ್ಯಂತ ಪ್ರಮುಖವಾದ ನೀರಿನ ಭದ್ರತೆಗೆ ಸರಕಾರದ ಕಡೆಯಿಂದ ತಕ್ಷಣದ ಕ್ರಮಗಳು ಆಗಬೇಕಿದೆ ಎಂದು ಅವರು ಪ್ರತಿಪಾದಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,705 /Gram24ct ₹7,980/Gram22ct | ಬೆಳ್ಳಿ: ₹99.50/Gram

# ಗಡಿನಾಡಿನಲ್ಲಿ ಕನ್ನಡಕ್ಕೆ ಪ್ರಥಮ ಪ್ರಾಶಸ್ತ್ಯ ನೀಡಲು ಆಗ್ರಹ

## ● ಕಳೆದ ಏಳು ವರ್ಷಗಳಿಂದ ಕೋಲಾರ ಜಿಲ್ಲಾಡಳಿತ ಅಭಿವೃದ್ಧಿ ಪ್ರಾಧಿಕಾರದ ಸಲಹೆಯನ್ನು ಕಾರ್ಯಗತ ಮಾಡುವಲ್ಲಿ ನಿರ್ಲಕ್ಷ್ಯ

• ಉದಯವಾಹಿನಿ ಕೆಜಿಎಫ್

ಗಡಿನಾಡು ಕೆಜಿಎಫ್ ಮತ್ತು ಬಂಗಾರಪೇಟೆಯಲ್ಲಿ ಕನ್ನಡಕ್ಕೆ ಪ್ರಥಮ ಪ್ರಾಶಸ್ತ್ಯ ನೀಡಲು ತಾಲ್ಲೂಕು ಆಡಳಿತವು ಕ್ರಮ ಕೈಗೊಳ್ಳುವಂತೆ ಕನ್ನಡ ಶಕ್ತಿ ಕೇಂದ್ರದ ಜಿಲ್ಲಾಧ್ಯಕ್ಷ ಬಾ.ಹಾ.ಶೇಖರಪ್ಪ ಅವರು ಆಗ್ರಹಿಸಿದ್ದಾರೆ.

ಅವರು ಶಕ್ತಿ ಕೇಂದ್ರದ ಪದಾಧಿಕಾರಿಗಳೊಂದಿಗೆ ಬಂಗಾರಪೇಟೆ ಮತ್ತು ಕೆಜಿಎಫ್ ತಾಲ್ಲೂಕು ಕಛೇರಿಗಳಿಗೆ ಭೇಟಿ ನೀಡಿ, ಮನವಿ ಪತ್ರಗಳನ್ನು ಸಲ್ಲಿಸಿದರು. ಕೋಲಾರಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಭೇಟಿ ನೀಡಿ, ಪ್ರಗತಿ ಪರಿಶೀಲನೆ ನಡೆಸಲಿರುವರು.

ಕರ್ನಾಟಕದ ಅಧಿಕೃತ ಆಡಳಿತ ಭಾಷೆಯಾದ ಕನ್ನಡವನ್ನು ಸಚಿವಾಲಯದಿಂದ ಹಿಡಿದು ಗ್ರಾಮ ಪಂಚಾಯಿತಿಯವರೆಗೆ ಆಡಳಿತದಲ್ಲಿ ಕನ್ನಡವನ್ನು ಬಳಸುವ ಬಗ್ಗೆ ಕರ್ನಾಟಕ ಸರ್ಕಾರದ ಅಧೀನ ಕಾರ್ಯದರ್ಶಿಗಳು 2018ರ ಮಾರ್ಚ್ 24 ರಂದು ಕೋಲಾರ ಜಿಲ್ಲಾಧಿಕಾರಿಗಳ ಕಚೇರಿಗೆ ಆದೇಶ ನೀಡಿದ್ದರು. ಆನಂತರ 2020ರ ನವೆಂಬರ್ 01 ರಿಂದ 2021ರ ಅಕ್ಟೋಬರ್ 31ರ ವರೆಗೆ ಕನ್ನಡ ಕಾಯಕ ವರ್ಷಾಚರಣೆ ಸಂದರ್ಭದಲ್ಲಿ ವರ್ಷವಿಡಿ ರಾಜ್ಯದಾದ್ಯಂತ ಕನ್ನಡವನ್ನು ಉಳಿಸಿ ಬೆಳೆಸುವ ದೃಷ್ಟಿಯಿಂದ ಆಡಳಿತದ ಎಲ್ಲಾ ಹಂತಗಳಲ್ಲಿ ಕರ್ನಾಟಕ ಸರ್ಕಾರದ ಆದೇಶವನ್ನು ಕಾರ್ಯಗತ ಮಾಡಲು ಆದೇಶ ನೀಡಿದ್ದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮೂಲಕ ನೀಡಿದ ಆದೇಶಕ್ಕೆ ಯಾವುದೇ ಮಾತು ನೀಡಿಲ್ಲ. ಕಳೆದ ಏಳು ವರ್ಷಗಳಿಂದ ಕೋಲಾರ ಜಿಲ್ಲಾಡಳಿತ ಅಭಿವೃದ್ಧಿ ಪ್ರಾಧಿಕಾರದ ಸಲಹೆಯನ್ನು ಕಾರ್ಯಗತ ಮಾಡುವಲ್ಲಿ ನಿರ್ಲಕ್ಷ್ಯ ಧೋರಣೆ ತೋರಿಸಿದೆ. ಅದೇ ರೀತಿ ಕೆಜಿಎಫ್ ತಾಲ್ಲೂಕು ತಹಶೀಲ್ದಾರ್ ಕಚೇರಿಗೆ ಭೇಟಿ ನೀಡಿ ಅವರ ಅನುಪಸ್ಥಿತಿಯಲ್ಲಿ ಮಂಜುನಾಥ್ ಶಿರಸ್ತೇದಾರ್ ಅವರಿಗೆ ಮನವಿಯನ್ನು ನೀಡಲಾಗಿದೆ. ಕೆಜಿಎಫ್ ವ್ಯಾಪ್ತಿಯಲ್ಲಿ ನಗರಸಭೆ ಇದ್ದು ನಗರಸಭೆಯ ಪೌರಾಯುಕ್ತರನ್ನು ಮೂಲಕ ನಗರದಾದ್ಯಂತ ಇರುವ ಅಂಗಡಿ ಮುಂಗಟ್ಟುಗಳ ನಾಮಫಲಕಗಳಲ್ಲಿ ಶೇಕಡ 60 ಇರುವಂತೆ ನೋಡಿಕೊಳ್ಳಬೇಕು.

ಈ ನಿಯಮ ಪಾಲಿಸದೆ ಇರುವವರಿಗೆ ನೋಟಿಸ್ ಜಾರಿ ಮಾಡಿ ತಕ್ಷಣ ಬದಲಾವಣೆ ಮಾಡಲು ತಿಳಿಸಬೇಕಾಗಿದೆ. ಅದು ಅಲ್ಲದೆ ನಗರದಾದ್ಯಂತ ಜಾಹೀರಾತು ಮತ್ತು ಇತರೆ ಫ್ಲೆಕ್ಸ್ ಬ್ಯಾನರ್‌ಗಳಲ್ಲಿ ಕನ್ನಡವನ್ನು ಪ್ರಧಾನವಾಗಿ ಬಳಸದೆ ಇರುವುದು ಕಂಡುಬಂದಿದೆ.

ಈ ವಿಚಾರವಾಗಿ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲು ಕೋರಿಕೊಳ್ಳಲಾಗಿದೆ. ವಿಷಯವನ್ನು ಉಪ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ ಕೋಲಾರ ಅವರಿಗೂ ಮನವಿ ನೀಡಲಾಗಿದೆ. ಹಲವಾರು ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇದೆ. ಶಾಲೆಯ ಮೇಲ್ಛಾವಣಿ ಸೋರುತ್ತದೆ. ಶೌಚಾಲಯ ಕೊರತೆ ಇದೆ. ಬಿಸಿ ಊಟದ ಮನೆಯ ಅವಶ್ಯಕತೆ ಇದೆ. ಕನ್ನಡ ಶಕ್ತಿ ಕೇಂದ್ರದ ಜಿಲ್ಲಾಧ್ಯಕ್ಷರಾದ ಬಾ.ಹಾ ಶೇಖರಪ್ಪ, ಉಪಾಧ್ಯಕ್ಷರುಗಳಾದ ಬಿ.ಜೆ ಗೋಣಿ, ಈ .ನಾರಾಯಣಗೌಡ, ಪ್ರಧಾನ ಕಾರ್ಯದರ್ಶಿಯಾದ ಆರ್.ಎ. ಗುರುದತ್ ಖಜಾಂಜಿಯಾದ ಶಿವಶರಣಪ್ಪ ಕಲ್ಯಾಣಕರ್ ರವರ ನಿಯೋಗ ಕೆಜಿಎಫ್ ಮತ್ತು ಬಂಗಾರಪೇಟೆ ತಾಲ್ಲೂಕು ಕಚೇರಿಗೆ ಭೇಟಿ ನೀಡಿತು.



☛ ಉದಯವಾಹಿನಿ ಚಿತ್ರ

### ಕನ್ನಡ ಅನುಷ್ಠಾನಕ್ಕೆ ನಿರ್ಲಕ್ಷ್ಯ

**ಅದೇ ರೀತಿ ಸಿ.ಬಿ.ಎಸ್.ಇ. ಹಾಗೂ ಐ.ಸಿ.ಎಸ್.ಇ. ಶಾಲೆಗಳಲ್ಲಿ ಕೂಡ ಕನ್ನಡ ಅನುಷ್ಠಾನಕ್ಕೆ ನಿರ್ಲಕ್ಷ್ಯ ತೋರುವುದು ಸರಿಯಿಲ್ಲ. ಈ ವಿಚಾರವನ್ನು ಕೆಜಿಎಫ್ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕ್ರಮ ಕೈಗೊಳ್ಳಬೇಕಾಗಿದೆ. ಎಲ್ಲಾ ವಿಚಾರವಾಗಿ ಕೆಜಿಎಫ್ ತಾಲ್ಲೂಕಿನ ಬಡಮಾಕನಹಳ್ಳಿ ಹಾಗೂ ಟಿ ಗೊಲ್ಲಹಳ್ಳಿ ಶಾಲೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಹಲವಾರು ಕುಂದುಕೊರತೆಗಳು ಕಂಡುಬಂದಿದೆ.**

### ಕನ್ನಡ ವಾತಾವರಣಕ್ಕೆ ಹಲವಾರು ಅಡ್ಡಿ

**ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜಾಗೃತಿ ಸಭೆ ಏರ್ಪಡಿಸಲಾಗಿದೆ. ಸಭೆಯಲ್ಲಿ ತೆಗೆದುಕೊಳ್ಳುವ ನಿರ್ಣಯಗಳನ್ನು ಕಾರ್ಯಗತ ಮಾಡಲು ತಕ್ಷಣ ಎಲ್ಲಾ ಇಲಾಖೆಗಳ ಸಭೆಯನ್ನು ಕರೆದು ಮುಂದಿನ ಒಂದು ತಿಂಗಳ ಒಳಗೆ ಕಾರ್ಯರೂಪಕ್ಕೆ ಬರುವಂತೆ ಕ್ರಮ ಕೈಗೊಳ್ಳಲು ಈ ಮೂಲಕ ಕನ್ನಡ ಶಕ್ತಿ ಕೇಂದ್ರ, ಜಿಲ್ಲಾ ಆಡಳಿತವನ್ನು ಒತ್ತಾಯಿಸುತ್ತಿದೆ. ಕಳೆದ ಏಳು ವರ್ಷಗಳಿಂದ ಯಾವುದೇ ಒಂದು ಸಭೆಯನ್ನು ಜಿಲ್ಲಾಡಳಿತ ಕರೆಯದಿರುವ ಕಾರಣ, ಕನ್ನಡ ವಾತಾವರಣಕ್ಕೆ ಹಲವಾರು ಅಡ್ಡಿ ಆತಂಕಗಳು ನಿರ್ಮಾಣವಾಗಿವೆ. ನಮ್ಮ ಕನ್ನಡ ಶಕ್ತಿ ಕೇಂದ್ರವು ಬಂಗಾರಪೇಟೆ ತಾಲ್ಲೂಕು ತಹಶೀಲ್ದಾರ್ ಕಚೇರಿಗೆ ಭೇಟಿ ನೀಡಿ ಮನವಿ ಒಂದನ್ನು ಇಂದು ಅವರ ಅನುಪಸ್ಥಿತಿಯಲ್ಲಿ ಗಾಯಿತ್ರಿ ಗ್ರೇಡ್-2 ತಹಶೀಲ್ದಾರ್ ಬಂಗಾರಪೇಟೆ ಅವರಿಗೆ ನೀಡಲಾಗಿದೆ.**



---

# ಪ್ಲಾಸ್ಟಿಕ್ ಮುಕ್ತ ಸ್ವಚ್ಛ ಗ್ರಾಮಗಳನ್ನಾಗಿಸಲು ಕರೆ

• ಉದಯವಾಹಿನಿ ಕೋಲಾರ

ಇತ್ತೀಚಿಗೆ ಪ್ಲಾಸ್ಟಿಕ್ ಬಳಕೆ ಹೆಚ್ಚಾಗುತ್ತಿದೆ ಗ್ರಾಮೀಣ ಭಾಗದಲ್ಲಿ ಮಾಲಿನ್ಯ ಹೆಚ್ಚು ಕಂಡು ಬರುತ್ತಿದ್ದು ಅದನ್ನು ನಿಯಂತ್ರಣ ಮಾಡುವ ಕೆಲಸ ಮಹಿಳೆಯರದ್ದು ಗ್ರಾಮ ಪಂಚಾಯತಿಯಿಂದ ಕಸ ಸಂಗ್ರಹ ಮಾಡಲು ಬಂದಾಗ ಮೂಲದಲ್ಲಿ ಕಸವನ್ನು ವಿಂಗಡಣೆ ಮಾಡಿ ನಮ್ಮ ವಾಹನಕ್ಕೆ ನೀಡಬೇಕು ಈ ತರಬೇತಿಯಲ್ಲಿ ಈ ಕುರಿತಂತೆ ವಿಷಯವನ್ನು ತಿಳಿದುಕೊಳ್ಳಬೇಕು ಎಂದು ಐತರಾಸನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ವಿನೋದಮ್ಮ ತಿಳಿಸಿದರು.

ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ ಬೆಂಗಳೂರು ಬುದ್ಧ ರೂರಲ್ ಡೆವಲಪ್ಮೆಂಟ್ ಸೊಸೈಟಿ ಕೋಲಾರ ಇವರ ಸಹಯೋಗದೊಂದಿಗೆ ಕೋಲಾರ ತಾಲ್ಲೂಕು ಐತರಾಸನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೆಣ್ಣಂಗುರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕ್ಷೇತ್ರ ಮಟ್ಟದಲ್ಲಿ ಮಹಿಳಾ ಸ್ವಸಹಾಯ ಸಂಘದ ಪ್ರತಿನಿಧಿಗಳಿಗೆ ಹಾಗೂ ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳಿಗೆ ಹಮ್ಮಿಕೊಂಡಿದ್ದ ಅರಿವು ಕಾರ್ಯಕ್ರಮದಲ್ಲಿ ನವೀಕರಿಸಬಹುದಾದ ಇಂಧನದ ಮೂಲಗಳು ಘನ ತ್ಯಾಜ್ಯ ವಸ್ತುಗಳ ನಿರ್ವಹಣೆ ಮತ್ತು ಮಳೆ ನೀರು ಕೊಯ್ಲು ಕುರಿತು ಹಮ್ಮಿಕೊಂಡಿದ್ದ ಅರಿವು



☛ ಉದಯವಾಹಿನಿ ಚಿತ್ರ

ಕಾರ್ಯಕ್ರಮದಲ್ಲಿ ಮಾತನಾಡಿದರು ವೇದಿಕೆಯಲ್ಲಿ ಇಂದಿರಾಗಾಂಧಿ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟದ ಅಧ್ಯಕ್ಷರಾದ ವರಲಕ್ಷ್ಮಿ, ಗ್ರಾಮ ಪಂಚಾಯತಿ ಸದಸ್ಯರಾದ ಸರೋಜಮ್ಮ ಉಪಸ್ಥಿತಿ ಇದ್ದರು.

ನವೀಕರಿಸಬಹುದಾದ ಇಂಧನದ ಮೂಲಗಳು ಕುರಿತು ಶಾಲಾ ಮುಖ್ಯ ಶಿಕ್ಷಕರ ಮುನಿಸ್ವಾಮಿ ರವರು ಗಣ ತ್ಯಾಜ್ಯ ನಿರ್ವಹಣೆ ಕುರಿತು ಚೌಡಪ್ಪ ಸಂಪನ್ಮೂಲ ವ್ಯಕ್ತಿ ಮಳೆ ನೀರು ಕೊಯ್ಲು ಕುರಿತು ಅಶ್ವಿನಿ ರವರು ಅಧಿವೇಶನಗಳನ್ನು ನಿರ್ವಹಣೆ ಮಾಡಿದರು. ಎಂ ಬಿ ಕೆ ಎಲ್ಲಮ್ಮ ಸ್ವಾಗತ ಕೋರಿದರು ಎಲ್‌ಸಿಆರ್‌ಪಿ ವನಿತಾ ಶ್ರೀ ಪ್ರಾರ್ಥನೆಯನ್ನು ಮಾಡಿದರು ತರಬೇತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮತ್ತು ಸಂಪನ್ಮೂಲ ವ್ಯಕ್ತಿಗಳಾಗಿ ಅಶ್ವಿನಿ ಎಸ್ ಹೆಚ್ ಚೌಡಪ್ಪ ಹಾಗೂ ಶಾಲಾ ಮುಖ್ಯ ಶಿಕ್ಷಣದ ಮುನಿಸ್ವಾಮಿ ರವರು ಭಾಗವಹಿಸಿದ್ದರು.

---

# 3 ದಿನಗಳ ದಕ್ಷಿಣ ಕಾಶಿ ಕುಂಭಮೇಳಕ್ಕೆ ತೆರೆ

• ಉದಯವಾಹಿನಿ ಮೈಸೂರು

ದಕ್ಷಿಣ ಕಾಶಿ, ತಿ.ನರಸೀಪುರದ ತಿರುಮಕೂಡಲಿನ ತ್ರಿವೇಣಿ ಸಂಗಮದ ಪುಣ್ಯಕ್ಷೇತ್ರದಲ್ಲಿ 13ನೇ ಕುಂಭಮೇಳದ ಪ್ರಯುಕ್ತ ಲಕ್ಷಾಂತರ ಭಕ್ತರು ಮಾಘ ಹುಣ್ಣಿಮೆಯ ಪುಣ್ಯಸ್ನಾನ ಮಾಡಿ ಸೂರ್ಯದೇವನಿಗೆ ಅರ್ಘ್ಯ ಅರ್ಪಿಸಿ ಧನ್ಯತಾಭಾವ ಮೆರೆದರು. ಈ ಮೂಲಕ ಮೂರು ದಿನಗಳ ಕುಂಭಮೇಳ ಸಂಪನ್ನವಾಯಿತು.

ಅಗಸ್ತ್ಯೇಶ್ವರ ಸ್ವಾಮಿ ದೇವಸ್ಥಾನದ ಬಳಿಯ ಸ್ನಾನಘಟ್ಟದಲ್ಲಿ, ಶ್ರೀ ಗುಂಜಾ ನರಸಿಂಹ ಸ್ವಾಮಿ ದೇವಸ್ಥಾನದ ಬಳಿಯ ಸ್ನಾನಘಟ್ಟದಲ್ಲಿ, ಭಿಕ್ಷೇಶ್ವರ ಸ್ವಾಮಿ ದೇವಸ್ಥಾನದ ಬಳಿಯ ಸ್ನಾನಘಟ್ಟದಲ್ಲಿ ಭಕ್ತರು ಪುಣ್ಯ ಸ್ನಾನ ಮಾಡಿದರು. ಅಂದಾಜು ಮೂರು ಲಕ್ಷಕ್ಕೂ ಅಧಿಕ ಜನರು ಪುಣ್ಯಸ್ನಾನ ಮಾಡಿ ತಮ್ಮ ಭಕ್ತಿ ಸಮರ್ಪಿಸಿದರು.

ಪುಣ್ಯ ಸ್ನಾನದ ಅಂಗವಾಗಿ ನಸುಕಿನ ಜಾವ ಮೂರು ಗಂಟೆಯಿಂದಲೇ ಭಕ್ತರು ಸ್ನಾನಘಟ್ಟಗಳ ಬಳಿಗೆ ಆಗಮಿಸಿ, ಹೊಳೆಯಲ್ಲಿ ಮಿಂದು, ನದಿ ತಟದಲ್ಲಿ ಪೂಜೆ ಸಲ್ಲಿಸಿ ಬಳಿಕ ಅಗಸ್ತ್ಯೇಶ್ವರ, ಗುಂಜಾ ನರಸಿಂಹ ಸ್ವಾಮಿ. ಭಿಕ್ಷೇಶ್ವರ ಸ್ವಾಮಿ ದೇವಾಲಯಗಳ ದರ್ಶನ ಪಡೆದು,ಮಂಗಳಾರತಿ, ತೀರ್ಥ ಪ್ರಸಾದವನ್ನು ಸ್ವೀಕಾರ ಮಾಡಿದರು.



☛ ಉದಯವಾಹಿನಿ ಚಿತ್ರ

ಹೊತ್ತು ಏರುತ್ತಿದ್ದಂತೆ ಕುಟುಂಬ ಸಮೇತರಾಗಿ ಜನರು ಆಗಮಿಸಿ ತ್ರಿವೇಣಿ ಸಂಗಮದಲ್ಲಿ ಮೂರು ಸಲ ಮುಳುಗಿ ಎದ್ದರು. ನಿರೀಕ್ಷೆಗಿಂತ ಹೆಚ್ಚಿನ ಜನ ಬಂದ ಹಿನ್ನೆಲೆಯಲ್ಲಿ ಎಲ್ಲರಿಗೂ ಸ್ನಾನಘಟ್ಟಗಳಲ್ಲಿ ಒಂದೇ ಕಡೆ ಸ್ನಾನ ಮಾಡಲು ಅವಕಾಶ ಸಿಗಲಿಲ್ಲ. ಇದರಿಂದಾಗಿ ಹಲವಾರು ಭಕ್ತರು ನದಿಪಾತ್ರದಲ್ಲಿ ಎಲ್ಲಿ ಜಾಗ ಸಿಗುತ್ತದೋ ಅಲ್ಲಿ ಸ್ನಾನ ಮಾಡಲು ಶುರು ಮಾಡಿದರು. ಮೂರು ಸ್ನಾನಘಟ್ಟಗಳನ್ನು ಬಿಟ್ಟು ಸುಮಾರು ಏಳೆಂಟು ಕಡೆ ಜನರು ಗುಂಪು-ಗುಂಪಾಗಿ ಜನರು ಸ್ನಾನ ಮಾಡಲು ಶುರು ಮಾಡಿದರು. ಸುರಕ್ಷಿತವಲ್ಲದ ಸ್ಥಳದಲ್ಲಿ ಜನರು ಸ್ನಾನ ಮಾಡಲು ಮುಂದದಾಗ ಪೊಲೀಸರು ಆ ಸ್ಥಳಕ್ಕೆ ಬೋಟಿನಲ್ಲಿ ತೆರಳಿ ಜನರನ್ನು ಅಲ್ಲಿಂದ ವಾಪಸ್ ಕಳುಹಿಸಿದರು.

### ಶುಭ ಮುಹೂರ್ತಕ್ಕೆ ಸಾಕ್ಷಿ

**ಈ ಸಲದ ಕುಂಭಮೇಳದ ಪುಣ್ಯ ಸ್ನಾನಕ್ಕೆ ನಿಗದಿಪಡಿಸಲಾಗಿದ್ದ ಬೆಳಗ್ಗೆ 11ರಿಂದ 11.30 ಮೇಷ ಲಗ್ನ ಹಾಗೂ 1.30ರಿಂದ 2 ಗಂಟೆಯ ವೃಷಭ ಲಗ್ನ ಮುಹೂರ್ತದಲ್ಲಿ ಒಂದೇ ಸಲಕ್ಕೆ ಸಹಸ್ರಾರು ಮಂದಿ ನದಿಯೊಳಗೆ ಇಳಿದು ಪುಣ್ಯಸ್ನಾನ ಮಾಡಿದರು. ಇದರಿಂದಾಗಿ ಸ್ನಾನಘಟ್ಟಗಳಲ್ಲಿ ನೂಕುನುಗ್ಗಲು ಉಂಟಾಯಿತು. ಅಗಸ್ತ್ಯೇಶ್ವರ ದೇವಾಲಯದ ಬಳಿಯಲ್ಲಿ ಮೂರು ಅಡಿ ಆಳದ ನೀರು ಇರುವ ತನಕ ಬ್ಯಾರಿಕೇಡ್ ಅಳವಡಿಸಿ ಸ್ನಾನಕ್ಕೆ ಅವಕಾಶ ಮಾಡಿಕೊಡಲಾಗಿತ್ತು. ಆದರೆ ಜನ ದಟ್ಟಣೆ ಉಂಟಾದ ಹಿನ್ನೆಲೆಯಲ್ಲಿ ಸ್ನಾನ ಮಾಡುತ್ತಿದ್ದವರು ಬ್ಯಾರಿಕೇಡ್‌ಗಳನ್ನು ಕಿತ್ತು ಮುಂದೆ ಸಾಗಲು ಪ್ರಯತ್ನಿಸಿದರು.**

---

# ಗಾಂಜಾ ಸಾಗಿಸುತ್ತಿದ್ದ ವ್ಯಕ್ತಿಯೋರ್ವನ ಬಂಧನ

• ಉದಯವಾಹಿನಿ ಕೊಳ್ಳೇಗಾಲ

ತಾಲ್ಲೂಕಿನ ದೊಡ್ಡಿಂದುವಾಡಿ ಗ್ರಾಮದ ಬಳಿ ಒಣ ಗಾಂಜಾ ಸಾಗಿಸುತ್ತಿದ್ದ ವ್ಯಕ್ತಿಯೋರ್ವನನ್ನು ಪೊಲೀಸರು ಬಂಧಿಸಿದ್ದಾರೆ. ಟಿ ನರಸೀಪುರ ತಾಲೂಕಿನ ಕಲಿಯೂರು ಗ್ರಾಮದ ನಿವಾಸಿ ಹಾಗೂ ಹಾಲಿ ವಾಸ ಹನೂರು ತಾಲ್ಲೂಕಿನ ವಿ ಎಸ್ ದೊಡ್ಡಿಯ ಸಿದ್ದಪ್ಪಾಜಿ ಇವರ ಮಗ ರಾಜೇಶ್ ಅಕ್ರಮವಾಗಿ ಒಣ ಗಾಂಜಾ ಸಾಗಿಸುತ್ತಿದ್ದು ಗ್ರಾಮಾಂತರ ಪೊಲೀಸ್ ಠಾಣೆಯ ಪೊಲೀಸರಿಗೆ ಸಿಕ್ಕಿಬಿದ್ದ ಆರೋಪಿ. ತಾಲ್ಲೂಕಿನ ಕಾಮಗೆರೆಯಿಂದ ಕೊಳ್ಳೇಗಾಲಕ್ಕೆ ತೆರಳುವ ರಸ್ತೆ ದೊಡ್ಡಿಂದುವಾಡಿ ಮಾರ್ಗವಾಗಿ ಅಶೋಕ ಲೈಲ್ಯಾಂಡ್ ವಾಹನದಲ್ಲಿ ಅಕ್ರಮ ಗಾಂಜಾ ಸಾಗಿಸುತ್ತಿರುವ ಖಚಿತ ಮಾಹಿತಿಯ ಆಧಾರದಲ್ಲಿ ಗ್ರಾಮಾಂತರ ಪೊಲೀಸ್ ಠಾಣೆಯ ಪಿಎಸ್‌ಐ ಸುಪ್ರೀತ್ ಮತ್ತು ಡಿ ವೈ ಎಸ್ ಪಿ ಅಪರಾಧಪತ್ತೆದಳದ ಎ.ಎಸ್.ಐ ತಂಗಿ ಉಲ್ಲ ಮತ್ತು ರವಿಕುಮಾರ್ ಗ್ರಾಮಾಂತರ ಪೊಲೀಸ್ ಠಾಣೆಯ ಸಿಬ್ಬಂದಿಗಳಾದ ಶ್ರವಣಕುಮಾರ್ ದಿನೇಶ್ ಗುಂಡಪ್ಪ ಪೂಜಾರಿ ಇವರ ತಂಡ ಡಿ ವೈ ಎಸ್ ಪಿ ಧರ್ಮೇಂದ್ರ ರವರ ಮಾರ್ಗದರ್ಶನದಲ್ಲಿ ದಾಳಿ ಮಾಡಿದಾಗ ದೊಡ್ಡಿಂದುವಾಡಿ ಕೆ.ಎಂ ಕೂಲ್ ಪಾರ್ಲರ್ ಮುಂಭಾಗ ಆರೋಪಿ ರಾಜೇಶ್ ಸಿಕ್ಕಿ ಬಿದ್ದನು. ವಿಚಾರಣೆಗೆ ಒಳಪಡಿಸಿದಾಗ ಕೆ-ಎ-09 ಜೆ 7247 ಅಶೋಕ ಲೈಲ್ಯಾಂಡ್ ದೋಸ್ತ ವಾಹನದಲ್ಲಿ 45 ಸಾವಿರ ಬೆಲೆ ಬಾಳುವ 570 ಗ್ರಾಂ ಒಣ ಗಾಂಜಾ ಇರುವುದು ಕಂಡುಬಂದಿತು.

---

# ಪ್ಲಾಸ್ಟಿಕ್ ನೀರಿನ ಬಾಟಲ್, ಬ್ಯಾಗ್ ವಶಪಡಿಸಿಕೊಂಡ ಪ್ರಾಧಿಕಾರ

• ಉದಯವಾಹಿನಿ ಹನೂರು

ಮಲೆ ಮಹದೇಶ್ವರ ಬೆಟ್ಟದ ಅಂಗಡಿ ಮಳಿಗೆಗಳಲ್ಲಿ ತಿಂಡಿ ತಿನಿಸುಗಳ ಮಾರಾಟಕ್ಕೆ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್‌ಗಳನ್ನು ಬಳಕೆ ಮಾಡುತಿದ್ದ ಮಳಿಗೆಗಳನ್ನು ಪರಿಶೀಲಿಸಿ ಪ್ಲಾಸ್ಟಿಕ್ ನೀರಿನ ಬಾಟಲ್. ಪ್ಲಾಸ್ಟಿಕ್ ಬಳಕೆ ವಸ್ತುಗಳನ್ನು ವಶಪಡಿಸಿಕೊಂಡು ಪ್ಲಾಸ್ಟಿಕ್ ಬಳಕೆ ವಸ್ತುಗಳನ್ನು ಮಾರಾಟ ಮಾಡದಂತೆ ಎಚ್ಚರಿಕೆ ನೀಡಲಾಗಿದೆ.

ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟವನ್ನು ಪ್ಲಾಸ್ಟಿಕ್ ಮುಕ್ತ ಪ್ರದೇಶವೆಂದು ಈಗಾಗಲೇ ಘೋಷಣೆ ಮಾಡಲಾಗಿದೆ. ಕಳೆದು ಒಂದು ವಾರಗಳ ಹಿಂದೆಯೇ ಪ್ರಾಧಿಕಾರದ ಕಾರ್ಯದರ್ಶಿ ಎ. ಈ.ರಘು ಸಿಬ್ಬಂದಿಗಳ ಜೊತೆ ಚರ್ಚೆ ನಡೆಸಿ ಇನ್ನು ಮುಂದೆ ಪ್ಲಾಸ್ಟಿಕ್ ವಸ್ತು ಮಾರಾಟವನ್ನು ಸಂಪೂರ್ಣವಾಗಿ ನಿಷೇಧ ಮಾಡಲು ಪ್ರತಿಯೊಬ್ಬ ಸಿಬ್ಬಂದಿಗಳು ಎಚ್ಚರಿಕೆ ವಹಿಸಬೇಕು ಎಂದು ಸೂಚನೆ ನೀಡಿದ್ದರು.

ಇದಲ್ಲದೆ ಪ್ರತಿಯೊಬ್ಬ ಮಳಿಗೆದಾರರಿಗೂ ನೋಟಿಸ್ ನೀಡಿ ಪ್ಲಾಸ್ಟಿಕ್ ಪದಾರ್ಥಗಳನ್ನು ಯಾರೊಬ್ಬರು ಮಾರಾಟ ಮಾಡಬಾರದು, ಒಂದೊಮ್ಮೆ ಮಾರಾಟ ಮಾಡಿದರೆ ಪ್ಲಾಸ್ಟಿಕ್ ಪದಾರ್ಥಗಳನ್ನು ವಶಕ್ಕೆ ಪಡೆದುಕೊಂಡು ಮೊದಲ ಬಾರಿ 5 ಸಾವಿರ ದಂಡ ವಿಧಿಸಲಾಗುವುದು, ಆನಂತರವೂ ಪ್ಲಾಸ್ಟಿಕ್ ಬಳಕೆ ಮಾಡಿದರೆ ಟೆಂಡರ್ ರದ್ದು ಮಾಡಲಾಗುವುದು ಎಂದು ಎಚ್ಚರಿಕೆ ನೀಡಿ ಮಳಿಗೆದಾರರಿಗೆ ನೋಟಿಸ್ ನೀಡಿದ್ದರು. ಆದರೂ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದ ಪ್ರಾಧಿಕಾರದ ವತಿಯಿಂದ ಪಡೆದಿರುವ ಮಳಿಗೆ ಮಾಲೀಕರುಗಳು ಪ್ಲಾಸ್ಟಿಕ್ ನೀರಿನ ಬಾಟಲ್, ಪ್ಲಾಸ್ಟಿಕ್ ಲೋಟ ತಟ್ಟೆ, ಕವರ್, ಬೀಡಿ ಸಿಗರೇಟು, ತಂಬಾಕು ಪದಾರ್ಥಗಳನ್ನು ಮಾರಾಟ ಮಾಡುತ್ತಿದ್ದರು. ಈ ಹಿನ್ನೆಲೆ ಪ್ರಾಧಿಕಾರದ ಕಾರ್ಯದರ್ಶಿ ಹಾಗೂ ಸಿಬ್ಬಂದಿಗಳು ಮಲೆ ಮಹದೇಶ್ವರ ಬೆಟ್ಟ ಹಾಗೂ ತಾಳು ಬೆಟ್ಟದ ಅಂಗಡಿಗಳಲ್ಲಿ ದಾಳಿ ನಡೆಸಿ ಪ್ಲಾಸ್ಟಿಕ್ ಬಳಕೆ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಬಗ್ಗೆ ಪ್ರಾಧಿಕಾರದ ಕಾರ್ಯದರ್ಶಿ ಎ.ಈ ರಘು ಮಾಧ್ಯಮದವರೊಂದಿಗೆ ಮಾತನಾಡಿ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಂಪೂರ್ಣವಾಗಿ ಪ್ಲಾಸ್ಟಿಕ್ ನಿಷೇಧ ಮಾಡಲು ಪ್ರಾಧಿಕಾರ ಬದ್ಧವಾಗಿದೆ. ಈಗಾಗಲೇ ಮಳಿಗೆ ಮಾರಾಟಗಾರರಿಗೆ ಪ್ಲಾಸ್ಟಿಕ್ ಬಳಕೆ ಮಾಡದಂತೆ ಸೂಚನೆ ನೀಡಲಾಗಿದೆ.

ಮಹಾಶಿವರಾತ್ರಿ, ಜಾತ್ರಾ, ಮಹೋತ್ಸವಕ್ಕೆ ನೀರಿನ ಬಾಟಲ್ ಮಾರಾಟ ಮಾಡಲು ಶೇಖರಣೆ ಮಾಡಿದ್ದ ಏಜೆನ್ಸಿಯವರೆಗೂ ಒಂದು ಅವಕಾಶ ನೀಡಲಾಗಿದ್ದು ವಾಪಸ್ ಕಳುಹಿಸಲು ಸೂಚನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಯಾರೇ ಪ್ಲಾಸ್ಟಿಕ್ ಬಳಕೆ ಮಾಡಿದರು ದಂಡ ವಿಧಿಸಿ, ಟೆಂಡರ್ ರದ್ದು ಮಾಡಲಾಗುವುದು ಎಂದು ತಿಳಿಸಿದರು.



☛ ಉದಯವಾಹಿನಿ ಚಿತ್ರ

### ಬಳಕೆ ಮಾಡದಂತೆ ಎಚ್ಚರಿಕೆ

**ಒಂದು ಸಾವಿರಕ್ಕೂ ಹೆಚ್ಚಿನ ನೀರಿನ ಬಾಟಲ್, 5 ಕೆಜಿ ಪ್ಲಾಸ್ಟಿಕ್ ಕವರ್ 3 ಬಂಡಲ್ ಬೀಡಿ, 4 ಪ್ಯಾಕ್ ಸಿಗರೇಟ್, ತಂಬಾಕು ಪದಾರ್ಥಗಳು, ಜ್ಯೂಸ್‌ನ ಪೌಚ್ ಗಳನ್ನು ವಶಕ್ಕೆ ಪಡೆದು ಮುಂದಿನ ದಿನಗಳಲ್ಲಿ ಪ್ಲಾಸ್ಟಿಕ್ ಬಳಕೆ ಮಾಡದಂತೆ ಎಚ್ಚರಿಕೆ ನೀಡಿದ್ದಾರೆ.**

---

# ಪೋಕ್ಸೋ ಕಾಯ್ದೆ ಬಗ್ಗೆ ಹೆಚ್ಚು ಅರಿವು ಪಡೆದುಕೊಳ್ಳಿ

• ಉದಯವಾಹಿನಿ ಚಾಮರಾಜನಗರ

ಪೋಕ್ಸೋ ಕಾಯ್ದೆಯ ಬಗ್ಗೆ ಹೆಚ್ಚಿನ ಅರಿವು ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಅವರು ತಿಳಿಸಿದರು. ನಗರದ ಜಿಲ್ಲಾಡಳಿತ ಭವನದ ಹಳೆ ಕೆ.ಡಿ.ಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಕುರಿತ ವೈದ್ಯಾಧಿಕಾರಿಗಳಿಗೆ, ಶುಶ್ರೂಷಣಾಧಿಕಾರಿಗಳಿಗೆ ಹಮ್ಮಿಕೊಳ್ಳಲಾಗಿದ್ದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

18 ವರ್ಷಕ್ಕಿಂತ ಒಳಗಿನ ಮಕ್ಕಳು ಗರ್ಭಿಣಿಯಾಗಿರುವುದು ಕಂಡು ಬಂದಲ್ಲಿ ಆರೋಗ್ಯ ಇಲಾಖೆಯ ಗಮನಕ್ಕೆ ತರಬೇಕು. ಪೋಕ್ಸೋ ಕಾಯ್ದೆಯ ಬಗ್ಗೆ ಸಾಕಷ್ಟು ನಿರ್ಣಯಗಳು ಆಗಿವೆ. ಕಾಯ್ದೆಯ ಬಗ್ಗೆ ಸಾಕಷ್ಟು ತಿಳಿವಳಿಕೆ ಪಡೆಯಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಹೇಗೆ ತೊಡಗಿಸಿಕೊಳ್ಳಬೇಕಿದೆ ಎಂಬ ಬಗ್ಗೆ ಮಾಹಿತಿ ಹೊಂದಬೇಕು ಎಂದರು.

ಲೈಂಗಿಕ ಅಪರಾಧ ಪ್ರಕರಣಗಳಲ್ಲಿ ಆರೋಗ್ಯ



☛ ಉದಯವಾಹಿನಿ ಚಿತ್ರ

ಇಲಾಖೆ ಯಾವ ಪ್ರಕ್ರಿಯೆ ಅನುಸರಿಸಬೇಕಿದೆ, ತಪಾಸಣೆ, ದಾಖಲಾತಿಗಳನ್ನು ಯಾವ ರೀತಿ ಕೈಗೊಳ್ಳಬೇಕು ಎಂಬುದನ್ನು ತಿಳಿಯಬೇಕು. ಪೋಕ್ಸೋ ಕಾಯ್ದೆಯ ಬಗ್ಗೆ ಅತ್ಯಂತ ಎಚ್ಚರಿಕೆ ವಹಿಸಬೇಕಿದೆ. ಬಾಲ್ಯ ವಿವಾಹದ ವಿರುದ್ಧ ಅರಿವು ಮೂಡಿಸಬೇಕು. ಬಾಲ್ಯವಿವಾಹದಿಂದ ಆರೋಗ್ಯ ಮೇಲೆ ಆಗುವಂತಹ ಪರಿಣಾಮದ ಬಗ್ಗೆಯೂ ಮನವರಿಕೆ ಮಾಡಿಕೊಡಬೇಕಿದೆ ಎಂದು ಡಾ. ಎಸ್. ಚಿದಂಬರ ಅವರು ತಿಳಿಸಿದರು.

ಡಾ. ಪ್ರದೀಪ್, ಡಾ. ಮುರುಳಿ ಮೋಹನ್, ಆರೋಗ್ಯ ಶಿಕ್ಷಣಾಧಿಕಾರಿ ಡಾ. ದೊರೆಸ್ವಾಮಿ, ಪ್ರಸನ್ನ, ಡಾ. ಅಂಕಪ್ಪ, ಡಾ. ಚಂದ್ರಶೇಖರ್, ಡಾ. ರಾಜೇಶ್ ಕುಮಾರ್, ಡಾ. ರವಿಕುಮಾರ್, ಡಾ. ಸುಂದರೇಶ್ ಉಪಸ್ಥಿತರಿದ್ದರು.

---

# ಪಕ್ಷ ಸಂಘಟಿಸಲು ಕಾರ್ಯಕರ್ತರಿಗೆ ಲಕ್ಷ್ಮೀನಾರಾಯಣ್ ಕರೆ

## ● ನೂತನ ಪದಾಧಿಕಾರಿಗಳು ಯುವಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷಕ್ಕೆ ಸೆಳೆಯುವ ಮೂಲಕ ಪಕ್ಷದ ಸದಸ್ಯತ್ವ ಮಾಡಿಸಿ

• ಉದಯವಾಹಿನಿ ಮಾಲೂರು

ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಪಕ್ಷಕ್ಕೆ ನೂತನವಾಗಿ ಆಯ್ಕೆಯಾಗಿರುವ ಪದಾಧಿಕಾರಿಗಳು ಯುವಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷಕ್ಕೆ ಸೆಳೆಯುವ ಮೂಲಕ ಪಕ್ಷದ ಸದಸ್ಯತ್ವ ಮಾಡಿಸಿ ಪಕ್ಷ ಕಟ್ಟುವ ಕೆಲಸ ಮಾಡುವಂತೆ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಸಿ ಲಕ್ಷ್ಮೀನಾರಾಯಣ್ ಹೇಳಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯ ಸಭಾಂಗಣದಲ್ಲಿ ಯುವ ಕಾಂಗ್ರೆಸ್ ಪಕ್ಷಕ್ಕೆ ಆಯ್ಕೆಯಾಗಿರುವ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನಿಲ್ ನಂಜೇಗೌಡ ಜಿಲ್ಲಾ ಹಾಗೂ ತಾಲ್ಲೂಕು ಯುವ ಕಾಂಗ್ರೆಸ್ ಸಮಿತಿಗೆ ಆಯ್ಕೆಗೊಂಡ ಪದಾಧಿಕಾರಿಗಳನ್ನು ಬ್ಲಾಕ್ ಕಾಂಗ್ರೆಸ್ ಸಮಿತಿಗಳ ವತಿಯಿಂದ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ನೂತನ ಯುವ ಕಾಂಗ್ರೆಸ್ ಪದಾಧಿಕಾರಿಗಳನ್ನು ಅಭಿನಂದಿಸಿ ಮಾತನಾಡಿದರು.

ಕಾಂಗ್ರೆಸ್ ಪಕ್ಷ ಆಡಳಿತದಲ್ಲಿದ್ದಾಗ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿಕೊಟ್ಟ ಸಂವಿಧಾನದ ಆಶಯದಡಿ ಪ್ರತಿಯೊಬ್ಬ ನಾಗರೀಕನಿಗೂ ಸಾಮಾಜಿಕ ಭದ್ರತೆಯನ್ನು ಒದಗಿಸಿದೆ ಅಲ್ಲದೆ ಕಾಂಗ್ರೆಸ್ ಪಕ್ಷದಲ್ಲಿ ಹಲವು ರೀತಿಯ ಅವಕಾಶಗಳನ್ನು ಪಡೆದಿದ್ದಾರೆ.

ಎಐಸಿಸಿ ಪಕ್ಷ ಸಂಘಟನೆಯ ಹಿತದೃಷ್ಟಿಯಿಂದ ಯುವಕರನ್ನು ಪಕ್ಷಕ್ಕೆ ಹೆಚ್ಚಾಗಿ ಸೆಳೆಯುವ ಹಿತದೃಷ್ಟಿಯಿಂದ ಯುವ ಕಾಂಗ್ರೆಸ್ ಪಕ್ಷವನ್ನು ಸ್ಥಾಪಿಸಿ ಪದಾಧಿಕಾರಿಗಳನ್ನು ಚುನಾವಣೆಯಲ್ಲಿ ಆಯ್ಕೆ ಮಾಡುವುದು ಯುವಕರಿಗೆ ನೀಡಿದೆ, ಅದರಂತೆ ಇದೇ ಮೊದಲ ಬಾರಿಗೆ ತಾಲೂಕಿನಿಂದ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ ಸುನಿಲ್ ನಂಜೇಗೌಡ ಆಯ್ಕೆಯಾಗಿರುವುದು ತಾಲೂಕಿಗೆ ಸಂತಸ ತಂದಿದೆ, ಯುವ ಮುಖಂಡನಾಗಿರುವ ಸುನಿಲ್ ನಂಜೇಗೌಡ ರಾಜ್ಯ ಯುವ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳೊಂದಿಗೆ ಚರ್ಚಿಸಿ ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಯುವಕರನ್ನು ಪಕ್ಷಕ್ಕೆ ಸೆಳೆದು ಪಕ್ಷ ಸಂಘಟಿಸುವ ಕೆಲಸ ಮಾಡುವಂತೆ ಹೇಳಿದರು. ಅದೇ ರೀತಿ ತಾಲ್ಲೂಕು ಹಾಗೂ ಜಿಲ್ಲಾ ಸಮಿತಿಗೆ ಆಯ್ಕೆಗೊಂಡ ಪದಾಧಿಕಾರಿಗಳು ಸಹ ಪಕ್ಷ ಕಟ್ಟುವ ಕೆಲಸಕ್ಕೆ ಜಿಲ್ಲಾ ಕಾಂಗ್ರೆಸ್ ಹಾಗೂ ಬ್ಲಾಕ್ ಕಾಂಗ್ರೆಸ್ ಸಮಿತಿಗಳಿಗೆ ಸಹಕಾರ ನೀಡುವಂತೆ ಹೇಳಿದರು. ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸುನೀಲ್ ನಂಜೇಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರಾಜೇಶ್.ಎಲ್.ವಿ., ಹರೀಶ್, ತಾ.ಅಧ್ಯಕ್ಷ ತನ್ವಿರ್ ಅಹಮದ್, ಮಾಲೂರು ಬ್ಲಾಕ್ ಅಧ್ಯಕ್ಷ ಅಕ್ಷಯ್, ಮಾಸ್ತಿ ಬ್ಲಾಕ್ ಅಧ್ಯಕ್ಷ ವಸಂತ್ ಕುಮಾರ್, ಅವರನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾಸ್ತಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ವಿಜಯನರಸಿಂಹ, ಕೆಪಿಸಿಸಿ ಸದಸ್ಯ ಪ್ರದೀಪ್ ರೆಡ್ಡಿ, ಜಿಲ್ಲಾ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ಎಸ್ ಸಿ ನಾರಾಯಣಸ್ವಾಮಿ, ಯೋಜನಾ ಪ್ರಾಧಿಕಾರ ಅಧ್ಯಕ್ಷ ಮಹಮದ್ ನಯಿಂ ಉಲ್ಲಾ, ಪುರಸಭಾ ಸದಸ್ಯರಾದ ಆರ್ ವೆಂಕಟೇಶ್, ಮುರುಳಿಧರ್, ಮಾಜಿ ಸದಸ್ಯ ಹನುಮಂತರೆಡ್ಡಿ, ದರ್ಕಾಸ್ಥ ಸಮಿತಿ ಸದಸ್ಯ ನವೀನ್, ಶಬೀರ್ ಉಲ್ಲಾ, ಹೇಮಮಾಲಿನಿ, ಶೈಲಜಾ, ಕೃಷ್ಣಪ್ಪ, ಎಂ.ಸಿ.ರವಿ, ಜಾಕಿ ಮಂಜು, ತಿರುಮಲಹಟ್ಟಿ ಬಾಬು, ಇನ್ನಿತರರು ಹಾಜರಿದ್ದರು.

ಮಾಲೂರು ಪಟ್ಟಣದ ಕಾಂಗ್ರೆಸ್ ಕಚೇರಿಯ ಸಭಾಂಗಣದಲ್ಲಿ ಯುವ ಕಾಂಗ್ರೆಸ್ ಪಕ್ಷಕ್ಕೆ ಆಯ್ಕೆಯಾಗಿರುವ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನಿಲ್ ನಂಜೇಗೌಡ ಜಿಲ್ಲಾ ಹಾಗೂ ತಾಲೂಕು ಯುವ ಕಾಂಗ್ರೆಸ್ ಸಮಿತಿಗೆ ಆಯ್ಕೆಗೊಂಡ ಪದಾಧಿಕಾರಿಗಳನ್ನು ಬ್ಲಾಕ್ ಕಾಂಗ್ರೆಸ್ ಸಮಿತಿಗಳ ವತಿಯಿಂದ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ನೂತನ ಯುವ ಕಾಂಗ್ರೆಸ್ ಪದಾಧಿಕಾರಿಗಳನ್ನು ಅಭಿನಂದಿಸಿದರು.



☛ ಉದಯವಾಹಿನಿ ಚಿತ್ರ

### ಕಾಂಗ್ರೆಸ್ ಪಕ್ಷಕ್ಕೆ ಇತಿಹಾಸವಿದೆ

**ದೇಶಕ್ಕೆ ಸ್ವಾತಂತ್ರ ದೊರಕಿಸಿಕೊಟ್ಟ ಕಾಂಗ್ರೆಸ್ ಪಕ್ಷಕ್ಕೆ ಇತಿಹಾಸವಿದೆ ಕಾಂಗ್ರೆಸ್ ಪಕ್ಷದ ಸರ್ಕಾರವು 70 ವರ್ಷಗಳ ಕಾಲ ಆಡಳಿತ ನಡೆಸಿದ್ದು ದೇಶದ ಸಮಗ್ರ ಅಭಿವೃದ್ಧಿಗೆ ಪಕ್ಷದ ಆಡಳಿತವು ತನ್ನದೇ ಆದ ಕೊಡುಗೆಯನ್ನು ನೀಡಿದೆ.**

### ಸಹಕಾರದಿಂದ ಪಕ್ಷ ಕಟ್ಟುವ ಕೆಲಸ

**ತಾಲ್ಲೂಕಿನ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಯುವಕರ ಸಹಕಾರದಿಂದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದು, ಯುವಕರನ್ನು ಪಕ್ಷಕ್ಕೆ ಸೆಳೆಯುವುದೇ ನನ್ನ ಮುಖ್ಯ ಗುರಿಯಾಗಿದೆ. ಅಲ್ಲದೆ ಮುಂಬರುವ ದಿನಗಳಲ್ಲಿ ರಾಜ್ಯ ಯುವ ಕಾಂಗ್ರೆಸ್ ಪಕ್ಷದಿಂದ ತಾಲ್ಲೂಕಿನಲ್ಲಿ ಸಮಾವೇಶ ನಡೆಸಲು ಯುವ ಕಾಂಗ್ರೆಸ್ ಪಕ್ಷದ ಅಧ್ಯಕ್ಷರ ಬಳಿ ಚರ್ಚಿಸಲಾಗುವುದು ಅಲ್ಲದೆ ಜಿಲ್ಲಾ ಮಟ್ಟದಲ್ಲಿಯೂ ಸಹ ಯುವ ಕಾಂಗ್ರೆಸ್ ಸಮಾವೇಶ ಏರ್ಪಡಿಸಲಾಗುವುದು, ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರ ಸಹಕಾರದಿಂದ ಪಕ್ಷ ಕಟ್ಟುವ ಕೆಲಸ ಮಾಡೋಣ, ಇತ್ತೀಚಿನ ದಿನಗಳಲ್ಲಿ ಯುವಕರು ಮೋದಿ ಹಿಂದುತ್ವ ಹೆಚ್ಚಾಗಿ ಹೇಳುತ್ತಾರೆ ಅವರನ್ನು ಆ ಭ್ರಮೆಯಿಂದ ಹೊರತೊಂದು ಕಾಂಗ್ರೆಸ್ ಪಕ್ಷಕ್ಕೆ ಬೆಳೆಯುವುದರ ಮೂಲಕ ಪಕ್ಷ ಸಂಘಟನೆ ಮಾಡಲಾಗುವುದು, ಕಾಂಗ್ರೆಸ್ ಪಕ್ಷದ ವರಿಷ್ಠರ ಮೌಖಿಕ ಆದೇಶದಂತೆ ರಾಜ್ಯದ ಪ್ರತಿ ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಸೋಶಿಯಲ್ ಮೀಡಿಯಾದಲ್ಲಿ ಒಬ್ಬ ಸದಸ್ಯರನ್ನು ನೇಮಕ ಮಾಡಿ ಸರ್ಕಾರದ ಸಾಧನೆಗಳು ಹಾಗೂ ಯೋಜನೆಗಳು ಪ್ರಚಾರಪಡಿಸುವುದರ ಮೂಲಕ ಪಕ್ಷವನ್ನು ಬಲಿಷ್ಠಗೊಳಿಸಲಾಗುವುದು**

**-ಸುನಿಲ್ ನಂಜೇಗೌಡ, ಯುವ ಕಾಂಗ್ರೆಸ್ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ**

---

## ಮಿನಿ ನ್ಯೂಸ್

### ಪ್ರತಿಭಟನಾ ಸ್ಥಳಕ್ಕೆ ಡಿ.ಸಿ ಭೇಟಿ

• ಉದಯವಾಹಿನಿ ಕೆ.ಆರ್.ಪೇಟೆ

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಗ್ರಾಮಾಡಳಿತ ಅಧಿಕಾರಿಗಳು ನಡೆಸುತ್ತಿದ್ದ ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾಧಿಕಾರಿ ಡಾ. ಕುಮಾರ ಭೇಟಿ ನೀಡಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು ಮುಷ್ಕರ ಕೈಬಿಡುವಂತೆ ಮನವಿ ಮಾಡಿದರು. ನಂತರ ಮಾತನಾಡಿದ ಗ್ರಾಮಾಡಳಿತ ಅಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಡಿ.ಪಿ.ಹರೀಶ್ ರಾಜ್ಯ ಸಂಘ ಏನು ತೀರ್ಮಾನ ಮಾಡುತ್ತದೆಯೋ ಆ ರೀತಿ ನಾವುಗಳು ನಡೆದುಕೊಳ್ಳಲಿದ್ದು ಸರ್ಕಾರ ಕೂಡಲೇ ನಮ್ಮ ಮನವಿಗಳನ್ನು ಈಡೇರಿಸಲು ಮುಂದಾಗಬೇಕು ಎಂದರು ಇದೇ ಸಂದರ್ಭದಲ್ಲಿ ತಹಶೀಲ್ದಾರ್ ಡಾ. ಅಶೋಕ್ ಸೇರಿದಂತೆ ಹಲವರಿದ್ದರು.

### ಪ್ರಚೋದನಕಾರಿ ಭಾಷಣ ಮಾಡಿದ್ದ ಮೌಲ್ವಿಗೆ ಪೊಲೀಸರ ಹುಡುಕಾಟ

• ಉದಯವಾಹಿನಿ ಮೈಸೂರು

ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ಪ್ರಕರಣಕ್ಕೆ ಮೌಲ್ವಿಯೊಬ್ಬರ ಪ್ರಚೋದನಕಾರಿ ಭಾಷಣ ಕಾರಣ ಎಂದು ಹೇಳಲಾಗುತ್ತಿದ್ದು, ತಲೆಮರೆಸಿಕೊಂಡಿರುವ ಮೌಲ್ವಿಯ ಬಂಧನಕ್ಕೆ ಪೊಲೀಸರು ತೀವ್ರ ಶೋಧ ನಡೆಸುತ್ತಿದ್ದಾರೆ. ಪ್ರಚೋದನಕಾರಿ ಭಾಷಣ ಮಾಡಿರುವ ಮೌಲ್ವಿ ಕೇರಳ ಅಥವಾ ರಾಮನಗರ ಕಡೆ ಪರಾರಿಯಾಗಿರುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದ್ದು, ಅವರ ಬಂಧನಕ್ಕೆ ಪೊಲೀಸರು ಮುಂದಾಗಿದ್ದಾರೆ. ಅವಹೇಳನಕಾರಿ ಪೋಸ್ಟರ್ ವೈರಲ್ ಹಿನ್ನೆಲೆಯಲ್ಲಿ ಸೋಮವಾರ ರಾತ್ರಿ ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲುತೂರಾಟ ನಡೆಸಿ ದಾಂಧಲೆ ನಡೆಸಿದ ಪ್ರಕರಣ ಸಂಬಂಧ ಪೊಲೀಸರು ಎಂಟು ಮಂದಿಯನ್ನು ಬಂಧಿಸಿದ್ದಾರೆ. ಮೈಸೂರಿನ ಶಾಂತಿನಗರದ ಸುಹೇಲ್, ರೆಹಲ್ ಪಾಷ, ಅಯಾನ್, ಗೌಸಿಯಾ ನಗರದ ಸೈಯದ್ ಸಾಧಿಕ್, ಸತ್ಯಾನಗರದ ಏಜಾಜ್, ರಾಜೀವ್ ನಗರದ ಸಾಧಿಕ್ ಪಾಷ, ಅರ್ಬಾನ್ ಷರೀಫ್ ಹಾಗೂ ಸೋಹೆಬ್ ಪಾಷ ಬಂಧಿತರು. ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ಪ್ರಕರಣದಲ್ಲಿ ಪೊಲೀಸರು 50ಕ್ಕೂ ಹೆಚ್ಚು ಮಂದಿ ಆರೋಪಿಗಳನ್ನು ಗುರುತಿಸಿದ್ದು ಈವರೆಗೆ 8 ಮಂದಿಯನ್ನು ಬಂಧಿಸಿದ್ದಾರೆ. ಉಳಿದವರು ತಲೆಮರೆಸಿಕೊಂಡಿದ್ದು ಅವರ ಬಂಧನಕ್ಕಾಗಿ ಪೊಲೀಸರು ಬಲೆ ಬೀಸಿದ್ದಾರೆ.

**ಠಾಣೆ ಬಳಿ ಹೈಡ್ರಾಮ :** ತಡರಾತ್ರಿ ಉದಯಗಿರಿ ಠಾಣೆ ಬಳಿ ಅನ್ಯಕೋಮಿನ ಮಹಿಳೆಯರು ಜಮಾಯಿಸಿ ಬಂಧಿಸಿರುವ ತಮ್ಮ ಮಕ್ಕಳನ್ನು ಬಿಡುಗಡೆ ಮಾಡುವಂತೆ ಒತ್ತಾಯಿಸಿದರು. ತಮ್ಮ ಮಕ್ಕಳು ತಪ್ಪು ಮಾಡಿಲ್ಲ. ಅವರಿನ್ನೂ ಚಿಕ್ಕವರು ಎಂದು ಠಾಣೆ ಬಳಿ ಮಹಿಳೆಯರು ಅಳಲು ತೋಡಿಕೊಳ್ಳುತ್ತಿದ್ದರು. ಪೊಲೀಸರು ಮನವೊಲಿಸಲು ಯತ್ನಿಸಿದರಾದರೂ ಸಾಧ್ಯವಾಗಲಿಲ್ಲ. ಆ ವೇಳೆ ಸ್ಥಳೀಯ ವಕೀಲರಾದ ಶರೀಫ್ ಎಂಬುವರು ಈ ಮಹಿಳೆಯರಿಗೆ ಬುದ್ದಿವಾದ ಹೇಳಿ ಕಳುಹಿಸಿದ್ದಾರೆ.

### 14 ದಿನದ ಮಗು, ಪತಿ ತ್ಯಜಿಸಿ ನೇಣಿಗೆ ಶರಣಾದ ಮಹಿಳೆ

• ಉದಯವಾಹಿನಿ ಮಡಿಕೇರಿ

14 ದಿನದ ಮಗು ಹಾಗೂ ಪತಿಯನ್ನು ತ್ಯಜಿಸಿ ಮಹಿಳೆಯೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕೊಡಗು ಜಿಲ್ಲೆಯ ವಿರಾಜಪೇಟೆ ತಾಲ್ಲೂಕಿನ ಕೊಟ್ಟೋಳಿಯಲ್ಲಿ ನಡೆದಿದೆ. ವಿರಾಜಪೇಟೆ ತಾಲ್ಲೂಕು ಕರಡ ನಿವಾಸಿ ದಿವಂಗತ ಕಟ್ಟಿ ಬಿದ್ದಪ್ಪ-ಶೀಲಾ ದಂಪತಿ ಪುತ್ರಿ ಕೊಟ್ಟೋಳಿ ಗ್ರಾಮದ ನಿವಾಸಿ ಎಂ.ಎಂ ದಿನೇಶ್ ಎಂಬುವವರ ಪತ್ನಿ ಕಾವೇರಮ್ಮ (24) ನೇಣಿಗೆ ಶರಣಾದ ಮಹಿಳೆ. ದಿನೇಶ್-ಕಾವೇರಮ್ಮ ಮದುವೆಯಾಗಿ ಸುಮಾರು 4 ವರ್ಷಗಳು ಕಳೆದಿದೆ. ಫೆ.12 ರಂದು ಪತಿ ದಿನೇಶ್ ತಮ್ಮ ಮನೆಯ ಸನಿಹದ ಕಾಫಿ ತೋಟದಲ್ಲಿ ಕೆಲಸ ಮಾಡುತ್ತಿದ್ದರು.

ಈ ವೇಳೆ ಮನೆಯಲ್ಲಿ ಮಗುವಿನ ಕೂಗಾಟ ಕೇಳಿ ಬಂದು ನೋಡಿದ್ದಾರೆ. ಕಾವೇರಮ್ಮ ಸ್ನಾನದ ಕೋಣೆಯಲ್ಲಿ ಸೀರೆಯಿಂದ ನೇಣುಬಿಗಿಕೊಂಡ ಸ್ಥಿತಿಯಲ್ಲಿ ಪತ್ತೆಯಾಗಿದ್ದಾಳೆ.

ಆತ್ಮಹತ್ಯೆಗೆ ನಿಖರ ಕಾರಣ ತಿಳಿದಿಲ್ಲ. ಮೃತಳ ಅಣ್ಣ ಎಂ.ಎ ತಿಮ್ಮಯ್ಯ ನೀಡಿದ ದೂರಿನ ಮೇರೆಗೆ ವಿರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಆತ್ಮಹತ್ಯೆ ಪ್ರಕರಣ ದಾಖಲಾಗಿದೆ. ಈ ಸಂಬಂಧ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

### ಸಮರ್ಥವಾಗಿ ಪರೀಕ್ಷೆ ಎದುರಿಸಿ

• ಉದಯವಾಹಿನಿ ಕೋಲಾರ

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಎಂ. ಶ್ರೀನಿವಾಸನ್ ವಿವಿಧ ವಿದ್ಯಾರ್ಥಿ ನಿಲಯಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದ ಅವರು, ಎಸ್ಸೆಸ್ಸೆಲ್ಸಿ ಪರೀಕ್ಷೆಯನ್ನು ಸಮರ್ಥವಾಗಿ ಎದುರಿಸಲು ಕರೆ ನೀಡಿದರು.

ಕೋಲಾರ ತಾಲ್ಲೂಕಿನ ಡಾ.ಬಿ.ಆರ್ ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ ಹಾಗೂ ಕೆಂಬೋಡಿ ಗ್ರಾಮದ ಡಾ.ಬಿ.ಆರ್ ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಸಾರ್ವಜನಿಕ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ಸದರಿ 2024-25ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಎದುರಿಸುತ್ತಿರುವ ನಿಲಯದ ವಿದ್ಯಾರ್ಥಿಗಳೊಟ್ಟಿಗೆ ಕೆಲ ಹೊತ್ತು ಸಮಾಲೋಚನೆಯನ್ನು ನಡೆಸಿದರು.

ಪರೀಕ್ಷೆಯನ್ನು ಸಮರ್ಥವಾಗಿ ಎದುರಿಸಿ ಉತ್ತಮ ಅಂಕಗಳೊಂದಿಗೆ ಗುಣಮಟ್ಟದ ಫಲಿತಾಂಶ ಪಡೆಯುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಸ್ಫೂರ್ತಿಯ ನುಡಿಗಳನ್ನು ಹೇಳುವ ಮೂಲಕ ಈ ವರ್ಷದ ಎಸ್ ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಮ್ಮ ಶೈಕ್ಷಣಿಕ ಗುರಿಯನ್ನು ಅತ್ಯುನ್ನತ ಮಟ್ಟದಲ್ಲಿ ಸಾಸಲು ಪ್ರೇರಣೆ ನೀಡಲಾಯಿತು. ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿಗಳಿಗಾಗಿ ತಯಾರಿಸಿದ್ದ ಉಟೋಪ ಚಾರವನ್ನು ಪರಿಶೀಲಿಸಿ ವಿವಿಧ ಆಹಾರ ಉತ್ಪನ್ನಗಳನ್ನು ಗುಣಮಟ್ಟವಾಗಿ ಶೇಖರಿಸಿಡಲು ಅನುಸರಿಸಬೇಕಾದ ಕೆಲವು ಸಾಮಾನ್ಯ ಕ್ರಮಗಳ ಕುರಿತು ನಿಲಯದ ಅಡುಗೆ ಸಿಬ್ಬಂದಿಗೆ ಮಾಹಿತಿ ನೀಡಿದರು.

ವಿದ್ಯಾರ್ಥಿಗಳಿಗೆ ಊಟವನ್ನು ನೀಡುತ್ತಿರುವ ಫೋಟೋವನ್ನು ಇಲಾಖೆಯ ಟ್ವಿಟರ್ ಹಾಗೂ ವೆಬ್ ಸೈಟ್ ನಲ್ಲಿ ಸರಿಯಾದ ರೀತಿ ಕಾಲಕಾಲಕ್ಕೆ ತಪ್ಪದೇ ಅಪ್ಲೋಡ್ ಮಾಡಲು ಕ್ರಮವಹಿಸಲು ಸಂಬಂಸಿದ ವಾರ್ಡನ್‌ರಿಗೆ ಸೂಚಿಸಿದರು.

ಪ್ರಶ್ನೆಪತ್ರಿಕೆ ಯಾವುದೇ ರೀತಿ ಕೊಟ್ಟರೂ ನೀವು ಉತ್ತರಿಸಲು ಸಿದ್ದರಾಗಿರಬೇಕು, ಅದಕ್ಕೆ ಪರಿಶ್ರಮ ಅಗತ್ಯವಿದೆ, ಕ್ರೀಡೆ, ಆಟ,ಸಿನಿಮಾ ಎಲ್ಲವನ್ನು ಪರೀಕ್ಷೆ ಮುಗಿಯುವವರೆಗೂ ಮರೆತುಬಿಡಿ ನಿಮ್ಮ ಗುರಿ ಕೇವಲ ಉತ್ತಮ ಫಲಿತಾಂಶದತ್ತ ಇರಲಿ ಎಂದರು. ಮೊಬೈಲ್ ನೋಡದಿರಿ, ಓದಲು ಆಸಕ್ತಿ ಹೆಚ್ಚಲು ಉತ್ತಮ ನಿದ್ದೆಯೂ ಅಗತ್ಯವಿದೆ, ಆರೋಗ್ಯದ ಕಡೆ ಗಮನ ನೀಡಿ, ಮುರುಕುಲು ತಿಂಡಿ, ಎಣ್ಣೆಯಿಂದ ಕರಿದ ಪದಾರ್ಥ ತಿನ್ನದಿರಿ ಸಲಹೆ ನೀಡಿದರು.

# 19ರಂದು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ

## ಪರಿಷತ್ ಸದಸ್ಯರು ಹಾಗೂ ಸಮಾಜ ಮುಖಂಡರ ಸಮ್ಮುಖದಲ್ಲಿ ಶಿವಾಜಿ ಮಹಾರಾಜರ ಭಾವಚಿತ್ರದ ಪೂಜೆ

• ಉದಯವಾಹಿನಿ, ಬೀದರ್

ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು 19 ಫೆಬ್ರುವರಿ 2025 ರಂದು ಬೀದರನಲ್ಲಿ ಪ್ರತಿ ವರ್ಷದಂತೆ ಸಂಸದರು, ಶಾಸಕರು, ಮತ್ತು ಇತರ ಗಣ್ಯರ ಸಮ್ಮುಖದಲ್ಲಿ ಆಯೋಜಿಸಲಾಗುತ್ತಿದೆ ಎಂದು ಛತ್ರಪತಿ ಶಿವಾಜಿ ಮಹಾರಾಜ ಸ್ಮಾರಕ ಸಮಿತಿ ಅಧ್ಯಕ್ಷರು ಹಾಗೂ ಜಯಂತಿ ಆಚರಣೆ ಸಮಿತಿಯ ಅಧ್ಯಕ್ಷರು ಆಗಿರುವ ನ್ಯಾ.ಮದನರಾವ ಬಿರಾದಾರ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಶಿವಾಜಿ ಮಹಾರಾಜರು 18 ಪಗಡೆ ಜಾತಿ 12 ಬಲುತ್ತೇದಾರರು, ಅಲ್ಪಸಂಖ್ಯಾತರು ಹಾಗೂ ದೀನ ದಲಿತರ ಮೆಚ್ಚಿನ ರಾಜ ಇದ್ದರೂ, ಹಿಂದು ಸ್ವರಾಜ್ಯದ ಸ್ಥಾಪಕ ಮತ್ತು ಎಲ್ಲಾ ಭಾರತೀಯರ ಸ್ವಫತಿ ಅಂತಹ ಮಹಾನ ರಾಜನ ಜನ್ಮ ದಿನಾಚರಣೆಯಲ್ಲಿ ನಾವೆಲ್ಲರೂ ಪಾಲ್ಗೊಳ್ಳುವುದು ಅನಿವಾರ್ಯವಾಗಿದೆ ಎಂದು ತಿಳಿಸಿದ್ದಾರೆ. ಕಾರ್ಯಕ್ರಮದ ವಿವರಣೆ ನೀಡಿರುವ ಅವರು, ಜಿಲ್ಲಾಧಿಕಾರಿ ಕಚೇರಿಯಲ್ಲಿ ಬೆಳಗ್ಗೆ 10:00 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸೇರಿದಂತೆ ಎಲ್ಲಾ ಶಾಸಕರು, ಸಂಸದರು, ವಿಧಾನ ಪರಿಷತ್ ಸದಸ್ಯರು ಹಾಗೂ ಸಮಾಜ ಮುಖಂಡರ ಸಮ್ಮುಖದಲ್ಲಿ ಶಿವಾಜಿ ಮಹಾರಾಜರ ಭಾವಚಿತ್ರದ ಪೂಜೆ ನೆರವೇರುವುದು, 10:15 ಶ್ರೀ ಛತ್ರಪತಿ ಶಿವಾಜಿ ಮಹಾರಾಜ ಚೌಕ್‌ನಲ್ಲಿ ಶಿವಾಜಿ ಮೂರ್ತಿಯ ಪೂಜೆಯ ನಂತರ ಭವ್ಯ ಮೆರವಣಿಗೆ ಜರುಗಲಿದೆ. ಗುತ್ತಿಗೆದಾರ ವಸಂತರಾವ ಬಿರಾದಾರ ಅವರು ಅಲಂಕರಿಸಿರುವ ವಾಹನದಲ್ಲಿ ಶಿವಾಜಿ ಮಹಾರಾಜರ ಭವ್ಯ ಮೆರವಣಿಗೆ ಜರುಗಲಿದೆ.

ಮೆರವಣಿಗೆಯು ಶಿವಾಜಿ ಪ್ರತಿಮೆ, ಹರಳಯ್ಯಾ ವೃತ್ತ, ಸರ್ಕಾರಿ ಆಸ್ಪತ್ರೆ, ಅಂಬೇಡ್ಕರ ವೃತ್ತ, ಭಗತ ಸಿಂಗ್ ವೃತ್ತ, ಬಸವೇಶ್ವರ ವೃತ್ತ, ಛತ್ರಪತಿ ಶಿವಾಜಿ ಮಹಾರಾಜ ವೃತ್ತದಿಂದ ನೇರವಾಗಿ ಡಾ.ಚನ್ನಬಸವ ಪಟ್ಟದ್ದೇವರ ರಂಗ ಮಂದಿರಕ್ಕೆ ಬಂದು ತಲುಪಲಿದೆ. ನಂತರ ಡಾ.ಚನ್ನಬಸವ ಪಟ್ಟದ್ದೇವರ ರಂಗ ಮಂದಿರದಲ್ಲಿ ಮಧ್ಯಾಹ್ನ 12:30 ಕ್ಕೆ ವೇದಿಕೆ ಕಾರ್ಯಕ್ರಮ ಜರುಗಲಿದೆ.

> **ಧಾರಾಸಿಂವ ಜಿಲ್ಲೆಯಮಾಜಿ ಸಂಸದ ರವಿಂದ್ರ ವಿಶ್ವನಾಥರಾವ ಗಾಯಕವಾಡ ಮುಖ್ಯ ಭಾಷಣಕಾರರಾಗಿ ಪಾಲ್ಗೊಳ್ಳುವರು. ಮಾಜಿ ಜಿಲ್ಲಾ ಪಂಚಾಯತ್ ಉಪಾಧ್ಯಕ್ಷ ಪ್ರಕಾಶ ಕಾಶಿನಾಥರಾವ ಪಾಟೀಲ್ ಘಾಟಬೋರೊಳ ಅಧ್ಯಕ್ಷತೆ ವಹಿಸುವರು. ಅಂದು ಉಸ್ಮಾನ್ ಗಂಜ್‌ನಲ್ಲಿರುವ ಸುವರ್ಣಕರ ಆಸೋಸಿಯೇಶನ ವತಿಯಿಂದ ಬೆಳಿಗ್ಗೆ ಉಪಹಾರ ಮತ್ತು ಮಧ್ಯಾಹ್ನ 2 ಗಂಟೆಗೆ ಹಬ್ಬದ ಊಟದ ವ್ಯವಸ್ಥೆ ಮಾಡಲಾಗಿದೆ.**

**ಶಿವಾಜಿ ಮೂರ್ತಿಯ ಪೂಜೆಯ ನಂತರ ಭವ್ಯ ಮೆರವಣಿ**

ಇದೇ ಸಂದರ್ಭದಲ್ಲಿ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜನ್ಮೋತ್ಸವ ಸಮಿತಿ ರಚಿಸಲಾಗಿದ್ದು ನ್ಯಾಯವಾದಿ ಮದನರಾವ ಬಿರಾದಾರ ಸಮಿತಿಯ ಅಧ್ಯಕ್ಷರಾಗಿದ್ದಾರೆ. ಬಂಡೆಪ್ಪ ಖಾಶೆಂಪುರ, ರಘುನಾಥರಾವ ಜಾಧವ್, ವಿಜಯಕುಮಾರ ಪಾಟೀಲ ಕಣಜಿಕರ, ನ್ಯಾಯವಾದಿಗಳಾದ ನಾರಾಯಣ ಗಣೇಶ, ಕೃಷ್ಣ ಬಿರಾದಾರ, ಬಾಲಾಜಿ ಕೇಶವರಾವ ಕಣಜಿಕರ, ನಿವೃತ್ತ ಪ್ರಾಂಶುಪಾಲರಾದ ಗೋವಿಂದರಾವ ಬಿರಾದಾರ, ರಂಜಿತ್ ಪಾಟೀಲ, ವಿಠಲರಾವ ವಾಡೇಕರ್, ರಂಗರಾವ ಪಾಟೀಲ, ಉಸ್ಮಾನಗಂಜ್ ಅಕ್ಕಸಾಲಿಗರ ಸಂಘದ ಉಪಾಧ್ಯಕ್ಷ ಕಿರಣ ಚವ್ಹಾಣ, ಪ್ರಮುಖರಾದ ಅರ್ಜುನ ಬಿಲ್ಲಿ, ಪ್ರಕಾಶ ಜಾರೆ, ಶಿವಾಜಿರಾವ ಜ್ಞಾನೋಬರಾವ ಪಾಟೀಲ, ಕಾಶಿನಾಥರಾವ ಪಾಟೀಲ ಕಂದಗುಳ, ಸಾಯಿಕುಮಾರ ಕಣಜಕರ, ಗೋವಿಂದರಾವ ಗೊರ ಚಿಂಚೋಳಿ, ರಮೇಶಕಾರ ಜೋಳದಾಬಕಾ, ಗೋವಿಂದರಾವ ಬಿರಾದಾರ ನಿಲಮನಹಳ್ಳಿ, ಪಂಡಿತರಾವ ಜಾಧವ, ದೇವಿದಾಸ್ ಪಾಟೀಲ್ ಎನಗುಂದಾ, ರಾಜು ಪಾಟೀಲ ನೇಮತಾಬಾದ, ಸಂತೋಷ ಪಾಟೀಲ ಗೊರ್ನಾಳ, ಸಂಜೀವ ಪಾಟೀಲ ನೇಮತಾಬಾದ, ನೀಲೇಶ ಜಾಧವ ರಕ್ಷಾಳ, ರಮೇಶ ಶೇಕೋಬಾ, ವೆಂಕಟರಾವ ಚಿದ್ರಿ ಮರ್ಖಲ್, ರಾಜೇಂದ್ರ ಬಿರಾದಾರ, ಪ್ರಧಾನ ಕಾರ್ಯದರ್ಶಿ ಗುತ್ತಿಗೆದಾರ ವಿವೇಕಾನಂದ ಕನಸನಾಳೆ ನಾಮದಾಪೂರವಾಡಿ, ಸಂದೀಪ ಪಾಟೀಲ ಇವರು ಸಮಿತಿಯ ಸದಸ್ಯರಾಗಿರುತ್ತಾರೆ ಎಂದು ಮದರಾವ ಬಿರಾದಾರ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರಕ್ಕೆ ರೈತ ಸಂಘಟನೆ ಬೆಂಬಲ

• ಉದಯವಾಹಿನಿ, ವಡಗೇರಾ

ಗ್ರಾಮ ಆಡಳಿತ ಅಧಿಕಾರಿಗಳ ಪ್ರಮುಖ ಬೇಡಿಕೆಗಳನ್ನು ಕೂಡಲೆ ರಾಜ್ಯ ಸರ್ಕಾರ ಈಡೇರಿಸುವಂತೆ ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾಧ್ಯಕ್ಷ ಮಲ್ಲನಗೌಡ ಹಗರಟಗಿ ಒತ್ತಾಯಿಸಿದ್ದಾರೆ.

ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದ ಮುಂದೆ ಗ್ರಾಮ ಆಡಳಿತ ಅಧಿಕಾರಿಗಳು ಹಮ್ಮಿಕೊಂಡಿರುವ ಎರಡನೇ ಹಂತದ ಅನಿರ್ದಿಷ್ಟಾವಧಿ 4.ನೇ ದಿನದ ಮುಷ್ಕರಕ್ಕೆ ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾ ಘಟಕ ವತಿಯಿಂದ ಬೆಂಬಲ ನೀಡಿ ಅವರು ಮಾತನಾಡಿದರು. ರೈತರು ಮತ್ತು ಗ್ರಾಮ ಆಡಳಿತ ಅಧಿಕಾರಿಗಳಿಗೂ ಅವಿನಾಭಾವ ಸಂಬಂಧವಿದೆ ರೈತರು ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಹಗಲಿರಲು ಎನ್ನದೆ ಶ್ರಮಿಸುತ್ತಿದ್ದಾರೆ ಆದರೆ ಸರಕಾರಗಳು ಅವರಿಗೆ ಬೇಕಾದ ಕಾರ್ಯಾಲಯ ಗಣಕಯಂತ್ರ, ಇನ್ನಿತರ ಮೂಲ ಸೌಲಭ್ಯಗಳನ್ನು ನೀಡದೆ ಇರುವುದು ಸರಿಯಲ್ಲ ಗ್ರಾಮ ಆಡಳಿತ ಅಧಿಕಾರಿಗಳು ಮುಷ್ಕರ ಕುಳಿತಿರುವುದರಿಂದ ರೈತರು ಸಾರ್ವಜನಿಕರು ವಿದ್ಯಾರ್ಥಿಗಳಿಗೂ





ಉದಯವಾಹಿನಿ ಚಿತ್ರ

ತುಂಬಾ ತೊಂದರೆಯಾಗುತ್ತಿದೆ ಕೂಡಲೇ ಸರಕಾರ ಸಂಬಂಧಿಸಿದ ಸಚಿವರು ಅಧಿಕಾರಿಗಳು ಈ ಕುರಿತು ಸೂಕ್ತ ಕ್ರಮ ಕೈಗೊಂಡು ಅವರ ಪ್ರಮುಖ ಬೇಡಿಕೆಗಳನ್ನು ಈಡೇರಿಸಬೇಕು ಒಂದು ವೇಳೆ ವಿಳಂಬ ಮಾಡಿದ್ದಲ್ಲಿ ನಮ್ಮ ಸಂಘಟನೆ ವತಿಯಿಂದ ರಾಜ್ಯಾದ್ಯಂತ ಗ್ರಾಮ ಆಡಳಿತ ಅಧಿಕಾರಿಗಳು ನಡೆಸುತ್ತಿರುವ ಅನಿರ್ದಿಷ್ಟಾವಧಿ ಮುಷ್ಕರ ಬೆಂಬಲಿಸಿ ಉಗ್ರವಾದ ಹೋರಾಟ ಮಾಡುವುದಾಗಿ ಸರಕಾರಕ್ಕೆ ಎಚ್ಚರಿಸಿದ್ದಾರೆ ಈ ಸಂದರ್ಭದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ತಾಲ್ಲೂಕು ಅಧ್ಯಕ್ಷ ಮಹಾಂತೇಶ್ ಪಾಟೀಲ್ ಯತ್ನಾಳ್ , ಹಾಗೂ ರೈತ ಸಂಘದ ಮುಖಂಡರಾದ ಸತೀಶ್ ಪೂಜಾರಿ, ಮಲ್ಲು ನಾಟೇಕಾರ, ಬೀರಪ್ಪ ಬಸವರಾಜ ಹಾಗೂ ಗ್ರಾಮ ಆಡಳಿತ ಅಧಿಕಾರಿಗಳು ಉಪಸ್ಥಿತರಿದ್ದರು

# ಬಹುಮುಖಿ ಪ್ರತಿಭೆಯ ಮೇರು ಸಾಧಕಿ ಸರೋಜಿನಿ ನಾಯ್ಡು

• ಉದಯವಾಹಿನಿ, ಕಲಬುರಗಿ

ನಮ್ಮ ದೇಶದಲ್ಲಿ ಅನೇಕ ಮಹಿಳೆಯರು ವಿವಿಧ ಕ್ಷೇತ್ರಗಳಲ್ಲಿ ತಮ್ಮದೇ ಆದ ಸಾಧನೆಯನ್ನು ಮಾಡಿದ್ದಾರೆ. ಇದರಿಂದ ನಮ್ಮ ದೇಶದ ಕೀರ್ತಿ ಹೆಚ್ಚಾಗಿದೆ. ಸ್ವಾತಂತ್ರ್ಯ ಹೋರಾಟಗಾರ್ತಿ, ಸಾಹಿತಿ, ಪ್ರಥಮ ರಾಜ್ಯಪಾಲೆ ಸರೋಜಿನಿ ನಾಯ್ಡು ಅವರು ದೇಶಕ್ಕೆ ಅನನ್ಯವಾದ ಕೊಡುಗೆಯನ್ನು ನೀಡಿದ್ದಾರೆ ಎಂದು ಚಿಂತಕಿ ಸುರೇಖಾ ಬಿ.ಮಳ್ಳಿ ಅಭಿಪ್ರಾಯಪಟ್ಟರು.

ನಗರದ ನ್ಯೂ ರಾಘವೇಂದ್ರ ಕಾಲನಿಯಲ್ಲಿರುವ 'ವಿವೇಕಾನಂದ ಕೋಚಿಂಗ್ ಕೇಂದ್ರದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಗುರುವಾರ ಜರುಗಿದ 'ಸರೋಜಿನಿ ನಾಯ್ಡು ಜನ್ಮದಿನ-ರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ಸರೋಜಿನಿ ನಾಯ್ಡು ಅವರನ್ನು 'ಭಾರತದ



ಉದಯವಾಹಿನಿ ಚಿತ್ರ

ಗಾನಕೋಗಿಲೆ' ಎಂದು ಕರೆಯಲಾಗುತ್ತದೆ. ದೇಶದ ಮೊದಲ ಮಹಿಳಾ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದಾರೆ. ಓದಿನಲ್ಲಿ ಆಸಕ್ತಿಯಿದ್ದ ನಾಯ್ಡು ಅವರು 1400 ಸಾಲುಗಳ 'ಸರೋವರದ ಸುಕನ್ಯ' ಎಂಬ ಆಂಗ್ಲ ಕವನವನ್ನು, 2000 ಸಾಲುಗಳ ನಾಟಕವನ್ನು ರಚಿಸಿ ಸಾಹಿತ್ಯ ಕ್ಷೇತ್ರವನ್ನು ಶ್ರೀಮಂತಗೊಳಿಸಿದ್ದಾರೆ. ಅವರ ಕಾವ್ಯದ ವಸ್ತು ಭಾರತ ಜನಜೀವನ, ಪ್ರಕೃತಿ ಸಂಪತ್ತು ಒಳಗೊಂಡಿದೆ. ಅವರು ಕವಯತ್ರಿ ಅಲ್ಲದೆ ಅಪ್ಪಟ ದೇಶಪ್ರೇಮಿಯಾಗಿದ್ದರು. ದೇಶದ ಸ್ವಾಂತಂತ್ರ್ಯ ಸಮರದಲ್ಲಿ ಸಕ್ರಿಯವಾಗಿ ಪಾಲ್ಗೊಂಡರು.

# ಪುಂಡಾಟ ಮೆರೆದ ಮದವೇರಿದ ಎಮ್ಮೆ ; ಕಾರ್ಯಾಚರಣೆ ಮೂಲಕ ಸರೆ

• ಉದಯವಾಹಿನಿ, ಮುದ್ದೇಬಿಹಾಳ

ಮದವೇರಿಸಿಕೊಂಡು ಸಾರ್ವಜನಿಕರಿಗೆ, ವಾಹನಗಳಿಗೆ ಸಿಕ್ಕಂತೆ ಗುದ್ದುತ್ತಾ ಹಾನಿ ಮಾಡುತ್ತ ಪುಂಡಾಟದಲ್ಲಿ ತೊಡಗಿದ್ದ ಎಮ್ಮೆಯೊಂದನ್ನು ಒಂದೂವರೆ ಗಂಟೆಗೂ ಹೆಚ್ಚು ಕಾಲ ಕಾರ್ಯಾಚರಣೆ ನಡೆಸಿ ಜೆಸಿಬಿ ಯಂತ್ರದ ಬಕೆಟ್ ಬಳಸಿ ಉಪಾಯದಿಂದ ಸುರಕ್ಷಿತವಾಗಿ ಹಿಡಿದು ಕಟ್ಟಿ ಹಾಕಿದ ಘಟನೆ ಗುರುವಾರ ಪಟ್ಟಣದಲ್ಲಿ ನಡೆಯಿತು.

ಬಸ್ ನಿಲ್ದಾಣದಲ್ಲಿ ದಾಂಗುಡಿ ಇಡುತ್ತಿದ್ದ ಎಮ್ಮೆಯನ್ನು ಅಲ್ಲೇ ಹಿಡಿಯಲು ಯತ್ನಿಸಿದರೂ ತಪ್ಪಿಸಿಕೊಂಡು ಪುರಸಭೆ ಹತ್ತಿರದ ಮಾರ್ಗವಾಗಿ ಪದಕಿ ಆಸ್ಪತ್ರೆ ಬಡಾವಣೆಗಳಲ್ಲೆಲ್ಲ ಓಡಾಡುತ್ತ ವಾಲ್ಮೀಕಿ ವೃತ್ತದ ಬಳಿ ಇರುವ ಹಳೇ ಸರ್ಕಾರಿ ಆಸ್ಪತ್ರೆಯ (ತಾಲ್ಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ) ಆವರಣದೊಳಕ್ಕೆ ನುಗ್ಗಿತು. ಇಲ್ಲಿ ಸುತ್ತಲೂ ಕಂಪೌಂಡ್ ಇದ್ದುದರಿಂದ ಹಿಡಿಯಲು ಸುಲಭ ಎಂದರಿತು ಕಾರ್ಯಾಚರಣೆಗೆ ತೀರ್ಮಾನಿಸಲಾಯಿತು.

ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ ಅವರು ಪುರಸಭೆಯ ಜೆಸಿಬಿ ಮತ್ತು ದನ, ಎತ್ತು ಹಿಡಿದು ಪಳಗಿಸುವಲ್ಲಿ ನುರಿತ ತಮ್ಮ ಸ್ನೇಹಿತರ ತಂಡವನ್ನು ಬಲವಾದ ಹಗ್ಗದೊಂದಿಗೆ ಸ್ಥಳಕ್ಕೆ ಕರೆಸಿದರು. ಮಾನವ ಪ್ರಯತ್ನಕ್ಕೆ ಎಮ್ಮ ಬಗ್ಗುವ ಲಕ್ಷಣ ಕಾಣಲಿಲ್ಲ. ಎಲ್ಲರನ್ನೂ ಓಡಾಡಿಸುತ್ತ, ಎದುರಿಗೆ ಬಂದವರನ್ನು ಇರಿಯುತ್ತ ಮೊಂಡಾಟ ಹೆಚ್ಚು ಮಾಡಿತು. ಸಮಯ ನೋಡಿಕೊಂಡು ಪುರಸಭೆ ಜೆಸಿಬಿ ಚಾಲಕ ಯಮನಪ್ಪ ಬಿರಾದಾರ ಜಾಣತನದಿಂದ ಜೆಸಿಬಿಯ ಬಕೆಟ್ ಅನ್ನು ನಿಧಾನವಾಗಿ ಎಮ್ಮೆಯ ಮೇಲೆ ಇಳಿಸಿ ಏಕಾಏಕಿ ಮೇಲಿನಿಂದ ಒತ್ತಿ ಹಿಡಿದಾಗ ತಕ್ಷಣ ತಂಡದವರು ಹಗ್ಗದೊಂದಿಗೆ ಧಾವಿಸಿ ಕಟ್ಟಿ





ಉದಯವಾಹಿನಿ ಚಿತ್ರ

ಹಾಕಿದರು. ಜೆಸಿಬಿ ಬಳಸಿದರೂ ಎಮ್ಮೆಗೆ ಯಾವುದೆ ತೊಂದರೆ ಆಗಲಿಲ್ಲ. ನಂತರ ಅದನ್ನು ಟಂಟಂ ವಾಹನದಲ್ಲಿ ಗೊಳಸಂಗಿ ಅವರು ಪೊಲೀಸರ ಸಲಹೆ ಮೇರೆಗೆ ತಮ್ಮ ಬಡಾವಣೆಗೆ ಕೊಂಡೊಯ್ದು ಮರವೊಂದಕ್ಕೆ ಕಟ್ಟಿ ಹಾಕಿ ಮೇವು, ನೀರಿನ ವ್ಯವಸ್ಥೆ ಕಲ್ಪಿಸಿದರು. ಸಿಪಿಐ ಮೊಹಮ್ಮದ್ ಫಸಿಯುದ್ದೀನ್, ಕಾನ್ಸಟೇಬಲ್ ಸಲೀಮ ಹತ್ತರಕಿಹಾಳ ಅವರು ಜನರು ಕಂಪೌಂಡ್ ಒಳಗೆ ಹೋಗದಂತೆ ನಿಯಂತ್ರಿಸಿ ಸಹಕರಿಸಿದರು. ಯಾಸೀನ್ ಅತ್ತಾರ, ಯಾಸೀರ್ ಢವಳಗಿ, ಶಬ್ಬೀರ ಪಡ್ನೂರೆ, ಸಲೀಮ ಬೇಪಾರಿ, ಮಕ್ತುಮ್ ಬೇಪಾರಿ ಇನ್ನಿತರ ಯುವಕರ ತಂಡ ಮತ್ತು ಪುರಸಭೆ ಪೌರ ಕಾರ್ಮಿಕರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

> **ಎಮ್ಮೆಯನ್ನು ಸುರಕ್ಷಿತವಾಗಿ ಹಿಡಿದು ಜನರ ಪ್ರಾಣಕ್ಕೆ ಮತ್ತು ಸಾರ್ವಜನಿಕರ ವಾಹನಗಳಿಗೆ ಹಾನಿಯಾಗುವುದನ್ನು ತಪ್ಪಿಸಲಾಗಿದೆ. ಮಹೆಬೂಬನಗರದ ನಮ್ಮ ಮನೆಯ ಹತ್ತಿರ ಗಿಡವೊಂದಕ್ಕೆ ಎಮ್ಮೆ ಕಟ್ಟಿ ಮೇವು, ನೀರಿನ ವ್ಯವಸ್ಥೆ ಮಾಡಲಾಗಿದೆ. ಎಮ್ಮೆಯ ಮಾಲಿಕರು ಕಾರ್ಯಾಚರಣೆಗೆ ತಗುಲಿದ ಖರ್ಚು ಪುರಸಭೆಗೆ ಭರಿಸಿ ಒಯ್ಯಬಹುದು. ಮೂರು ದಿನಗಳೊಳಗಾಗಿ ಒಯ್ಯದಿದ್ದರೆ ಅದನ್ನು ಮಾರಾಟ ಮಾಡಿ ಬರುವ ಹಣವನ್ನು ಪುರಸಭೆಗೆ ಜಮಾ ಮಾಡಲಾಗುತ್ತದೆ.**
>
> **-ಮಹಿಬೂಬ ಗೊಳಸಂಗಿ, ಅಧ್ಯಕ್ಷರು, ಪುರಸಭೆ, ಮುದ್ದೇಬಿಹಾಳ.**

ಗುರುವಾರ ಸಂತೆಯ ದಿನವಾಗಿದ್ದರಿಂದ ಪಟ್ಟಣದಲ್ಲಿ ಹೆಚ್ಚಿನ ಜನದಟ್ಟಣೆ ಇತ್ತು. ಅಕಸ್ಮಾತ್ ಎಮ್ಮೆ ಜನದಟ್ಟಣೆ ಇರುವ ಬಜಾರಲ್ಲಿ ನುಗ್ಗಿದ್ದರೆ ಮಕ್ಕಳು, ಮಹಿಳೆಯರು, ವೃದ್ದರು ಸೇರಿ ಹಲವರ ಪ್ರಾಣಹಾನಿ ಆಗುವ ಸಂಭವ ಹೆಚ್ಚಾಗಿತ್ತು ಎಂದು ಪ್ರತ್ಯಕ್ಷದರ್ಶಿ ಲಾಡ್ಲೇಮಶ್ಯಾಕ ನದಾಫ ತಿಳಿಸಿದರು. ಒಟ್ಟಿನಲ್ಲಿ ಬಹು ಹೊತ್ತಿನವರೆಗೆ ನಡೆದ ಕಾರ್ಯಾಚರಣೆಯಿಂದ ಎಮ್ಮೆ ಬಂಧಿಸಲ್ಪಟ್ಟು ಹಲವರ ಪ್ರಾಣ, ವಾಹನಗಳ ಹಾನಿ ತಪ್ಪಿದಂತಾಯಿತು. ಸೌಮ್ಯ ಸ್ವಭಾವದ ಸಾಕು ಎಮ್ಮೆ ಹೀಗೆ ಮದವೇರಿಸಿಕೊಂಡು ಪುಂಡಾಟ ನಡೆಸಿದ್ದಕ್ಕೆ ಸ್ಪಷ್ಟ ಕಾರಣ ತಿಳಿದುಬರಲಿಲ್ಲ.

# ನದಾಫ್ ಪಿಂಜಾರ್ ನಿಗಮ ಮಂಡಳಿ ಘೋಷಣೆಗೆ ಒತ್ತಾಯ

• ಉದಯವಾಹಿನಿ, ವಡಗೇರಾ

ರಾಜ್ಯದಲ್ಲಿ ನದಾಫ್ ಪಿಂಜಾರ ಸಮುದಾಯವು ಶೈಕ್ಷಣಿಕವಾಗಿ ಸಾಮಾಜಿಕವಾಗಿ ಆರ್ಥಿಕವಾಗಿ ತೀವ್ರ ಹಿಂದುಳಿದಿದ್ದು ನಮ್ಮ ಸಮಾಜದ ಅಭಿವೃದ್ಧಿಗೆ ಪ್ರಸ್ತುತ ಬಜೆಟ್‌ನಲ್ಲಿ ನದಾಫ್ ಪಿಂಜಾರ ನಿಗಮ ಘೋಷಣೆ ಮಾಡಿ ನಿಗಮಕ್ಕೆ ಹೆಚ್ಚಿನ ಅನುದಾನ ನೀಡುವಂತೆ ನದಾಫ್ ಪಿಂಜಾರ್ ಸಮುದಾಯದ ಕಲಬುರ್ಗಿ ವಿಭಾಗಿಯ ಅಧ್ಯಕ್ಷ ಮೈಬೂಬ್ ಸಾಬ್ ನದಾಫ್ ಒತ್ತಾಯಿಸಿದ್ದಾರೆ. ಪಟ್ಟಣದಲ್ಲಿ ನದಾಫ್ ಪಿಂಜಾರ್ ಸಮುದಾಯದ ವಡಗೇರಾ ತಾಲ್ಲೂಕು ಘಟಕದ ವತಿಯಿಂದ ಹಮ್ಮಿಕೊಂಡಿದ್ದ 2025ನೇ ಸಾಲಿನ ನದಾಫ್ ಪಿಂಜಾರ್ ಸಮುದಾಯದ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಅವರು ಮಾತನಾಡಿದರು . ಹಿಂದುಳಿದ ನಮ್ಮ ಸಮುದಾಯದ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನ ನೀಡುವಂತೆ ರಾಜ್ಯ ಸರ್ಕಾರಗಳಿಗೆ ಹಲವು ಬಾರಿ ಮನವಿ ಮಾಡಿದರು ಕೂಡಾ ಸರ್ಕಾರಗಳು ನಮ್ಮ ಬೇಡಿಕೆ ಈಡೇರಿಸುವಲ್ಲಿ ನಿರ್ಲಕ್ಷ್ಯ ತೋರಿವೆ ನಮ್ಮ ಸಮುದಾಯವನ್ನು ಬರೀ ವೋಟ್ ಬ್ಯಾಂಕ ಆಗಿ ಮಾತ್ರ ಬಳಸಿಕೊಂಡಿದ್ದಾರೆ.



**ರಾಜ್ಯ ಸರ್ಕಾರಗಳಿಗೆ ಹಲವು ಬಾರಿ ಮನವಿ**

> **ನಮ್ಮ ಸಮುದಾಯದ ಅಭಿವೃದ್ಧಿ ದೃಷ್ಟಿಯಿಂದ ಪಿಂಜಾರ್ ನದಾಫ್ ಸಮುದಾಯದ ಕುಲಶಾಸ್ತ್ರ ಅಧ್ಯಯನಕ್ಕೆ ಸರಕಾರ ಧಾರವಾಡ ವಿಶ್ವವಿದ್ಯಾಲಯಕ್ಕೆ ಅನುದಾನ ನೀಡಿ ಸಮುದಾಯನ್ನು ಗುರುತಿಸುವ ಕಾರ್ಯಕ್ಕೆ ಮುಂದಾಗಿರುವುದು ಅತ್ಯಂತ ಸಂತಸದ ವಿಷಯ ಸರಕಾರ ಮುಂದಿನ ಪ್ರಸಕ್ತ ಬಜೆಟ್‌ನಲ್ಲಿ ಪಿಂಜಾರ್ ನದಾಫ್ ಅಭಿವೃದ್ಧಿ ನಿಗಮ ಘೋಷಣೆ ಮಾಡುವುದರ ಜೊತೆಗೆ ನಮ್ಮ ಸಮುದಾಯದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿಕೊಂಡಿದ್ದಾರೆ.**

ಈ ಸಂದರ್ಭದಲ್ಲಿ ರಾಯಚೂರು ಜಿಲ್ಲಾಧ್ಯಕ್ಷರಾದ ಮೌಲಾನ ಸಾಬ್ ಗಣದಿನ್ನಿ, ದೇವದುರ್ಗ ತಾಲ್ಲೂಕು ಅಧ್ಯಕ್ಷ ಹಸೇನ್ ಸಾಬ್ ರಾಮನಾಳ ,ಮೈಬೂಬ್ ಸಾಬ್ ನದಾಫ್ ಗುಂಡ್ಲೂರು, ಖಾಸಿಂಸಾಬ್ ನಿಲವಂಜಿ, ಮೌಲನ್ ಸಾಬ್ ನದಾಫ್ ಬೆಂಡೆಬೆಂಬಳಿ, ಖಾಜಾಹುಸೇನಿ ಗೋನಾಲ, ಇಸೂಫ ಸಾಬ ನದಾಫ್ , ಮೈಮುದ ಸಾಬ್ ವಡಗೇರಾ, ಶಕೀಲ್ ಸಾಬ್, ಶರೀಫ್ ಸಾಬ್ ಕೊಡಲ್, ಮಕ್ತುಮ್ ಸಾಬ್ ಕಂದಳ್ಳಿ, ಮೈನೂದ್ದೀನ್ ಸಾಬ್, ಭಾಷಾ ಸಾಬ್ ರಾಮನಾಳ, ಹಾಗೂ ಸಮ ಸಮಾಜದ ಮುಖಂಡರು ಉಪಸ್ಥಿತರಿದ್ದರು

# ದತ್ತ ದಿಗಂಬರ ಮಾಣಿಕೇಶ್ವರ ಜಾತ್ರಾ ಮಹೋತ್ಸವ

• ಉದಯವಾಹಿನಿ, ಕಮಲಾಪುರ

ಬಸ್ ನಿಲ್ದಾಣ ಹತ್ತಿರ ಇರುವ ಶ್ರೀ ದತ್ತ ದಿಗಂಬರ ಮಾಣಿಕೇಶ್ವರ ಜಾತ್ರಾ ಮಹೋತ್ಸವವನ್ನು ಬಹಳ ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಜಾತಿ ಮತ ಪಂಥ ಎನ್ನದೆ ಎಲ್ಲಾ ಧರ್ಮದ ಭಕ್ತರು ಭಾಗವಹಿಸಿದರು ಈ ದೇವಸ್ಥಾನವನ್ನು ಕಮಲಾಪುರದ ಮಾಣಿಕೇಶ್ವರ ದೇವರ ಭಕ್ತರಾದ ಶ್ರೀ ಈಶ್ವರ ಮುತ್ಯಾ ದೇವರು ಸ್ಥಾಪಿಸಿ ಸ್ಥಾಪಿಸಿದ್ದಾರೆ ಭಕ್ತರಿಗೆ

ಈ ಜಾತ್ರೆ ಮಾಡಲು ತಿಳಿಸಿ ಹೇಳಿರುತ್ತಾರೆ ಅಂದರಂತೆ ಭಕ್ತರು ಜಾತ್ರೆ ಮಾಡುತ್ತಾರೆ ಎಂದು ಸ್ಥಳೀಯರು ತಿಳಿಸುತ್ತಾರೆ

ಈ ಜಾತ್ರೆಯ ವಿಶೇಷತೆ ಏನೆಂದರೆ ಮಹಾರಾಷ್ಟ್ರದ ಹಾಜಿಮಲಂಗ್ ಜಾತ್ರೆ ಕಲ್ಲೂಡದ ಶ್ರೀ ಮಾಣಿಕೇಶ್ವರ ಜಾತ್ರೆ ಹಾಗೂ ಕಮಲಾಪುರದ ಬಸ್ ನಿಲ್ದಾಣದಲ್ಲಿರುವ ಶ್ರೀ ಮಾಣಿಕೇಶ್ವರ ದೇವಸ್ಥಾನ ಜಾತ್ರೆ ಒಂದೇ ದಿನ ನಡೆಯುತ್ತದೆ ಇದು ಈಶ್ವರ ಮುತ್ಯಾ ನವರ ಕನಸಾಗಿತ್ತು ಈ ಜಾತ್ರೆ ಒಂದೇ ಬಾರಿಗೆ ನಡೆಯಲಿ ಎಂದು ಅವರು ಭಕ್ತರಲ್ಲಿ ಹೇಳಿಕೊಂಡಿದ್ದರು ಅದಕ್ಕಾಗಿಯೇ ಕಮಲಾಪುರ ಭಕ್ತರು ಈ ಜಾತ್ರೆಯನ್ನು ಪ್ರತಿ ವರ್ಷವು ಬಹಳ ಸಂಭ್ರಮ ಸಡಗರದಿಂದ ಈ ಜಾತ್ರೆಯನ್ನು ಆಚರಿಸುತ್ತಾರೆ ಬೆಳಗ್ಗೆ ಶ್ರೀ ದತ್ತ ದಿಗಂಬರ ಮಾಣಿಕೇಶ್ವರ ಮಂದಿರದ ಗರ್ಭಗುಡಿಯಲ್ಲಿರುವ

ಶ್ರೀ ಮಾಣಿಕೇಶ್ವರ ಮೂರ್ತಿಗೆ ರುದ್ರಾಭಿಷೇಕ ಮಾಹ



ಉದಯವಾಹಿನಿ ಚಿತ್ರ

ಅಭಿಷೇಕ ಮಾಡಲಾಯಿತು ಕಮಲಾಪುರದ ಪಟ್ಟಣದ ಹಾಗೂ ಸುತ್ತ ಮುತ್ತಲಿನ ಗ್ರಾಮದ ಜನರು ಅಭಿಷೇಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಪುನೀತರಾದರು ಈ ಜಾತ್ರೆಯಲ್ಲಿ ಅನೇಕ ಗ್ರಾಮದ ಭಜನಾ ಮಂಡಳಿಯಿಂದ ಸಂಗೀತ ಕಾರ್ಯಕ್ರಮ ನಡೆಯಿತು ಮಾಣಿಕೇಶ್ವರ ದೇವಸ್ಥಾನದ ಕಮೀಟಿ ಪರವಾಗಿ ಅನ್ನ ದಾಸೋಹಗ ಮಾಡಲಾಯಿತು ಈ ಕಾರ್ಯಕ್ರಮದಲ್ಲಿ ಅಂಬಣ್ಣಾ ಪೂಜಾರಿಮಲ್ಲಿಕಾರ್ಜುನ್ ಹರಸೂರ ಹನುಮಂತ್ ಸಂಗೋಳಗಿರಾಮಲಿಂಗ ಚಿಕ್ಕೇಗೌಡಶಿವಶರಣಪ್ಪ ದೋಶೆಟ್ಟಿಮೌಲಾಸಾಬ್ ಸಾಧಿಕ್ ಪಟೇಲ್ ಉದಯಕುಮಾರ್ ಸೂಗೂರು ನಾಗೇಂದ್ರ ಗಿರಿ ಪಟ್ಟಣದ ಪ್ರಮುಖರು

ಆಟೋ ಚಾಲಕರ ಸಂಘದ ವರು ಕಮಲಾಪುರ ಪಟ್ಟಣದ ಜನತೆ ಹಾಗೂ ಸುತ್ತಮುತ್ತಲಿನ ಗ್ರಾಮದ ತಾಂಡದ ಜನರು ಈ ಭವ. ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ್ದರು ಯಶಸ್ವಿಯಾಗಿ ಸಂಪನ ಗೊಳಿಸಿದರು.

# ಮಾರ್ಚ್ ತಿಂಗಳಲ್ಲಿ ಉದ್ಯೋಗ ಮೇಳ: ಜಿಲ್ಲಾಧಿಕಾರಿ ಟಿ.ವೆಂಕಟೇಶ್

## ಖಾಸಗಿ ಕಂಪನಿಗಳು ಭಾಗವಹಿಸಲು ವಿವಿಧ ಇಲಾಖೆಗಳು ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ


• ಉದಯವಾಹಿನಿ, ಚಿತ್ರದುರ್ಗ

ಯುವ ಜನತೆಗೆ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಚಿತ್ರದುರ್ಗ ನಗರದಲ್ಲಿ ಉದ್ಯೋಗ ಮೇಳವನ್ನು ಮುಂಬರುವ ಮಾರ್ಚ್ ತಿಂಗಳ ಎರಡನೇ ವಾರದಲ್ಲಿ ಆಯೋಜಿಸಲಾಗುವುದು, ಮೇಳದ ಯಶಸ್ವಿಗೆ ಉಪಸಮಿತಿಗಳನ್ನು ರಚಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಉದ್ಯೋಗ ಮೇಳ ಆಯೋಜಿಸುವ ಕುರಿತು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2024-25ನೇ ಸಾಲಿಗೆ ಸಂಜೀವಿನಿ-ಕೆಎಸ್ ಆರ್‌ಎಲ್‌ಪಿಎಸ್-ಡಿಡಿಯುಜಿಕೆವೈ ಯೋಜನೆ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಇವರ ಸಹಯೋಗದಲ್ಲಿ ಮುಂಬರುವ ಮಾರ್ಚ್ ತಿಂಗಳ ಎರಡನೇ ವಾರದಲ್ಲಿ ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ ಆಯೋಜಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಸೂಚಿಸಿದರು.

ಉದ್ಯೋಗ ಮೇಳ ಆಯೋಜನೆಗೆ ಸಂಬಂಧಪಟ್ಟಂತೆ ಉಪವಿಭಾಗಾಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ



**ಉದ್ಯೋಗ ಮೇಳದ ನೋಂದಣಿ ಪ್ರಕ್ರಿಯೆ ಪ್ರಾರಂಭ**

ನೇಮಕ ಮಾಡಿ, ಶಿಷ್ಟಾಚಾರದ ಪ್ರಕಾರ ಆಹ್ವಾನ ಪತ್ರಿಕೆಯನ್ನು ಮುದ್ರಿಸಿ, ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು ಎಂದು ಹೇಳಿದರು.

ಹೆಚ್ಚಿನ ಕಂಪನಿಗಳು ಭಾಗವಹಿಸಲು ಕ್ರಮವಹಿಸಿ: ಜಿಲ್ಲೆಯ ಉದ್ಯೋಗಾಂಕ್ಷಿಗಳಿಗೆ ಉದ್ಯೋಗ ನೀಡುವ ನಿಟ್ಟಿನಲ್ಲಿ ಉದ್ಯೋಗ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಲು ವಿವಿಧ ಇಲಾಖೆಗಳು ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಹಾಗೂ ರಾಜ್ಯದ ವಿವಿಧ ಕಂಪನಿಗಳನ್ನು ಆಹ್ವಾನಿಸಲು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ

> **ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯೊಂದಿಗೆ ಸಂಪರ್ಕ ಸಾಧಿಸಿ, ಬೆಂಗಳೂರಿನ ಬಹುರಾಷ್ಟ್ರೀಯ ಕಂಪನಿಗಳಲ್ಲಿ ಉದ್ಯೋಗಾವಕಾಶದ ಅವಶ್ಯವಿದೆ. ಹಾಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಕಂಪನಿಗಳ ಪ್ರತಿನಿಧಿಗಳು ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವಂತೆ ಆಹ್ವಾನ ನೀಡಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ಸಲಹೆ ನೀಡಿದರು.**

ಅಧ್ಯಕ್ಷತೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಉಪನಿರ್ದೇಶಕರು, ಜಿಲ್ಲಾ ಉದ್ಯೋಗಾಧಿಕಾರಿಗಳು, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು, ಜಿಟಿಟಿಸಿ ಪ್ರಾಂಶುಪಾಲರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳನ್ನು ಒಳಗೊಂಡ ಸಮಿತಿ ರಚನೆ ಮಾಡಬೇಕು. ಜಿಲ್ಲೆಯಲ್ಲಿ ಆಯೋಜಿಸುವ ಉದ್ಯೋಗ ಮೇಳದಲ್ಲಿ ಕನಿಷ್ಟ 300 ರಿಂದ 500 ಯುವ ಜನರಿಗೆ ಉದ್ಯೋಗ ಕಲ್ಪಿಸುವಂತಾಗಬೇಕು ಎಂದು ಹೇಳಿದರು. ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಮುಖ್ಯ ಯೋಜನಾಧಿಕಾರಿ ಸಿ.ಎಸ್.ಗಾಯತ್ರಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಕುಮಾರ್ ಬಾಬು, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ವೇಮಣ್ಣ, ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಪದವಿ, ಐಟಿಐ, ಜಿಟಿಟಿಸಿ, ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರು ಇದ್ದರು.

> **ಜಿಲ್ಲೆಯಲ್ಲಿ ನಡೆಯುವ ಉದ್ಯೋಗ ಮೇಳ ಆಯೋಜನೆ ಕುರಿತು ಕಾಲೇಜುಗಳಲ್ಲಿ ಹಾಗೂ ವೃತಿಪರ ಶಿಕ್ಷಣ ಸಂಸ್ಥೆಗಳಿಗೆ ಹಾಗೂ ಯುವನಿಧಿ ಯೋಜನೆಯ ಫಲಾನುಭವಿಗಳು ಸಹ ಉದ್ಯೋಗದ ಮೇಳದ ಬಗ್ಗೆ ಮಾಹಿತಿ ನೀಡಬೇಕು. ಮೇಳದಲ್ಲಿ ಭಾಗವಹಿಸುವ ಉದ್ಯೋಗಾಂಕ್ಷಿಗಳಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲ ಸೌಕರ್ಯ ಕಲ್ಪಿಸಬೇಕು ಎಂದು ತಿಳಿಸಿದ ಅವರು, ಉದ್ಯೋಗ ಮೇಳದ ನೋಂದಣಿ ಪ್ರಕ್ರಿಯೆ ಪ್ರಾರಂಭ ಮಾಡುವಂತೆ ಹಾಗೂ ನೊಂದಣಿ ಪ್ರಕ್ರಿಯೆ ಕುರಿತು ವ್ಯಾಪಕ ಪ್ರಚಾರ ನೀಡಬೇಕು, ಜಿಲ್ಲಾ ವೆಬ್‌ಸೈಟ್‌ನಲ್ಲಿಯೂ ಮಾಹಿತಿ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.**

# ಮಿನಿ ನ್ಯೂಸ್

## ನಾಯಕನಹಟ್ಟಿ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಜಾತ್ರೆ

• ಉದಯವಾಹಿನಿ, ಚಿತ್ರದುರ್ಗ

ಚಳ್ಳಕೆರೆ ತಾಲ್ಲೂಕು ನಾಯಕನಹಟ್ಟಿ ಗ್ರಾಮದ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಜಾತ್ರಾ ಮಹೋತ್ಸವ ನಿಮಿತ್ತ ಮಾರ್ಚ್ 09 ರಿಂದ 24 ರವರೆಗೆ ನಡೆಯಲಿದ್ದು, ಮಾ. 16 ರಂದು ರಥೋತ್ಸವ ಜರುಗಲಿದೆ. ಈ ಕುರಿತಂತೆ ಸಿದ್ಧತೆಗಳನ್ನು ಕೈಗೊಳ್ಳಲು ಫೆ. 17 ರಂದು ಬೆಳಿಗ್ಗೆ 11 ಗಂಟೆಗೆ ಪೂರ್ವಭಾವಿ ಸಭೆ ನಾಯಕನಹಟ್ಟಿ ಶ್ರೀ ಗುರುತಿಪ್ಪೇರುದ್ರಸ್ವಾಮಿ ದೇವಸ್ಥಾನದ ಒಳಮಠ ಆವರಣದಲ್ಲಿ ಜರುಗಲಿದೆ. ಸಭೆಯ ಅಧ್ಯಕ್ಷತೆಯನ್ನು ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ವಹಿಸುವರು.

ಸಭೆಯಲ್ಲಿ ಮೊಳಕಾಲ್ಮೂರು ಶಾಸಕರು, ಜಿಲ್ಲಾಧಿಕಾರಿಗಳು ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗವಹಿಸುವರು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ತಿಳಿಸಿದ್ದಾರೆ.

## ಟೈಲ್ಸ್ ಕಾರ್ಖಾನೆಯಿಂದ ವಿಷಕಾರಿ ಹೊಗೆ: ಪರಿಸರಕ್ಕೆ ಮಾರಕ

• ಉದಯವಾಹಿನಿ, ಕಮಲಾಪುರ,

ತಾಲ್ಲೂಕಿನಲ್ಲಿ ಪರವಾನಿಗೆ ಇಲ್ಲದೆ ಅಕ್ರಮವಾಗಿ ನಡೆಸುತ್ತಿರುವ ಟೈಲ್ಸ್ ಕಾರ್ಖಾನೆಯಿಂದ ಅಕ್ಕ ಪಕ್ಕದ ರೈತರ ಬೆಳೆಗಳು ಬಾಡಿ ಹೋಗುತ್ತಿವೆ, 10, 15 ಕಿಲೋಮೀಟರ್ ಗ್ರಾಮದವರೆಗೆ ಟೈಯರ್ ಸುಡುವ ಹೊಗೆಯಿಂದ ರಾತ್ರಿ ಸಮಯ ದುರ್ವಾಸನೆ ಹೆಚ್ಚಾಗುತ್ತಿದೆಎಂದು ಸಾರ್ವಜನಿಕರು ದೂರಿದ್ದಾರೆ. ಕಮಲಾಪುರ ಹತ್ತಿರ ಟೈರ್ಸುಡುವ ಕಾರ್ಖಾನೆಯಲ್ಲಿ ಅನುಪಯುಕ್ತ ವಾಹನಗಳ ಟೈಲ್ಸ್ ಖರೀದಿಸಿ, ಟ್ರಕ್ ಹಾಗೂ ಲಾರಿಗಳ ಮೂಲಕ ಟೈಯರ್ ತಂದು ಸುಡುತ್ತಾರೆ. ಅದರಿಂದ ಬರುವ ಹೊಗೆಯಿಂದ ಅಥವಾ ಗಂಧಕದ ಡೈಆಕ್ಸೈಡ್ ಕಾರ್ಖಾನೆ ಸುತ್ತಲು ಇರುವ ರೈತರ ಜಮೀನುಗಳು ಫಲವತ್ತತೆ ಕಳೆದುಕೊಳ್ಳುತ್ತಿವೆ. ಭೂಮಿಯ ಪರಿಸರ ವ್ಯವಸ್ಥೆಗಳಿಗೂ ಅಪಾಯ ಉಂಟಾಗಲಿದೆ. ವಾಯು ಮಾಲಿನ್ಯವು ಬರೀ ಓಜೋನ್ ಅಷ್ಟೇ ಅಲ್ಲದೆ, ಸಕಲ ಜೀವರಾಶಿಗಳಿಗೂ ಹಾನಿಕಾರಕವಾಗಿದೆ. ಇಷ್ಟೆಲ್ಲಹಾನಿಕಾರಕವಾಗಿದ್ದರೂ ಇದರ ಬಗ್ಗೆ ಜನಸ್ಪಂದನ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಿಗೆ ದೂರುನೀಡಿದ್ದರೂ ರಾಜಾರೋಷವಾಗಿ ಪರವಾನಿಗೆ ಇಲ್ಲದೆ ಅಕ್ರಮವಾಗಿ ಕಾರ್ಖಾನೆ ನಡೆಸುತ್ತಿದ್ದಾರೆ.ಇದರಿಂದ,ಸಾರ್ವಜನಿಕರು ಮೂಗು ಮುಚ್ಚಿಕೊಂಡು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆಎಂದು ಡಿಕೆ ಶಿವಕುಮಾರ ಅಭಿಮಾನಿ ಬಳಗದ ತಾಲ್ಲೂಕ ಅಧ್ಯಕ್ಷ ಚವಾಣ್. ಸಂತೋಷ್ ರಾಂಪುರ ಬೇಸರ ವ್ಯಕ್ತಪಡಿಸಿದ್ದಾರೆ.

## 25 ಕೋಟಿ ವೆಚ್ಚದಲ್ಲಿ ಕಿತ್ತೂರ ರಾಣಿ ಚೆನ್ನಮ್ಮ ವಸತಿ ಶಾಲೆ ಉದ್ಘಾಟನೆ

• ಉದಯವಾಹಿನಿ, ಬೀದರ

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೀದರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇವರ ಸಂಯುಕ್ತ ಆಶ್ರಯದಲ್ಲಿ ಬೀದರ ತಾಲ್ಲೂಕಿನ ಅಲಿಯಂಬರ್ ಗ್ರಾಮದಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಸುಸಜ್ಜಿತ ಕಿತ್ತೂರ ರಾಣಿ ಚೆನ್ನಮ್ಮ ವಸತಿ ಶಾಲೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಉದ್ಘಾಟಿಸಿದರು. ನಂತರ ಮಾತನಾಡಿದ ಸಚಿವರು ಗ್ರಾಮೀಣ ಪ್ರದೇಶದ ಹೆಣ್ಣು ಮಕ್ಕಳಿಗೆ ಸಕಲ ಸೌಲಭ್ಯ ಕೌಶಲ್ಯಗಳನ್ನೊಳಗೊಂಡ ಶಿಕ್ಷಣ ನೀಡಲು ಸರಕಾರವು ಕಿತ್ತೂರರಾಣಿ ಚೆನ್ನಮ್ಮ ವಸತಿ ಶಾಲೆ ನಿರ್ಮಿಸಿದ್ದು ವಿದ್ಯಾರ್ಥಿನಿಯರು ಇದರ ಸದುಪಯೊಗ ಪಡೆದುಕೊಳ್ಳಬೇಕೆಂದರು. ಇಡೀ ದೇಶ ಸ್ವಾತಂತ್ರ ಸಂಗ್ರಾಮದಲ್ಲಿ ಪ್ರಥಮ ಹೋರಾಟಗಾರ್ತಿಯಾಗಿದ್ದ ರಾಣಿ ಚೆನ್ನಮ್ಮಳ ಕಾರ್ಯ, ಧೈರ್ಯ, ತ್ಯಾಗದ ಬಗ್ಗೆ ಹೆಣ್ಣು ಮಕ್ಕಳು ತಿಳಿದುಕೊಂಡಿರಬೇಕು. ರಾಣಿ ಚೆನ್ನಮ್ಮಳಂತೆ ಧೈರ್ಯಶಾಲಿಗಳಾಗಿ ಉನ್ನತ ಶಿಕ್ಷಣ ಪಡೆದು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳುವಂತೆ ಸಚಿವರು ಕರೆ ನೀಡಿದರು.

## ಹಿರಿಯರ ಆಶೀರ್ವಾದದಿಂದ 3ನೇ ಬಾರಿಗೆ ಅಧಿಕಾರ ಸ್ವೀಕರಿಸಿದ್ದೇನೆ

• ಉದಯವಾಹಿನಿ, ಬೀದರ

ರಾಜ್ಯದ ಅರಣ್ಯ ಪರಿಸರ ಹಾಗೂ ಜೀವಶಾಸ್ತ್ರ ಇಲಾಖೆಯ ಸಚಿವರು ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ, ರಾಜ್ಯದ ಪೌರಾಡಳಿತ ಸಚಿವರು, ಈ ಕ್ಷೇತ್ರದ ಶಾಸಕರಾದ ರಹಿಂಖಾನ್ ಬೀದರ ಜಿಲ್ಲೆಯ ಸಂಸದರು, ಯುವ ನಾಯಕರಾದ ಸಾಗರ ಖಂಡ್ರೆಯವರ ಮತ್ತು ಬೀದರ ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ ಸೇರಿದಂತೆ ಜಿಲ್ಲೆಯ ಎಲ್ಲಾ ಮುಂಚೂಣಿ ನಾಯಕರ ಆಶೀರ್ವಾದದಿಂದ ಮೂರನೇ ಬಾರಿಗೆ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷನಾಗಿ ಅಧಿಕಾರ ಸ್ವೀಕರಿಸಿದ್ದೇನೆ ಎಂದು ನೂತನ ಜಿಲ್ಲಾಧ್ಯಕ್ಷ ಫರೀದುಲ್ಲಾ ಖಾನ್ ತಿಳಿಸಿದರು. ಜಿಲ್ಲಾ ಪತ್ರಿಕಾ ಭವನದಲ್ಲಿ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು 2017ರಲ್ಲಿ ನಾನು 891 ಮತಗಳನ್ನು ಪಡೆದು ಪ್ರಥಮ ಬಾರಿಗೆ ಜಿಲ್ಲಾಧ್ಯಕ್ಷನಾದೆ. 2021ರಲ್ಲಿ 1814 ಮತಗಳನ್ನು ಪಡೆದು ಯುವ ಮತದಾರರು ಎರಡನೇ ಬಾರಿಗೆ ಅವಕಾಶ ನೀಡಿದರು. ಈಗ 65489 ಮತದಾರರ ಪೈಕಿ 9753 ಮತಗಳನ್ನು ಪಡೆದು ಮೂರನೇ ಬಾರಿಗೆ ಜಿಲ್ಲಾಧ್ಯಕ್ಷನಾಗುವ ಮೂಲಕ ಇಡೀ ರಾಜ್ಯದಲ್ಲಿ ಯಾರೂ ಸಹ ಮೂರನೇ ಬಾರಿಗೆ ಅಧ್ಯಕ್ಷನಾಗಿರುವುದಿಲ್ಲ, ನಮ್ಮ ಹಿರಿಯರು ಇಂತಹ ಅವಕಾಶ ನೀಡಿದ್ದಕ್ಕೆ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು.ಬೀದರ ಜಿಲ್ಲೆಯಲ್ಲಿ 2024 ಆಗಸ್ಟ್ ತಿಂಗಳಲ್ಲಿ ಚುನಾವಣೆ ಪ್ರಕ್ರಿಯೆ ಆರಂಭವಾಗಿತ್ತು. ಅದೇ ಸಮಯದಲ್ಲಿ ಮತದಾನ ಸಹ ನಡೆಯಿತು. ಒಟ್ಟು 131 ಉಮೇದುವಾರರು ಕಣದಲ್ಲಿದ್ದರು. ಒಟ್ಟು 65489 ಮತದಾರರು ನಮ್ಮ ಜಿಲ್ಲೆಯಲ್ಲಿದ್ದು, ಎಲ್ಲಾ ಮತದಾರರು ಮತ ಚಲಾವಣೆ ಮಾಡಿದ್ದಾರೆ. ಅದರಲ್ಲಿ ಅವರ ಪೈಕಿ 30,827 ಮತದಾರರ ಹಕ್ಕು ಸ್ವೀಕೃತಗೊಂಡಿದ್ದು, 34,901 ಮತಗಳು ತಿರಸ್ಕೃತಗೊಂಡಿರುತ್ತವೆ. ಈ ತಿಂಗಳ 7ರಂದು ಫಲಿತಾಂಶ ಹೊರಬಂದಿದೆ ಎಂದು ಫರಿದುಲ್ಲಾ ಖಾನ್ ವಿವರಿಸಿದರು. ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಅಲಿಶಾನ್ ಖಾದ್ರಿ ಮಾತನಾಡಿ, ರಾಜ್ಯದಲ್ಲಿ ಒಟ್ಟು 26 ಲಕ್ಷ ಯುವ ಕಾಂಗ್ರೆಸ್ ಮತದಾರರಿದ್ದು, ಅದರಲ್ಲಿ 11 ಲಕ್ಷ ಯುವ ಮತದಾರರು ತಮ್ಮ ಹಕ್ಕು ಚಲಾವಣೆ ಮಾಡಿದ್ದಾರೆ. ಬೀದರ ಜಿಲ್ಲೆಯಿಂದ ರಾಜ್ಯ ಪ್ರಧಾನ ಕಾರ್ಯದರ್ಶಿ ಹುದ್ದೆಗೆ ನನ್ನನ್ನು ಆಯ್ಕೆ ಮಾಡಿದ್ದಕ್ಕಾಗಿ ರಾಜ್ಯದ ಸಿಎಂ, ಡಿಕೆಶಿ, ಯುವ ಕಾಂಗ್ರೆಸ್ ರಾಜ್ಯಾಧ್ಯಕ್ಷ ಮಂಜುನಾಥ ಸೇರಿದಂತೆ ರಾಜ್ಯದ ಎಲ್ಲಾ ಮಂತ್ರಿಗಳು, ಪಕ್ಷದ ಶಾಸಕರು, ಮುಂಚೂಣಿ ಘಟಕದ ಎಲ್ಲಾ ಮುಖಂಡರಿಗೆ ಅಭಿನಂದಿಸುವುದಾಗಿ ಹೇಳಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ- ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ.

**ವೃಷಭ** ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ.

**ಮಿಥುನ** ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು. ಅವನು(ಳು) ನಿಮ್ಮ ನಿರೀಕ್ಷೆಗಳನ್ನು ಪೂರೈಸುವುದು ನಿಮ್ಮ ಕನಸನ್ನು ನನಸಾಗಿಸಬಹುದು.

**ಕರ್ಕಾಟಕ** ಸ್ವತಃ ಔಷಧಿ ತೆಗೆದುಕೊಳ್ಳುವುದು ಔಷಧ ಅವಲಂಬನೆಯನ್ನು ಉಂಟುಮಾಡಬಹುದು. ಯಾವುದೇ ಔಷಧ ತೆಗೆದುಕೊಳ್ಳುವ ಮೊದಲು ವೈದ್ಯರ ಸಲಹೆ ಪಡೆಯಿರಿ.

**ಸಿಂಹ** ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಇಂದು ನೀವು ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು.

**ಕನ್ಯಾ** ನಿಮ್ಮನ್ನು ನೀವೇ ನೋಡಿಕೊಳ್ಳುವ ಬಯಕೆಗೆ ಇತರರ ಅಗತ್ಯಗಳು ಕಡಿವಾಣ ಹಾಕುತ್ತವೆ. ಭಾವನೆಗಳನ್ನು ತಡೆಹಿಡಿಯಬೇಡಿ , ವಿಶ್ರಾಂತಿ ಪಡೆಯುವ ಸಲುವಾಗಿ ನೀವು ಇಷ್ಟಪಡುವುದನ್ನೇನಾದರೂ ಮಾಡಿ.

**ತುಲಾ** ನಿಮ್ಮ ಒರಟು ವರ್ತನೆ ನಿಮ್ಮ ಸ್ನೇಹಿತರಿಗೆ ಸ್ವಲ್ಪ ಸಮಸ್ಯೆ ಉಂಟು ಮಾಡಬಹುದು. ನಿಮ್ಮ ಸಹೋದರ-ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು.

**ವೃಶ್ಚಿಕ** ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ ಆದರೆ ರಾತ್ರಿಯ ಸಮಯದಲ್ಲಿ ಯಾವುದೊ ಹಳೆಯ ವಿಷ್ಯದ ಬಗ್ಗೆ ನೀವು ಜಗಳವಾಡಬಹುದು. ನೀವು ಕೆಲಸದಲ್ಲಿ ಅಭಿನಂದನೆಗಳನ್ನು ಪಡೆಯಬಹುದು.

**ಧನಸ್ಸು** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಹಣದ ಪರಿಸ್ಥಿತಿ ದಿನದಲ್ಲಿ ನಂತರ ಸುಧಾರಿಸುತ್ತದೆ. ನಿಮ್ಮ ಕುಟುಂಬ ಸದಸ್ಯರು ಹೇಳಿದ್ದೆಲ್ಲವಕ್ಕೂ ನೀವು ಒಪ್ಪದಿರಬಹುದು.

**ಮಕರ** ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ.

**ಕುಂಭ** ಆರೋಗ್ಯ ಚೆನ್ನಾಗಿರುತ್ತದೆ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ.

**ಮೀನ** ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ದೊಡ್ಡ ಯೋಜನೆಗಳನ್ನು ಮತ್ತು ಕಲ್ಪನೆಗಳಿರುವ ಯಾರಾದರೂ ನಿಮ್ಮ ಗಮನ ಸೆಳೆಯುತ್ತಾರೆ.

# ಬದುಕು ರೂಪಿಸಿಕೊಳ್ಳಲು ಸಾಹಿತ್ಯ ಕ್ಷೇತ್ರ ಪೂರಕ: ಡಾ.ಪಟ್ಟದ್ದೇವರು

## ● ಸಂಸ್ಕೃತಿ, ಸಂಸ್ಕಾರ ಬೆಳೆಯಬೇಕಾದರೆ ಸಾಹಿತ್ಯ ಸೊಗಡನ್ನು ಓದುವ ಮನಸ್ಸುಗಳು ಅಗತ್ಯ

• ಉದಯವಾಹಿನಿ ಕಮಲನಗರ

ಮಾನವ ತನ್ನ ಬದುಕನ್ನು ರೂಪಿಸಿಕೊಳ್ಳಲು ಜಾನಪದ ಸಾಹಿತ್ಯ ಕ್ಷೇತ್ರ ಪೂರಕ ಎಂದು ಬಸವ ಕಲ್ಯಾಣದ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷರಾದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಹೇಳಿದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನ ಠಾಣಾಕುಶನೂರ ಗ್ರಾಮದಲ್ಲಿ ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತು ನವದೆಹಲಿ, ಕರ್ನಾಟಕ ಜಾನಪದ ಪರಿಷತ್ತು ತಾಲ್ಲೂಕಾ ಘಟಕ ಔರಾದ್(ಬಾ), ಗ್ರಾಮ ಪಂಚಾಯತ ಠಾಣಾಕುಶನೂರ ಹಾಗೂ ಪ್ರಸನ್ನ ಕಲೆ ಮತ್ತು ಸಾಂಸ್ಕೃತಿಕ ಟ್ರಸ್ಟ್(ರಿ), ಸಂತಪೂರ ಸಹಯೋಗದಲ್ಲಿ ನಡೆದ ರಾಷ್ಟ್ರೀಯ ಜನಪದ ನೃತ್ಯೋತ್ಸವ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

**ರಾಷ್ಟ್ರೀಯ ಜನಪದ ನೃತ್ಯೋತ್ಸವ**

ಜನಪದ ಸಂಸ್ಕೃತಿ ಎಲ್ಲಾ ಸಾಹಿತ್ಯ ಪ್ರಕಾರಗಳಿಗೆ ಮುಖ್ಯ ಪ್ರೇರಣೆಯಾಗಿದೆ, ಬದುಕಿನಲ್ಲಿ ತಾತ್ವಿಕತೆ ನೆಲೆಗಟ್ಟು ಮರೆಯಾಗಿ ತಂತ್ರಗಾರಿಕೆ ತುಂಬಿಕೊಂಡಿದೆ. ಜನಪದ ಸಾಹಿತ್ಯ ಆಕಾಶದಷ್ಟು ವಿಶಾಲ ಹಾಗೂ ಸಾಗರದಷ್ಟು ಆಳವಾಗಿದೆ. ಅದರಲ್ಲಿ ಬರುವ ಕಥೆ, ಗೀತೆ ಜನಪದ ಸಾಹಿತ್ಯ ಸೇರಿ ವಿಶ್ವ ಸಾಹಿತ್ಯದ ಮೂಲವನ್ನೆಲ್ಲ ಒಳಗೊಂಡಿರುವುದು ಜನಪದಗಳಲ್ಲಿ ಇರುವುದು ಎಂದರು.

ಸಂಸ್ಕೃತಿ, ಸಂಸ್ಕಾರ ಬೆಳೆಯಬೇಕಾದರೆ ಸಾಹಿತ್ಯ ಸೊಗಡನ್ನು ಓದುವ ಮನಸ್ಸುಗಳು ಅಗತ್ಯ. ಸಾಹಿತ್ಯ ಚೈತನ್ಯ ಶಕ್ತಿ. ನಮ್ಮ ಅಂತರಂಗದ ಅನುಭವತೆಯನ್ನು ಸೇರಿಸಿ ಅದರ ಜತೆಗೆ ನಾವು ಶ್ರಮಿಸಿದಾಗ ಸಾಹಿತ್ಯ, ಕಾವ್ಯದ ಹುಟ್ಟು ಸಾಧ್ಯ ಎಂದರು. ರಾಜಕುಮಾರ ಹೆಬ್ಬಾಳೆ ಅವರು ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್‌ನ ಪ್ರಧಾನ ಕಾರ್ಯದರ್ಶಿ ಆದ ಬಳಿಕ ಜಿಲ್ಲೆಯಲ್ಲಿ ಜಾನಪದ ಕಾರ್ಯಕ್ರಮಗಳಿಗೆ ಇನ್ನಷ್ಟು ಶಕ್ತಿ ಬಂದಿದೆ ಎಂದು ಹೆಬ್ಬಾಳೆ ಅವರ ಕೆಲಸಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಡಿವೈಎಸ್ಪಿ ಶಿವಾನಂದ ಪವಾಡಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜನಪದ ಸಾಹಿತ್ಯ ಎಲ್ಲಾ ಭಾಷೆಗಳ ತವರೂರು. ಜನಪದ ಸಾಹಿತ್ಯ ಈಗ ನಶಿಸುತ್ತಿರುವುದು ಕಳವಳಕಾರಿ ವಿಷಯ ಎಂದರು. ದೇಶದ ಎಲ್ಲಾ ಹಳ್ಳಿಗಳಲ್ಲಿ ಜನಪದ ಸಾಹಿತ್ಯ ಕಣ್ಮರೆಯಾಗುತ್ತಿದೆ. ಜನಪದ ಸಾಹಿತ್ಯ ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಹೇಳಿದರು.

ಜನಪದ ಸಾಹಿತ್ಯ ನಮ್ಮ ಜೀವನದ ಹಾಸು ಹೊಕ್ಕಾಗಿದೆ. ಆದರೆ ನಾವೆಲ್ಲರೂ ಜನಪದ ಸಾಹಿತ್ಯ ಮರೆಯುತ್ತಿದ್ದೇವೆ. ಬರಿ ಸರಕಾರದ ಒಂದು ಇಲಾಖೆಯಿಂದ ಜನಪದ ಸಾಹಿತ್ಯ ಉಳಿಸಲು ಸಾಧ್ಯವಿಲ್ಲ. ಜನಪದ ಸಾಹಿತ್ಯ ಉಳಿಸಿ ಬೆಳೆಸುವುದು ಎಲ್ಲರ ಆದ್ಯ ಕರ್ತವ್ಯವಾಗಬೇಕಿದೆ ಎಂದು ಕರ್ನಾಟಕ ಜಾನಪದ ಪರಿಷತ್ತು ತಾಲ್ಲೂಕು ಅಧ್ಯಕ್ಷ ಡಾ. ಸಂಜೀವಕುಮಾರ ಜುಮ್ಮಾ ಪ್ರಾಸ್ತಾವಿಕ ಮಾತನಾಡಿದರು. ಔರಾದ(ಬಾ)ತಹಶೀಲ್ದಾರ ಮಲ್ಲಶೆಟ್ಟಿ ಚಿದ್ರೆ, ಕಮಲನಗರ ತಹಶೀಲ್ದಾರ ಅಮಿತಕುಮಾರ ಕುಲಕರ್ಣಿ, ತಾಪಂ ಎಡಿ ಶಿವಕುಮಾರ ಘಾಟೆ, ಔರಾದ ಪತ್ರಕರ್ತ ಸಂಘದ ಅಧ್ಯಕ್ಷ ಶಿವಾನಂದ ಮುಕ್ತೆದಾರ್, ಶೀರಸ್ಥೆದಾರ ಶಿವಲಿಂಗ್, ಪಿಎಸ್‌ಐ ಸುಕಾನಂದ, ಮಾಜಿ ತಾಪಂ ಅಧ್ಯಕ್ಷ ಗಿರೀಶ ವಡಿಯಾರ್, ಗ್ರಾಪಂ ಸದಸ್ಯರಾದ ಶೇಷಪ್ಪ, ಅನಿಲ ಹೇಡೆ, ಜಾನಪದ ಪರಿಷತ್ ಸದಸ್ಯ ಸಂಗೀತಾ ಕಾಂಬಳೆ ಸೇರಿದಂತೆ ಅನೇಕರಿದ್ದರು.

ಪಿಡಿಒ ಮನೋಹರ ಎಸ್ ಸ್ವಾಗತಿಸಿದರು. ಅನುದಾನಿತ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಶಿವಶರಣಪ್ಪ ವಲ್ಲೇಪೂರೆ ನಿರೂಪಣೆ ಮಾಡಿದರು ಜಗನ್ನಾಥ ಜಿರಗೆ ವಂದಿಸಿದರು.

**ಕಣ್ಮನ ಸೆಳೆದ ಜನಪದ ನೃತ್ಯೋತ್ಸವ:** ತಾಲ್ಲೂಕಿನ ಠಾಣಾಕುಶನೂರ ಗ್ರಾಮದ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ನಡೆದ ರಾಷ್ಟ್ರೀಯ ಜನಪದ ನೃತ್ಯೋತ್ಸವ ನೃತ್ಯ ರೂಪಕಗಳು ಒಂದಕ್ಕಿಂತ ಒಂದು ಆಕರ್ಷಣೀಯವಾಗಿದ್ದವು. ನೋಡುಗರಿಗೆ ಮನಮೋಹಕವಾಗಿದ್ದವು.

ಮಹಾರಾಷ್ಟ್ರದ ಮುಂಬಯಿ ಸುರಬಿ ಮನಸಾಲೆ ತಂಡದಿಂದ ಲಾವಣಿನೃತ್ಯ, ಪಂಜಾಬ್ ಹರಮನ್ ಪ್ರೀತಸಿಂಗ್ ಕಲಾತಂಡದಿಂದ ಭಾಂಗಡಾ ನೃತ್ಯ, ಹೈದ್ರಾಬಾದ್ ಭಾಷೆ ಮತ್ತು ಸಂಸ್ಕೃತಿ ಇಲಾಖೆ ತಂಡದಿಂದ ಒಗ್ಗುಡೊಲು ನೃತ್ಯ, ಬೋನಾಲು ಕೋಲಾಟಂ, ಉಸ್ಮಾನಬಾದ್ ಕೃಷ್ಣ ಮಹಾವಿದ್ಯಾಲಯ ಕಲಾತಂಡದಿಂದ ಬಂಜಾರ ನೃತ್ಯ, ಧನಗಿರಿ ನೃತ್ಯ, ಹೋಳಸಮುದ್ರ ಅಕ್ಕಮಹಾದೇವಿ ಕೋಲಾಟ ಸಂಘ, ಮುಧೋಳ ಕಾಶಿವಿಶ್ವನಾಥ ಕೋಲಾಟ ಸಂಘದಿಂದ ಕೋಲಾಟ, ಠಾಣಾ ಕುಶನೂರ ಆರತಿ-ಭಾರತಿ ಕೋಲಾಟ ಸಂಘದಿಂದ ಕೋಲಾಟ, ಬೆಳಕೋಣಿ ಮಲ್ಲಿಕಾರ್ಜುನ ಭಜನಾ ಸಂಘದಿಂದ ಚಕ್ರಿ ಭಜನೆ ಕಾರ್ಯಕ್ರಮ ನಡೆದರುವು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಸಾರ್ವಜನಿಕರಿಗೆ ನೃತ್ಯೋತ್ಸವ ಕಣ್ಮನ ಸೆಳೆಯಿತು.

### ಸಾಧಕರಿಗೆ ಸತ್ಕಾರ

ನವದೆಹಲಿಯ ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ ಪ್ರಧಾನ ಕಾರ್ಯದರ್ಶಿಗಳು ಡಾ.ರಾಜಕುಮಾರ ಹೆಬ್ಬಾಳೆ, ಕಲಬುರಗಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರು ಶ್ರೀ ಸಿದ್ದಪ್ಪ ಮೂಲಗೆ, ಕಮಲನಗರ ಸರಕಾರಿ ನೌಕರರ ಸಂಘದ ಅಧ್ಯಕ್ಷ ಶ್ರೀ ಸುನಿಲ ಕಸ್ತೂರೆ, ಸರಸ್ವತಿ ಸಾಧಕ ಸಿರಿ ರಾಷ್ಟ್ರ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಕಮಲಮ್ಮಾ ಅರ್ಜುನ್ ಅವರಿಗೆ ಈ ವೇಳೆ ಅಭಿನಂದನಾ ಫಲಕ ನೀಡುವ ಮೂಲಕ ವಿಶೇಷವಾಗಿ ಸತ್ಕರಿಸಲಾಯಿತು.

### ಕಲಾ ತಂಡಗಳ ಭವ್ಯ ಮೆರವಣಿಗೆ

ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ ನವದೆಹಲಿ, ಕರ್ನಾಟಕ ಜಾನಪದ ಪರಿಷತ್ ಔರಾದ್, ಗ್ರಾಪಂ ಠಾಣಾಕುಶನೂರ ಹಾಗೂ ಪ್ರಸನ್ನ ಕಲೆ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ರಾಷ್ಟ್ರೀಯ ಜನಪದ ನೃತ್ಯೋತ್ಸವ ಅಂಗವಾಗಿ ಆಯೋಜಿಸಿರುವ ಕಲಾ ತಂಡಗಳ ಭವ್ಯ ಮೆರವಣಿಗೆ ಠಾಣಾಕುಶನೂರ ಮುಖ್ಯ ರಸ್ತೆಯಲ್ಲಿ ನಡೆಯಿತು. ಮೆರವಣಿಗೆಯೂದ್ದಕ್ಕೂ ಕಲಾವಿದರು ಕಲಾತಂಡಗಳ ನೃತ್ಯ ಎಲ್ಲರ ಗಮನ ಸೆಳೆಯಿತು. ಮುಂಬಯಿ, ಪಂಜಾಬ್, ಹೈದ್ರಾಬಾದ್, ಉಸ್ಮಾನಬಾದ್ ಸೇರಿದಂತೆ ಒಟ್ಟು 10ಕ್ಕೂ ಅಧಿಕ ಕಲಾತಂಡಗಳು ಕಲಾವಿದರು ಮೆರವಣಿಗೆಯಲ್ಲಿ ಪಾಲ್ಗೊಂಡರು.

# ಲಾಲ್‌ಬಾಗ್‌ನಲ್ಲಿ 250 ಅಡಿ ಎತ್ತರದ ಅಂಬೇಡ್ಕರ್ ಮೂರ್ತಿ ಸ್ಥಾಪಿಸಿ

• ಉದಯವಾಹಿನಿ ಬೀದರ್

ರಾಜ್ಯ ರಾಜ್ಯಧಾನಿ ಬೆಂಗಳೂರಿನ ಹೃದಯ ಭಾಗವಾದ ಲಾಲಬಾಗ್ ನಲ್ಲಿ ಸಂವಿಧಾನ ಶಿಲ್ಪಿ, ವಿಶ್ವರತ್ನ, ಜ್ಞಾನ ಭಂಡಾರ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 250 ಅಡಿ ಎತ್ತರದ ಮೂರ್ತಿ ಸ್ಥಾಪಿಸಬೇಕೆಂದು ಕರ್ನಾಟಕ ಭೀಮ್ ಸೇನೆ ರಾಜ್ಯ ಕಾರ್ಯದರ್ಶಿ ವಿಷ್ಣುವರ್ಧನ್ ವಾಲ್ದೊಡ್ಡಿ ತಿಳಿಸಿದರು.


ಉದಯವಾಹಿನಿ ಚಿತ್ರ

ನೆರೆಯ ತೆಲಂಗಾಣ ಹಾಗೂ ಆಂಧ್ರಪ್ರದೇಶದಲ್ಲಿ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭವ್ಯ ಮೂರ್ತಿಗಳು ಸ್ಥಾಪಿಸಲಾಗಿದ್ದು, ನಮ್ಮ ರಾಜ್ಯದಲ್ಲಿಯೂ ಅವರ ಮೂರ್ತಿ ಸ್ಥಾಪಿಸಿ ಇಂದಿನ ಯುವ ಜನಾಂಗಕ್ಕೆ ದಾರಿ ತೋರಬೇಕಿದೆ ಎಂದರು. 2023ರಲ್ಲಿ ನಡೆದ ರಾಜ್ಯ ವಿಧಾನಸಭೆ ಚುನಾವಣೆಯಲ್ಲಿ ಹಾಗೂ 2024ರಲ್ಲಿ ನಡೆದ ಲೋಕಸಭೆ ಚುನಾವಣೆಯಲ್ಲಿ ಎಲ್ಲಾ ದಲಿತ ಪರ ಸಂಘಟನೆಗಳು ಹಾಗೂ ಸಮುದಾಯವು ಒಟ್ಟಿಗೆ ಸೇರಿ ಕಾಂಗ್ರೆಸ್ ಪಕ್ಷದ ಕೈ ಬಲಪಡಿಸಿದ ಕಾರಣ ರಾಜ್ಯದಲ್ಲಿ 136 ಸ್ಥಾನಗಳನ್ನು ಗಳಿಸುವಲ್ಲಿ ಕಾಂಗ್ರೆಸ್ ಸರ್ಕಾರ ಯಶಸ್ವಿಯಾಗಿದೆ. ಹಾಗಾಗಿ ದಲಿತರ ಬಲದಿಂದ ಬಲಿಷ್ಠ ಸರ್ಕಾರ ರಾಜ್ಯದಲ್ಲಿರುವಾಗ ಅಂಬೇಡ್ಕರ್ ಅವರ ಮೂರ್ತಿ ಸ್ಥಾಪಿಸಿ ದಲಿತರ ಋಣ ತೀರಿಸಬೇಕೆಂದು ಹೇಳಿದರು. ಲಾಲಬಾಗನಲ್ಲಿ ಅಂಬೇಡ್ಕರ್ ಮೂರ್ತಿ ಜೊತೆಗೆ ಡಿಜಿಟಲ್ ಗ್ರಂಥಾಲಯ ಸ್ಥಾಪಿಸಿ ಪುಸ್ತಕ ಸಂಸ್ಕೃತಿಯನ್ನು ಬಲಪಡಿಸಬೇಕು ಹಾಗೂ ಯುವ ಜನರು ಪುಸ್ತಕ ಓದುವ ಹವ್ಯಾಸಕ್ಕೆ ಮಾರುಹೋಗಲು ಈ ಮಹತ್ವದ ಕಾರ್ಯ ರಾಜ್ಯ ಸರ್ಕಾರ ಕೂಡಲೇ ಮಾಡಬೇಕೆಂದು ವಾಲದೊಡ್ಡಿ ಮನವಿ ಮಾಡಿದರು.

> ಲಾಲಬಾಗ್ ನಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಮೂರ್ತಿ ಸ್ಥಾಪಿಸಬೇಕೆಂದು ಸಿಎಂ ಸಿದ್ದರಾಮಯ್ಯ ಹಾಗೂ ಎಲ್ಲಾ ಸಂಬಂದಿಸಿದ ಸಚಿವರಿಗೆ ಗುರುವಾರ ಆಯಾ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಗುವುದೆಂದು
>
> -ಹರ್ಷಿತ ದಾಂಡೇಕರ್, ಕರ್ನಾಟಕ ಭೀಮಸೇನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ


ದಲಿತ ಯುವ ಮುಖಂಡ ಗೌತಮ ಪ್ರಸಾದ ಈ ಸಂದರ್ಭದಲ್ಲಿ ಮಾತನಾಡಿ, ದಲಿತ ಸಮುದಾಯವು ಯಾವಾಗಲೂ ಕಾಂಗ್ರೆಸ್ ಪಕ್ಷದ ಕೈ ಬಲಪಡಿಸುವಲ್ಲಿ ಮುಂಚೂಣಿಯಲ್ಲಿರುತ್ತದೆ. ಹಾಗೆ ಪ್ರತಿಯೊಂದು ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಬೆನ್ನಿಗೆ ನಿಂತು ಮನೋವಾದಿ ವಿಕೃತ ಮನಸ್ಸುಗಳಿಗೆ ಸೆಡ್ಡು ಹೊಡೆಯುತ್ತದೆ. ಆದ್ದರಿಂದ ದಲಿತರ ಧ್ವನಿಯಾಗಿರುವ ಅಂಬೇಡ್ಕರ್ ಅವರ ಮೂರ್ತಿ ಸ್ಥಾಪಿಸಿ, ಡಿಜಿಟಲ್ ಗ್ರಂಥಾಲಯ ನಿರ್ಮಿಸಲು ಈ ವರ್ಷದ ಬಜೆಟ್‌ನಲ್ಲಿ ಘೋಷಣೆ ಮಾಡಬೇಕೆಂದು ಹಾಗೂ ಈ ಕಾರ್ಯವನ್ನು ಏಪ್ರಿಲ್ 2026ರ ಒಳಗಡೆ ಮೂರ್ತಿ ಸ್ಥಾಪನೆಯ ಕಾರ್ಯ ಪರಿಪೂರ್ಣಗೊಳಿಸಬೇಕೆಂದು ಅವರು ಮನವಿ ಮಾಡಿದರು.

ಸೇನೆಯ ಪ್ರಮುಖರಾದ ಶಿವಾನಂದ ಉಪ್ಪೆ, ಅಕ್ಷಯ ವರ್ಧನ, ವಿಜಯಕುಮಾರ ಬಾವಿಕಟ್ಟಿ, ಸುರೇಶ ಜೋಜನಾಕರ್, ರವಿ ಮೋರೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಮೆಕ್ಸಿಕೋ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪದವಿ: ಸನ್ಮಾನ

• ಉದಯವಾಹಿನಿ, ಚಿಂಚೋಳಿ

ಸಮಾಜ ಸೇವೆಯಲ್ಲಿ ತೊಡಗಿ ಜನರ ಕಷ್ಟ ದುಃಖದಲ್ಲಿ ಸದಾಕಾಲ ಭಾಗಿಯಾಗಿ ಜನರ ಸಮಸ್ಯೆಗಳು ಪರಿಹರಿಸುವಲ್ಲಿ ಹಾಗೂ ಮಹಿಳೆಯರ ಸಬಲೀಕರಣದಲ್ಲಿ ಸದಾಸೇವೆ ಮಾಡುತ್ತಿರುವ ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷೆ ನರಸಮ್ಮ ಆವುಂಟಿಯವರಿಗೆ ಮೆಕ್ಸಿಕೋ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ದೊರಕಿದ್ದು ಅತ್ಯಂತ ಸಂತೋಷದ ವಿಷಯವಾಗಿದೆ ಎಂದು ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಹೇಳಿದರು.


ಉದಯವಾಹಿನಿ ಚಿತ್ರ


ಪಟ್ಟಣದ ಚಂದಾಪೂರದ ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಮೆಕ್ಸಿಕೋ ಟೋಲೋಸಾ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪದವಿ ಪಡೆದ ನರಸಮ್ಮ ಲಕ್ಷ್ಮಣ ಆವುಂಟಿ ಅವರಿಗೆ ಸನ್ಮಾನಿಸಿ ಗೌರವಿಸಿ ಮಾತನಾಡಿದ ಅವರು, ಪುರುಷ ಯಶಸ್ವಿಗೆ ಒಬ್ಬ ಮಹಿಳೆಯ ಬೆಂಬಲ ಅವಶ್ಯವೆನ್ನುತ್ತಾರೆ ಆದರೆ ಇಲ್ಲಿ ಒಬ್ಬ ಮಹಿಳಾ ಯಶಸ್ವಿಗೆ ಒಬ್ಬ ಪುರುಷ ಪತಿ ಲಕ್ಷ್ಮಣ ಆವುಂಟಿಯ ಸದಾ ಬೆಂಬಲದಿಂದಲ್ಲೇ ಅವರು ಎತ್ತರಮಟ್ಟಕ್ಕೆ ಬೆಳೆಯುತ್ತಿದ್ದಾರೆ, ನಿಮ್ಮ ಬೆಂಬಲಕ್ಕೆ ನಾವೆಲ್ಲರೂ ಸದಾ ಇದ್ದೇವೆ ಎಂದರು. ಈ ಸಂದರ್ಭದಲ್ಲಿ ಬಸವರಾಜ ಮಾಲಿ, ಬಾಬುರಾವ ಪಾಟೀಲ, ಅಬ್ದುಲ್ ಬಾಷೀದ್, ಲಕ್ಷ್ಮಣ ಆವುಂಟಿ, ಜಗನ್ನಾಥ ಗುತ್ತೇದಾರ, ಆರ್. ಗಣಪತರಾವ, ನಾಗೇಶ ಗುಣಾಜೀ, ರಾಮಶೇಟ್ಟಿ ಪವ್ವಾರ, ಹಾಫೀಜ್ ಅಬ್ದುಲ್ ಹಮೀದ್, ಅಂಕೀತಾ, ಖಲೀಲ್ ಪಟೇಲ, ಗೋಪಾಲ ರಾಠೋಡ, ರಾಮಲು, ಸಂಜುಕುಮಾರ ಪೂಜಾರಿ ಇದ್ದರು.

# ಕುಡಿಯುವ ನೀರಿನ ಸಮಸ್ಯೆಯನ್ನು ಖುದ್ದಾಗಿ ಪರಿಶೀಲಿಸಿದ ಎಂ. ಶಮಿವುಲ್ಲಾ

• ಉದಯವಾಹಿನಿ ಅರಸೀಕೆರೆ


ಉದಯವಾಹಿನಿ ಚಿತ್ರ

ಅರಸೀಕೆರೆ ನಗರಸಭೆ ವ್ಯಾಪ್ತಿಯಲ್ಲಿ ಕೆಲವು ದಿನಗಳಿಂದ ಕುಡಿಯುವ ನೀರಿನ ಸರಬರಾಜು ವ್ಯವಸ್ಥೆಯಲ್ಲಿ ವ್ಯತ್ಯಾಸ ಉಂಟಾಗಿದೆ ಎಂದು ತಿಳಿದು ನಗರಸಭೆ ಅಧ್ಯಕ್ಷರಾದ ಎಮ್ ಶಮಿವುಲ್ಲಾ ಮತ್ತು ನಗರಸಭೆ ಉಪಾಧ್ಯಕ್ಷರಾದ ಮನೋಹರ್ ಮೇಸ್ತ್ರಿ ಪರಿಶೀಲನೆ ನಡೆಸಿದರು 2024 25 ನೇ ಸಾಲಿನ 15ನೇ ಹಣಕಾಸು ಯೋಜನೆ ನಿಧಿ ಅಡಿಯಲ್ಲಿ ಹೊಸದಾಗಿ 270 ಅಶ್ವಶಕ್ತಿಯ ಪಂಪ್‌ಸೆಟ್ ಅನ್ನು ಅಳವಡಿಸಲಾಗುತ್ತಿದ್ದು ಸದರಿ ಕಾಮಗಾರಿಯನ್ನು ಅಧ್ಯಕ್ಷರು ಪರಿಶೀಲಿಸಿದರು ಮಾಜಿ ನಗರಸಭಾ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಜಿ ಟಿ ಗಣೇಶ್ ಸೇರಿದಂತೆ ಇನ್ನೂ ಹಲವರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ದಾವಲ್ ಮಲಿಕ ಅಜ್ಯನವರು(ಪುಣ್ಯಾಶ್ರಮ ಕೋಡೆಕಲ್) ಅಜ್ಜಾನವರು ಉದಯ ವಾಹಿನಿ ಪತ್ರಿಕೆಯ ಹೊಸ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಿ... ಪತ್ರಿಕೆ ಶುಭ ಕೋರಿದರು.. ಈ ಸಂಧರ್ಭದಲ್ಲಿ ನಮ್ಮ ತಂದೆಯವರ ಅಯ್ಯುಬ್ ಪಟೇಲ್ ಬಳಗಾನೂರ ಇದ್ದರು.**

# ಪಂಚಲಿಂಗೇಶ್ವರ ಜಾತ್ರಾ ಮಹೋತ್ಸವ ಪ್ರಾರಂಭ

• ಉದಯವಾಹಿನಿ ಕೆಂಭಾವಿ

ಯಾಳಗಿ ಗ್ರಾಮದಲ್ಲಿ ಶಿವರಾತ್ರಿ ಅಂಗವಾಗಿ ಜರುಗುವ ಶ್ರೀ ಪಂಚಲಿಂಗೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಪುರಾಣ ಹಾಗೂ ಧಾರ್ಮಿಕ ಕಾರ್ಯಕ್ರಮದ ಜ್ಞಾನ ದಾಸೋಹದ ಕಾರ್ಯಕ್ರಮ ಇಂದಿನಿಂದ ಪ್ರಾರಂಭಗೊಳ್ಳಲಿದೆ ಎಂದು ದೇವಸ್ಥಾನದ ಅರ್ಚಕರಾದ ಸತೀಶ ಭಟ್ ಜೋಶಿ ತಿಳಿಸಿದ್ದಾರೆ .


ಉದಯವಾಹಿನಿ ಚಿತ್ರ

ಪುರಾಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ಪ್ರವಚನವನ್ನು ಹಿರೇಮಠದ ಶ್ರೀ ಅಜಯೇಂದ್ರ ಶ್ರೀಗಳು ಎಕದಂಡ ಗಿಮಠ ಹಾಗೂ ಸಂಗಿತ ಹಾಗೂ ತಬಲ ವಾದ್ಯ ಶರಣಕುಮಾರ ಯಾಳಗಿ ಹಾಗೂ ಯಮನೇಶ ಯಾಳಗಿ ನಡೆಸಿಕೊಡಲಿದ್ದಾರೆ. ದೇವಸ್ಥಾನದ ಸದ್ಭಕ್ತ ಮಂಡಳಿ ಎಲ್ಲರೂ ಪ್ರತಿನಿತ್ಯ ಕೃಷ್ಣಪ್ಪಯ್ಯನ ಗದ್ದುಗೆಯ ಆವರಣದಲ್ಲಿ ಪ್ರವಚನ

ಪ್ರತಿ ವರ್ಷದಂತೆ ಈ ವರ್ಷ ಕೂಡ ಶ್ರೀ ಪಂಚಲಿಂಗೇಶ್ವರ ಮಹೋತ್ಸವ ಮಾಹಶಿವರಾತ್ರಿ ಅಂಗವಾಗಿ ದಿ. 13ರಿಂದ ದಿ.27 ರವರೆಗೆ ಜರುಗಲಿದ್ದು ಈ ಭಾರಿ ಕಲ್ಯಾಣ ಕರ್ನಾಟಕ ಭಾಗದ ಕಾಲಜ್ಞಾನಿಯಾದ ಕೊಡೆಕಲ್ ಬಸವೇಶ್ವರ ಜೀವನ ನಡೆಯಲಿದೆ ಮತ್ತು ಜಾತ್ರಾ ಮಹೋತ್ಸವ ಹಲವು ದಾರ್ಮಿಕ ಕಾರ್ಯಕ್ರಮಗಳು ಜರಗಲಿವೆ. ಭಕ್ತರು ಈ ಜಾತ್ರಾ ಮಹೋತ್ಸವದ ಕಾರ್ಯಕ್ರಮದಲ್ಲಿ ಕುಟುಂಬ ಸಮೇತ ಭಾಗವಹಿಸಬೇಕೆಂದು ಸದ್ಭಕ್ತರಲ್ಲಿ ಆಡಳಿತ ಮಂಡಳಿ ವಿನಂತಿಸಿದೆ

# ಗೂಡ್ಸ್ ವಾಹನ ಪಲ್ಟಿ ಓರ್ವ ಸಾವು, ನಾಲ್ವರು ಗಂಭೀರ

• ಉದಯವಾಹಿನಿ ಕಾರ್ಕಳ

ಕಳಸ ಜಾತ್ರೆ ಮುಗಿಸಿ ಮಂದಾರ್ತಿ ಜಾತ್ರೆಗೆ ಹೋಗುತ್ತಿದ್ದ ವ್ಯಾಪಾರಿಗಳು ಪ್ರಯಾಣಿಸುತ್ತಿದ್ದ ಗೂಡ್ಸ್ ವಾಹನವೊಂದು ಮಾಳ ಎಸ್ ಕೆ.




ಬಾರ್ಡರ್ ಕೆಳಗೆ ಪೆಟ್ರೋಲ್ ಬಂಕ್ ಬಳಿ ಬ್ರೇಕ್ ವೈಫಲ್ಯಕ್ಕೊಳಗಾಗಿ ಪಲ್ಟಿ ಹೊಡೆದಿದ್ದು, ನಾಲ್ವರು ಗಂಭೀರಗೊಂಡಿದ್ದು, ಓರ್ವ ಸಾವನ್ನಪ್ಪಿದ್ದಾನೆ.

# ರಾಜ್ಯ ಸರ್ಕಾರ ಅತಿಥಿ ಶಿಕ್ಷಕರ ವೇತನದ ಅನುದಾನ ಬಿಡುಗಡೆ ಮಾಡಿದರೂ ಅಧಿಕಾರಿಗಳು ವೇತನ ನೀಡುವಲ್ಲಿ ವಿಫಲ: ಪ್ರತಿಭಟನೆ

• ಉದಯವಾಹಿನಿ ಚಿಂಚೋಳಿ

ಅತಿಥಿ ಶಿಕ್ಷಕರ ವೇತನವನ್ನು ರಾಜ್ಯ ಸರ್ಕಾರ ಬಿಡುಗಡೆ ಮಾಡಿದರೂ ಕ್ಷೇತ್ರ ಶಿಕ್ಷಣಾಧಿಕಾರಿಗಳೂ ಮತ್ತು ಕಛೇರಿ ಅಧಿಕಾರಿಗಳು ಐದು ತಿಂಗಳ ವೇತನ ನೀಡದೆ ಕುಂಟು ನೆಪವೊಡ್ಡುತ್ತಿದ್ದು ಇದರಿಂದ ಜೀವನ ನಿರ್ವಹಣೆಗೆ ತುಂಬಾ ತೊಂದರೆ ಆಗುತ್ತಿದೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಾಲಾ ಅತಿಥಿ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ಸೈದಾಪೂರ ಹೇಳಿದರು.


ಉದಯವಾಹಿನಿ ಚಿತ್ರ

**ಜೀವನ ನಿರ್ವಹಣೆಗೆ ತುಂಬಾ ತೊಂದರೆ**

ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯ ಎದುರು ಪ್ರಾಥಮಿಕ ಮತ್ತು ಪ್ರೌಢ ಶಾಲಾ ಅತಿಥಿ ಶಿಕ್ಷಕರ ಸಂಘದ ವತಿಯಿಂದ ಪ್ರತಿಭಟನೆ ನಡೆಸಿ ಅತಿಥಿ ಶಿಕ್ಷಕರ ವೇತನವನ್ನು ಶೀಘ್ರದಲ್ಲೇ ನೀಡುವಂತೆ ಒತ್ತಾಯಿಸಿ ಬಿಇಓ ವಿ.ಲಕ್ಷ್ಮಯ್ಯ ಯವರಿಗೆ ಮನವಿಪತ್ರ ಸಲ್ಲಿಸಿ ಮಾತನಾಡಿದ ಅವರು, ಅತಿಥಿ ಶಿಕ್ಷಕರ ಕಳೆದ ಐದು ತಿಂಗಳ ವೇತನ ನೀಡುತ್ತಿಲ್ಲವೆಂದು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅನೇಕ ಬಾರಿ ಮೌಖಿಕವಾಗಿ ಮನವಿ ಮಾಡಿದರು ಕ್ಯಾರೆ ಅನ್ನದೆ ನಮ್ಮನ್ನು ಬಿಇಓ ಮತ್ತು ಕಛೇರಿ ಅಧಿಕಾರಿಗಳು ವೇತನ ನೀಡದೆ ಕುಂಟುನೇಪ ಹೇಳುತ್ತಿದ್ದಾರೆ ಅದಕ್ಕಾಗಿ ಪ್ರತಿಭಟನೆ ಮಾಡುತ್ತಿದ್ದೇವೆ. ಜಿಲ್ಲೆಯ ಬೇರೆ ತಾಲ್ಲೂಕುಗಳಾದ ಸೇಡಂ ಚಿತ್ತಾಪುರ ತಾಲ್ಲೂಕುಗಳಲ್ಲಿ ಅತಿಥಿ ಶಿಕ್ಷಕರ ವೇತನ ಸಮಯಕ್ಕೆ ತಕ್ಕಂತೆ ನೀಡುತ್ತಿದ್ದಾರೆ ಆದರೆ ಚಿಂಚೋಳಿ ತಾಲ್ಲೂಕಿನಲ್ಲಿ ಅಧಿಕಾರಿಗಳು ವೇತನ ನೀಡದೆ ಬರಿ ಕುಂಟುನೇಪ ಮಾತ್ರ ಹೇಳುತ್ತಿದ್ದಾರೆ. ತಾಲ್ಲೂಕಿನಲ್ಲಿ ಒಟ್ಟಾರೆ 371 ಜನ ಅತಿಥಿ ಶಿಕ್ಷಕರಿದ್ದು, 2025ರ ಜನವರಿ, ಫೆಬ್ರವರಿ, ಮಾರ್ಚ್ ತಿಂಗಳವರೆಗೆ 404ಜನ ಅತಿಥಿ ಶಿಕ್ಷಕರ ರಾಜ್ಯ ಸರ್ಕಾರ ವೇತನ ಬಿಡುಗಡೆ ಮಾಡಿದೆ, ಆದರೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕಛೇರಿ ಅಧಿಕಾರಿಗಳು 2024ರ ಜೂನ್, ಅಕ್ಟೋಬರ್, ನವೆಂಬರ್, ಡಿಸೆಂಬರ್ ಮತ್ತು 2025ರ ಜನವರಿ ತಿಂಗಳುಗಳ ಒಟ್ಟಾರೆ 5 ತಿಂಗಳ ವೇತನ ನೀಡದೆ ಕುಂಟುನೇಪ ಹೇಳುತ್ತಿದ್ದಾರೆ, ಮತ್ತು 2023-24ನೇ ಸಾಲಿನ 40ಜನ ಅತಿಥಿ ಶಿಕ್ಷಕರ ಕೆಲವರ ಎರಡು ತಿಂಗಳು ಕೆಲವರ ನಾಲ್ಕು ತಿಂಗಳು ಕೆಲವರ ಒಂದು ವರ್ಷ ಕೆಲವರ ಮೂರು ತಿಂಗಳು ವೇತನ ನೀಡಿಲ್ಲ ಹೀಗಾಗಿ ಅಧಿಕಾರಿಗಳು ಅತಿಥಿ ಶಿಕ್ಷಕರ ವೇತನ ನೀಡುವಲ್ಲಿ ವಿಫಲರಾಗಿದ್ದಾರೆ ಎಂದು ವಿವರವಾಗಿ ಹೇಳಿದರು.

ಗೋಪಾಲರಾವ ಕಟ್ಟಿಮನಿ, ಗೋಪಾಲ ಗಾರಂಪಳ್ಳಿ, ವಿಜಯಕುಮಾರ ಚೇಂಗಟಾ, ಗಿರಿರಾಜ ನಾಟೀಕಾರ, ಯಲ್ಲಾಲಿಂಗಸ್ವಾಮಿ, ವೆಂಕಟಪ್ಪ, ಶಾಮರಾವ, ಧರ್ಮು, ಮಹಿಪಾಲ, ರವೀಂದ್ರ , ವಿಷ್ಣುಕಾಂತ, ವಿಜಯಕುಮಾರ, ಮಲ್ಲೇಶ, ಅಶೋಕಬಾಬು, ನರಸಿಂಮ್ಲು, ಜಗಪ್ಪ, ಶಂಕರ, ಶಶಿಕಾಂತ, ರಮೇಶ, ಭೀಮಸಿಂಗ್, ಚಂದ್ರಕಾಂತ, ದಸ್ತಾಪ್ಪ, ರಮೇಶ, ಜೈಸಿಂಗ್, ಚಂದ್ರಕಲಾ, ಆಧಿಶಕ್ತಿ ಸೇರಿದಂತೆ ಅನೇಕರಿದ್ದರು.

# ಫೆ. 15ರಂದು ವಸತಿ ಶಾಲೆಗಳ 6ನೇ ತರಗತಿಗೆ ಪ್ರವೇಶ ಪರೀಕ್ಷೆ

## ಅಧಿಕಾರಿಗಳು ಪರೀಕ್ಷಾ ಪಾವಿತ್ರ್ಯತೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು: ಬಿ.ಟಿ. ಕುಮಾರಸ್ವಾಮಿ

• ಉದಯವಾಹಿನಿ ಚಿತ್ರದುರ್ಗ

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧೀನದಲ್ಲಿರುವ ವಿವಿಧ ವಸತಿ ಶಾಲೆಗಳಿಗೆ 06 ನೇ ತರಗತಿ ಪ್ರವೇಶಕ್ಕೆ ದಾಖಲಾತಿ ಪಡೆಯಲು ಪ್ರವೇಶ ಪರೀಕ್ಷೆ ಫೆ. 15 ರಂದು ಜಿಲ್ಲೆಯಾದ್ಯಂತ ನಡೆಯಲಿದ್ದು, ಅಧಿಕಾರಿಗಳು ಪರೀಕ್ಷಾ ಪಾವಿತ್ರ್ಯತೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

**200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ**

ವಸತಿ ಶಾಲೆಗಳಲ್ಲಿ ಬರುವ ಶೈಕ್ಷಣಿಕ ವರ್ಷಕ್ಕೆ 06 ನೇ ತರಗತಿ ದಾಖಲಿಗೆ ಪ್ರವೇಶ ಪರೀಕ್ಷೆ ನಡೆಸುವ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ, ಮಾದರಿ, ಅಟಲ್ ಬಿಹಾರಿ ವಾಜಪೇಯಿ, ಶ್ರೀಮತಿ ಇಂದಿರಾ ಗಾಂಧಿ, ಡಾ. ಬಿ.ಆರ್. ಅಂಬೇಡ್ಕರ್, ಮಾಸ್ತಿ ವೆಂಕಟೇಶ ಅಯ್ಯಂಗಾರ್, ಸಂಗೊಳ್ಳಿ ರಾಯಣ್ಣ, ಕವಿ ರನ್ನ, ಗಾಂಧಿ ತತ್ವ, ಶ್ರೀ ನಾರಾಯಣ ಗುರು ಮುಂತಾದ ವಸತಿ ಶಾಲೆಗಳಿಗೆ 06 ನೇ ತರಗತಿ ಪ್ರವೇಶಕ್ಕೆ ದಾಖಲಾತಿ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಫೆ. 15 ರಂದು ಮಧ್ಯಾಹ್ನ 02.30 ರಿಂದ ಸಂಜೆ 04.30 ರವರೆಗೆ ಜಿಲ್ಲೆಯ ಒಟ್ಟು 20 ಪರೀಕ್ಷಾ ಕೇಂದ್ರಗಳಲ್ಲಿ ಪ್ರವೇಶ ಪರೀಕ್ಷೆ ನಡೆಯಲಿದ್ದು, ಒಟ್ಟು 7317 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ನೊಂದಾಯಿಸಿಕೊಂಡಿದ್ದಾರೆ.

ಪ್ರವೇಶ ಪರೀಕ್ಷೆಯನ್ನು ವ್ಯವಸ್ಥಿತ ರೀತಿಯಲ್ಲಿ ಯಾವುದೇ ಗೊಂದಲಗಳಿಗೆ ಅವಕಾಶ ಮಾಡಿಕೊಡದಂತೆ, ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡಿಕೊಂಡು ನಡೆಸಬೇಕು. ಪರೀಕ್ಷಾ ಕೇಂದ್ರಗಳಿಗೆ ನಿಗದಿತ ವೇಳೆಯೊಳಗೆ ಆಯಾ ಮಾರ್ಗಾಧಿಕಾರಿಗಳು ಪ್ರಶ್ನೆಪತ್ರಿಕೆಯನ್ನು ತಲುಪಿಸಬೇಕು. ಪರೀಕ್ಷೆ ಬಳಿಕ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಂಡು, ನಿಗದಿತ ಸ್ಥಳಕ್ಕೆ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನಕ್ಕಾಗಿ ತಲುಪಿಸುವ ಕಾರ್ಯವನ್ನು ಕೈಗೊಳ್ಳಬೇಕು. ಈಗಾಗಲೆ ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದು, ಪೊಲೀಸ್ ಇಲಾಖೆಯವರು ಪರೀಕ್ಷಾ ದಿನದಂದು ಕೇಂದ್ರಗಳಿಗೆ ಸೂಕ್ತ ಪೊಲೀಸ್ ಬಂದೋಬಸ್ತ್ ಕೈಗೊಳ್ಳಬೇಕು. ಪರೀಕ್ಷಾ ಕೇಂದ್ರದೊಳಗೆ ಯಾವುದೇ ಮೊಬೈಲ್, ಎಲೆಕ್ಟ್ರಾನಿಕ್ ಉಪಕರಣಗಳನ್ನು ಬಳಸದಂತೆ ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು, ಹಾಗೂ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರ ಪ್ರವೇಶ ಸಂದರ್ಭದಲ್ಲಿ ಸೂಕ್ತ ರೀತಿಯಲ್ಲಿ ತಪಾಸಣೆಯನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ತಹಶೀಲ್ದಾರರು, ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯ ಉಪನ್ಯಾಸಕರು, ಪ್ರಾಂಶುಪಾಲರುಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಪ್ರವೇಶ ಪರೀಕ್ಷೆ ಕುರಿತು ಮಾಹಿತಿ ನೀಡಿ, ಪ್ರವೇಶ ಪರೀಕ್ಷೆಗೆ ಜಿಲ್ಲೆಯಲ್ಲಿ ಒಟ್ಟು 20 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿದ್ದು, 7317 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಚಳ್ಳಕೆರೆ ತಾಲ್ಲೂಕಿನಲ್ಲಿ 05 ಪರೀಕ್ಷಾ ಕೇಂದ್ರಗಳಲ್ಲಿ 1919 ವಿದ್ಯಾರ್ಥಿಗಳು. ಚಿತ್ರದುರ್ಗ ತಾಲ್ಲೂಕಿನ 02 ಕೇಂದ್ರಗಳಲ್ಲಿ 915 ವಿದ್ಯಾರ್ಥಿಗಳು, ಹಿರಿಯೂರಿನ 03 ಕೇಂದ್ರಗಳಲ್ಲಿ 1341 ವಿದ್ಯಾರ್ಥಿಗಳು, ಹೊಳಲ್ಕೆರೆಯ 02 ಕೇಂದ್ರಗಳಲ್ಲಿ 591 ವಿದ್ಯಾರ್ಥಿಗಳು, ಹೊಸದುರ್ಗದ 04 ಕೇಂದ್ರಗಳಲ್ಲಿ 1297 ವಿದ್ಯಾರ್ಥಿಗಳು ಹಾಗೂ ಮೊಳಕಾಲ್ಮೂರು ತಾಲ್ಲೂಕಿನ 04 ಪರೀಕ್ಷಾ ಕೇಂದ್ರಗಳಲ್ಲಿ 1254 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆ ತಲುಪಿಸಲು ಹಾಗೂ ಉತ್ತರ ಪತ್ರಿಕೆ ಸ್ವೀಕರಿಸಲು ಈಗಾಗಲೆ 21 ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದೆ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಕ್ಯಾಲ್ಕುಲೇಟರ್, ಮೊಬೈಲ್ ಫೋನ್, ಬ್ಲೂಟೂತ್ ಡಿವೈಸ್, ವೈರ್ಲೆಸ್ ಸೆಟ್ ಇತ್ಯಾದಿ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರುವುದನ್ನು ನಿಷೇಧಿಸಲಾಗಿದೆ
>
> - ಪುಟ್ಟಸ್ವಾಮಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ

# ಬ್ಲಾಕ್ ಬೆಲ್ಟ್ ಶ್ರೇಣಿಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಸನ್ಮಾನ

• ಉದಯವಾಹಿನಿ ಅಥಣಿ

ಇಲ್ಲಿನ ಶೋಟೋಕನ್ ಕರಾಟೆ ಸಂಸ್ಥೆಯಿಂದ 2020 -24 ರ ಅವರಿಗೆ ಡಿಪ್ಲೋಮಾ ಇನ್ ಕರಾಟೆ ತರಬೇತಿಯಲ್ಲಿ ಉತ್ತಮ ಸಾಧನೆ ಮಾಡಿ ಬ್ಲಾಕ್ ಬೆಲ್ಟ್ ಶ್ರೇಣಿಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಸಂಸ್ಥೆಯ ಮುಖ್ಯ ಕಾರ್ಯದರ್ಶಿ ಹಾಗೂ ತರಬೇತಿದಾರ ಮೋಹನಸಿಂಗ್ ರಜಪೂತ ಮಾತನಾಡಿ ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಉತ್ತಮವಾದ ಆಹಾರ ಮತ್ತು ದೈಹಿಕ ವ್ಯಾಯಾಮ ಕ್ರೀಡೆಗಳು ಸಹಕಾರಿಯಾಗಿದೆ. ನಾವು ಅಥಣಿಯಲ್ಲಿ ಶೋಟೋಕಾನ್ ಕರಾಟೆ ಸಂಸ್ಥೆಯನ್ನು ಕಳೆದ ಏಳು ವರ್ಷಗಳ ಹಿಂದೆ ಸ್ಥಾಪನೆ ಮಾಡುವ ಮೂಲಕ ಅನೇಕ ವಿದ್ಯಾರ್ಥಿಗಳಿಗೆ ಆತ್ಮ ಸಂರಕ್ಷಣೆಯ ಕಲೆಯನ್ನು ಕಲಿಸಿ ಕೊಡುತ್ತಿದ್ದೇವೆ. ಇದು ಜಪಾನ್ ದೇಶದ ಟಾಕಿಯೋದ ಪ್ರಸಿದ್ಧ ಕಲೆಯಾಗಿದೆ. ಅಲ್ಲಿನ ಸಂಸ್ಥೆಯ ಮಾರ್ಗದರ್ಶನದಂತೆ ನಮ್ಮ ದೇಶದಲ್ಲಿಯೂ ಕೂಡ ಅನೇಕ ಶೋಟೊಕಾನ್ ಕರಾಟೆ ತರಬೇತಿ ಸಂಸ್ಥೆಗಳನ್ನು ಸ್ಥಾಪನೆ ಮಾಡಲಾಗಿದ್ದು, ತರಬೇತಿ ಪಡೆದುಕೊಂಡ ವಿದ್ಯಾರ್ಥಿಗಳಿಗೆ ಜಪಾನ್ ದೇಶದ ಮುಖ್ಯ ಕಚೇರಿಯಿಂದಲೇ ಪ್ರಮಾಣ ಪತ್ರಗಳನ್ನು ವಿತರಿಸಲಾಗುತ್ತಿದೆ.

ಪ್ರಸಕ್ತ ವರ್ಷದಲ್ಲಿ ತಾಲ್ಲೂಕಿನ ವಿಷ್ಣುವಾಡಿ ಗ್ರಾಮದ 14 ಜನ ವಿದ್ಯಾರ್ಥಿಗಳು, ಅಥಣಿಯ ಮೂರು ಜನ ವಿದ್ಯಾರ್ಥಿಗಳು ಡಿಪ್ಲೋಮಾ ಇನ್ ಕರಾಟೆ ತರಬೇತಿ ಪಡೆದುಕೊಂಡಿದ್ದಾರೆ. ನಮ್ಮ ಸಂಸ್ಥೆಯಿಂದ ಈಗಾಗಲೇ ಒಟ್ಟು 25 ಜನ ವಿದ್ಯಾರ್ಥಿಗಳು ಬ್ಲಾಕ್ ಬೆಲ್ಟ್ ಶ್ರೇಣಿಯಲ್ಲಿ ಪಾಸಾಗಿ ದೇಶ ವಿದೇಶಗಳಲ್ಲಿ ಜರುಗಿದ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಕರಾಟೆ ಚಾಂಪಿಯನ್ ಶಿಪ್‌ಗಳಲ್ಲಿ ಭಾಗವಹಿಸಿ ಚಿನ್ನದ, ಬೆಳ್ಳಿ ಮತ್ತು ಕಂಚಿನ ಪದಕಗಳನ್ನು ಪಡೆದುಕೊಂಡಿದ್ದು, ನಮಗೆ ಹೆಮ್ಮೆ ಅನಿಸುತ್ತದೆ ಎಂದು ಹೇಳಿದರು.

# ನ್ಯಾಯಾಂಗ ವ್ಯವಸ್ಥೆಯಲ್ಲಿ ಉನ್ನತ ವರ್ಗ, ಹಿಂದೂ, ಪುರುಷರ ಮೇಲುಗೈ?

## ಭಾರತ ನ್ಯಾಯಾಂಗ ವ್ಯವಸ್ಥೆಯು ಲಿಂಗ ಅನುಪಾತದಲ್ಲಿ ಸಾಧಿಸಿರುವ ಪ್ರಗತಿಯನ್ನು ಜಗತ್ತು ಸರಿಯಾಗಿ ಗ್ರಹಿಸುತ್ತಿಲ್ಲ

**ಹೊಸದಿಲ್ಲಿ:** ಭಾರತದ ನ್ಯಾಯಾಂಗ ವ್ಯವಸ್ಥೆಯಲ್ಲಿ ಭಾರತದ ಉನ್ನತ ವರ್ಗ, ಹಿಂದೂ, ಪುರುಷರ ಮೇಲುಗೈ ಇದೆಯೇ..? ಎಂಬ ಬಿಬಿಸಿ ಸಂದರ್ಶಕನ ಪ್ರಶ್ನೆಗೆ ಉತ್ತರಿಸಿರುವ ಸುಪ್ರೀಂಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿ(ಸಿಜೆಐ) ಡಿವೈ ಚಂದ್ರಚೂಡ್, ಭಾರತದ ನ್ಯಾಯಾಂಗ ವ್ಯವಸ್ಥೆಯನ್ನು ಒಳಹೊಕ್ಕು ನೋಡುವುದುಕ್ಕೂ, ಹೊರಗೆ ನಿಂತು ನೋಡುವುದಕ್ಕೂ ಸಾಕಷ್ಟು ವ್ಯತ್ಯಾಸವಿದೆ.. ಎಂದು ಸೂಚ್ಯವಾಗಿ ಹೇಳಿದ್ದಾರೆ.

ಬಿಬಿಸಿ ಹಾರ್ಡ್‌ಟಾಕ್ ಕಾರ್ಯಕ್ರಮದಲ್ಲಿ ಪತ್ರಕರ್ತ ಸ್ಟೀಫನ್ ಸ್ಯಾಕರ್ ಅವರ ಪ್ರಶ್ನೆಗಳಿಗೆ ನೇರ ಉತ್ತರ ನೀಡಿದ ನಿವೃತ್ತ ಸಿಜೆಐ ಡಿವೈ ಚಂದ್ರಚೂಡ್, ಭಾರತ ನ್ಯಾಯಾಂಗ ವ್ಯವಸ್ಥೆಯು ಲಿಂಗ ಅನುಪಾತದಲ್ಲಿ ಸಾಧಿಸಿರುವ ಪ್ರಗತಿಯನ್ನು ಜಗತ್ತು ಸರಿಯಾಗಿ ಗ್ರಹಿಸುತ್ತಿಲ್ಲ.. ಎಂದು ಅಭಿಪ್ರಾಯಪಟ್ಟಿದ್ದಾರೆ. ಇನ್ನು ಭಾರತದ ನ್ಯಾಯಾಂಗ ವ್ಯವಸ್ಥೆಯಲ್ಲಿ ಉನ್ನತ ವರ್ಗದ ಅದರಲ್ಲೂ ಹಿಂದೂಗಳ ಪ್ರಭಾವ ಹೆಚ್ಚಿರುವುದ ನಿಜವೇ..? ಎಂಬ ಬಿಬಿಸಿ ಸಂದರ್ಶಕ ಸ್ಟೀಫನ್ ಸ್ಯಾಕರ್ ಪ್ರಶ್ನೆಗೆ ಉತ್ತರಿಸಿದ ಡಿವೈ ಚಂದ್ರಚೂಡ್, ಭಾರತದ ಸಂವಿಧಾನದ ಆಶಯಗಳ ರಕ್ಷಕ ಸ್ಥಾನದಲ್ಲಿರುವ ನ್ಯಾಯಾಂಗ ವ್ಯವಸ್ಥೆಯಲ್ಲಿ ಎಲ್ಲರಿಗೂ ಸಮಾನ ಅವಕಾಶ ದೊರೆಯುತ್ತದೆ. ಇದನ್ನು ನೀವು ದೇಶದ ನ್ಯಾಯಾಲಯಗಳಲ್ಲಿ ಸ್ಪಷ್ಟವಾಗಿ ಗುರುತಿಸಬಹುದು ಎಂದು ಹೇಳಿದರು. ಸಮಾಜದ ಎಲ್ಲಾ ವರ್ಗದ ಜನರಿಗೆ ನ್ಯಾಯಾಂಗದಲ್ಲಿ ಸಮಾನ ಸ್ಥಾನಮಾನಗಳಿವೆ. ಆದರೆ ಇದರಲ್ಲಿ ಜಾತಿಯತೆಯ ಪ್ರಶ್ನೆ ಉದ್ಭವಿಸುವುದಿಲ್ಲ. ಎಂದು ನಿವೃತ್ತ ಸಿಜೆಐ ಸ್ಪಷ್ಟಪಡಿಸಿದರು. ನನ್ನ ತಂದೆ, ಸುಪ್ರೀಂಕೋರ್ಟ್ ಮಾಜಿ ಮುಖ್ಯ ನ್ಯಾಯಮೂರ್ತಿ ವೈ.ವಿ. ಚಂದ್ರಚೂಡ್ ಅವರು, ತಾವು ಮುಖ್ಯ ನ್ಯಾಯಾಧೀಶರಾಗಿ ಸೇವೆ ಸಲ್ಲಿಸುವವರೆಗೂ ನ್ಯಾಯಾಲಯಕ್ಕೆ ಪ್ರವೇಶಿಸಬಾರದು ಎಂದು ನನಗೆ ಸ್ಪಷ್ಟ ನಿರ್ದೇಶನ ನೀಡಿದ್ದರು. ಅದಕ್ಕಾಗಿಯೇ ನಾನು ಹಾರ್ವರ್ಡ್ ಲಾ ಸ್ಕೂಲ್‌ನಲ್ಲಿ ಮೂರು ವರ್ಷಗಳ ಕಾಲ ಕಾನೂನು ಅಧ್ಯಯನ ಮಾಡಿದೆ. ಅವರು ನಿವೃತ್ತರಾದ ನಂತರವೇ ನಾನು ಮೊದಲ ಬಾರಿಗೆ ನ್ಯಾಯಾಲಯಕ್ಕೆ ಪ್ರವೇಶಿಸಿದೆ. ಎಂದು ಡಿವೈ ಚಂದ್ರಚೂಡ್ ಇದೇ ವೇಳೆ ನುಡಿದರು. ನಮ್ಮ ನ್ಯಾಯಾಂಗ ವ್ಯವಸ್ಥೆ ಕೇವಲ ಉನ್ನತ ಜಾತಿಯವರಿಗೆ ಸೇರಿದ್ದಲ್ಲ. ಅದೇ ರೀತಿ ನ್ಯಾಯಾಂಗದ ಉನ್ನತ ಹಂತಗಳಲ್ಲಿ ಮಹಿಳೆಯರು ಹೆಚ್ಚು ಜವಾಬ್ದಾರಿಯುತ ಸ್ಥಾನಗಳಿಗೆ ಏರುತ್ತಿರುವುದನ್ನು ನಾವು ಗಮನಿಸಬೇಕು.. ಎಂದು ಸುಪ್ರೀಂಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿ ಹೇಳಿದರು. ಇನ್ನು ತಮ್ಮ ಅವಧಿಯಲ್ಲಿ ರಾಜಕೀಯ ಒತ್ತಡಗಳನ್ನು ಎದುರಿಸಬೇಕಾಯಿತೇ..? ಎಂಬ ಬಿಬಿಸಿ ಸಂದರ್ಶಕ ಸ್ಟೀಫನ್ ಸ್ಯಾಕರ್ ಪ್ರಶ್ನೆಗೆ ಉತ್ತರಿಸಿದ ಡಿವೈ ಚಂದ್ರಚೂಡ್, 2024ರ ಲೋಕಸಭಾ ಚುನಾವಣಾ ಫಲಿತಾಂಶಗಳು ಭಾರತ ಏಕಪಕ್ಷ ವ್ಯವಸ್ಥೆಯತ್ತ ಹೊರಳುತ್ತಿದೆ ಎಂಬ ವ್ಯಾಖ್ಯಾನವನ್ನು ಸುಳ್ಳಾಗಿಸಿದೆ.

ಶೇ. 50ಕ್ಕೂ ಹೆಚ್ಚು ಹೊಸ ನೇಮಕಾತಿ




**ಅದೇ ರೀತಿ ಗಣೇಶ ಚತುರ್ಥಿ ಹಬ್ಬದ ದಿನ ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ ಮನೆಗೆ ಭೇಟಿ ನೀಡಿದ್ದರ ಕುರಿತು ಕೇಳಲಾದ ಪ್ರಶ್ನೆಗೆ, ಸಾಂವಿಧಾನಿಕ ಹುದ್ದೆಯ ಪ್ರಾಥಮಿಕ ಕರ್ತವ್ಯಗಳಿಗೂ, ಇಬ್ಬರು ಉನ್ನತ ಹುದ್ದೆಯಲ್ಲಿರುವ ವ್ಯಕ್ತಿಗಳ ನಡುವಿನ ಸೌಜನ್ಯಯುತ ಭೇಟಿಗೂ ಸಂಬಂಧ ಕಲ್ಪಿಸುವುದು ಸರಿಯಲ್ಲ. ಅಲ್ಲದೇ ಕರ್ತವ್ಯ ನಿಷ್ಠೆ ಮತ್ತು ವೈಯಕ್ತಿಕ ಸಂಬಂಧಗಳಿಗೂ ಯಾವುದೇ ಸಂಬಂಧ ಇಲ್ಲ ಎಂಬುದನ್ನು ಅರ್ಥಮಾಡಿಕೊಳ್ಳುವಷ್ಟು ನಮ್ಮ ವ್ಯವಸ್ಥೆ ಪ್ರಬುದ್ಧವಾಗಿದೆ. ಎಂದು ನಿವೃತ್ತ ಸಿಜೆಐ ಮಾರ್ಮಿಕವಾಗಿ ಹೇಳಿದರು.**

ಭಾರತದ ರಾಜ್ಯಗಳನ್ನು ನೋಡಿದರೆ, ಪ್ರಾದೇಶಿಕ ಆಕಾಂಕ್ಷೆಗಳು ಮುನ್ನೆಲೆಗೆ ಬಂದಿರುವುದು ಸ್ಪಷ್ಟವಾಗುತ್ತದೆ. ಹಲವು ರಾಜ್ಯಗಳಲ್ಲಿ ಪ್ರಾದೇಶಿಕ ರಾಜಕೀಯ ಪಕ್ಷಗಳು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ ಮತ್ತು ಆ ರಾಜ್ಯಗಳನ್ನು ಆಳುತ್ತಿವೆ. ಹೀಗಾಗಿ ಭಾರತದ ನ್ಯಾಯಾಂಗ ವ್ಯವಸ್ಥೆ ರಾಜಕೀಯ ಒತ್ತಡಗಳನ್ನು ಎದುರಿಸುತ್ತದೆ ಎಂಬುದು ಕೇವಲ ಒಂದು ಭ್ರಮೆ ಎಂದು ಸ್ಪಷ್ಟಪಡಿಸಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನನ್ನ ಮನೆಗೆ ಭೇಟಿ ನೀಡುವ ಮುನ್ನ, ಸುಪ್ರೀಂಕೋರ್ಟ್ ಚುನಾವಣಾ ಬಾಂಡ್‌ಗಳ ಪ್ರಕರಣದ ಕುರಿತು ತನ್ನ ತೀರ್ಪನ್ನು ನೀಡಿತ್ತು. ಅಲ್ಲದೇ ಪ್ರಧಾನಿ ಮೋದಿ ಭೇಟಿ ಬಳಿಕವೂ, ಸರ್ಕಾರದ ವಿರುದ್ಧ ಹಲವಾರು ತೀರ್ಪುಗಳನ್ನು ಸರ್ವೋಚ್ಚ ನ್ಯಾಯಾಲಯ ನೀಡಿದೆ..

**ದೇಶದ ಜಿಲ್ಲಾ ನ್ಯಾಯಾಲಯಗಳಲ್ಲಿ ಶೇ. 50ಕ್ಕೂ ಹೆಚ್ಚು ಹೊಸ ನೇಮಕಾತಿಗಳಲ್ಲಿ ಮಹಿಳೆಯರ ಪಾಲು ಅಧಿಕವಾಗಿದೆ. ಕೆಲವು ರಾಜ್ಯಗಳಲ್ಲಿ ಈ ಪ್ರಮಾಣ ಶೇ. 60ರಿಂದ ಶೇ. 70ರವರೆಗೆ ಇದೆ. ಕಾನೂನು ಶಿಕ್ಷಣ ಮಹಿಳೆಯರನ್ನು ತಲುಪುತ್ತಿರುವುದರಿಂದ ಕಾನೂನು ಕಾಲೇಜುಗಳಲ್ಲಿ ಕಾಣುವ ಲಿಂಗ ಸಮತೋಲನವು, ಈಗ ದೇಶದ ಜಿಲ್ಲಾ ನ್ಯಾಯಾಲಯಗಳಲ್ಲಿ ಪ್ರತಿಫಲಿಸುತ್ತಿದೆ. ಭವಿಷ್ಯದಲ್ಲಿ ಈ ಮಹಿಳೆಯರು ಹೈಕೋರ್ಟ್ ಮತ್ತು ಸುಪ್ರೀಂಕೋರ್ಟ್‌ಗಳಲ್ಲಿ ಕೆಲಸ ಮಾಡಲಿದ್ದು, ಉನ್ನತ ನ್ಯಾಯಾಲಯಗಳಲ್ಲೂ ಮಹಿಳೆಯರ ಸಂಖ್ಯೆ ಸ್ವಾಭಾವಿಕವಾಗಿ ವೃದ್ಧಿಸಲಿದೆ.. ಎಂದು ಮಾಜಿ ಮುಖ್ಯ ನ್ಯಾಯಮೂರ್ತಿ ಭರವಸೆ ವ್ಯಕ್ತಪಡಿಸಿದರು.**

# ತಿಮ್ಮಪ್ಪನ ದರ್ಶನಕ್ಕೆ ಬರುವ ಭಕ್ತರಲ್ಲಿ ಟಿಟಿಡಿ ಮನವಿ



**ತಿರುಮಲ:** ತಿರುಪತಿ ವೆಂಕಟೇಶ್ವರನ ದರ್ಶನಕ್ಕೆ ದೇಶ ವಿದೇಶಗಳಿಂದ ಬರುವ ಭಕ್ತರ ನಿರ್ವಹಣೆ ಅತಿ ದೊಡ್ಡ ಸವಾಲಾಗಿರುವುದರಿಂದ ಕಾಲಕಾಲಕ್ಕೆ ಹಲವು ನಿಯಮಗಳನ್ನು ಮಾರ್ಪಡು ಮಾಡುವ ಟಿಟಿಡಿ ಇದೀಗ ಕಟ್ಟು ನಿಟ್ಟಿನ ಸೂಚನೆಯೊಂದನ್ನು ಹೊರಡಿಸಿದೆ.

ಟೋಕನ್ ಅಥವಾ ಟಿಕೆಟ್ ಪಡೆದು ಆಗಮಿಸುವ ಭಕ್ತರಿಗೆ ದೇವರ ದರ್ಶನಕ್ಕೆ ಅನುಕೂಲಕರ ವಾತಾವರಣ ಕಲ್ಪಿಸುವ ದೃಷ್ಟಿಯಿಂದ ನಿಗದಿತ ಸಮಯವನ್ನು ನೀಡಲಾಗುತ್ತಿದೆ. ಆದರೆ, ಭಕ್ತರು ಈ ನಿಗದಿತ ಸಮಯಕ್ಕೆ ಮೊದಲೇ ಬಂದು ದರ್ಶನದ ಭಕ್ತರ ಸಾಲಿನಲ್ಲಿ ಸೇರುತ್ತಿದ್ದಾರೆ. ಇದರಿಂದ ಭಕ್ತರ ನಿರ್ವಹಣೆ ಸವಾಲಾಗಿದೆ. ಹಾಗೂ ಜನದಟ್ಟಣೆ ಉಂಟಾಗುತ್ತಿದೆ.

ಈ ಹಿನ್ನಲೆ ಈ ಸೂಚನೆ ಹೊರಡಿಸಲಾಗಿದೆ. ಟೋಕನ್ ಅಥವಾ ಟಿಕೆಟ್ ಪಡೆದವರಿಗೆ ನಿಗದಿಪಡಿಸಿದ ಸಮಯಕ್ಕೆ ದೇವರ ದರ್ಶನದ ಪ್ರವೇಶದ ದ್ವಾರಕ್ಕೆ ಆಗಮಿಸಿಬೇಕು ಎಂದು ಸ್ಪಷ್ಟವಾಗಿ ತಿಳಿಸಿದೆ. ಈ ಸಂಬಂಧ ಈಗಾಗಲೇ ಮಾಧ್ಯಮಗಳಲ್ಲೂ ಭಕ್ತರಿಗೆ ಮನವಿ ಮಾಡಲಾಗಿದೆ. ನಿಗದಿತ ಸಮಯಕ್ಕೆ ಮೊದಲೇ ಬಂದರು, ದರ್ಶನದ ಸಾಲಿಗೆ ನುಗ್ಗುವುದು ಸರಿಯಲ್ಲ. ಇದರಿಂದ ಇತರರಿಗೆ ತೊಂದರೆಯಾಗುವ ಜೊತೆಗೆ ಈ ಸಂಬಂಧ ಕೆಲ ಭಕ್ತರು ವ್ಯವಸ್ಥೆ ನಿರ್ವಹಣೆ ಮತ್ತು ಜನದಟ್ಟಣೆ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸುಳ್ಳು ಸುದ್ದಿ ಹರಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಪದೇ ಪದೇ ಈ ಕುರಿತು ನಾವು ಭಕ್ತರಿಗೆ ಮನವಿ ಮಾಡುತ್ತಿದ್ದೇವೆ.


ಸಮಯ ಪಾಲನೆ ಮಾಡುವುದರಿಂದ ವ್ಯವಸ್ಥೆಗಳು ಸರಾಗವಾಗಿ ಸಾಗಲಿದೆ. ಭಕ್ತರು ಇದಕ್ಕೆ ಸಹಕಾರ ನೀಡಬೇಕು ಎಂದು ಟಿಟಿಡಿ ಪ್ರಕಟಣೆಯಲ್ಲಿ ಮನವಿ ಮಾಡಿಕೊಂಡಿದೆ.

# ಶೀಲ ಶಂಕಿಸಿ ಪತ್ನಿಯ ಕಣ್ಣು ಕಿತ್ತ ಕಿರಾತಕ ಪತಿ

**ಭೋಪಾಲ್,:** ಅಕ್ರಮ ಸಂಬಂಧ ಶಂಕೆಯಲ್ಲಿ ಪಾಪಿ ಪತಿಯೊಬ್ಬ ತನ್ನ ಪತ್ನಿಯ ಎರಡು ಕಣ್ಣುಗುಡ್ಡೆಗಳನ್ನು ಕಿತ್ತು ಹಾಕಿ ಆಕೆಯ ಖಾಸಗಿ ಅಂಗಗಳಿಗೂ ಗಾಯ ಮಾಡಿ ಪರಾರಿಯಾಗಿರುವ ಘಟನೆ ಮಧ್ಯ ಪ್ರದೇಶದ ಶಿವಪುರಿಯಲ್ಲಿ ನಡೆದಿದೆ.

ಪತ್ನಿ ಯಾರೊಂದಿಗೋ ಅಕ್ರಮ ಸಂಬಂಧ ಹೊಂದಿದ್ದಾಳೆಂದು ಅನುಮಾನ ಪಟ್ಟ ಪತಿ ಕೋಪದಲ್ಲಿ ಚಾಕುವಿನಿಂದ ಆಕೆಯ ಕಣ್ಣುಗುಡ್ಡೆಗಳನ್ನೇ ಕಿತ್ತು ಹಾಕಿದ್ದಲ್ಲದೆ, ಆಕೆಯ ಖಾಸಗಿ ಭಾಗಗಳು ಸೇರಿ ದಂತೆ ಹಲವು ಕಡೆ ಗಾಯಗಳನ್ನು ಮಾಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಭೋಪಾಲನ್‌ನ ಪೋಪ್ರಿ ಪ್ರದೇಶದಲ್ಲಿ ಈ ಘಟನೆ ನಡೆದಿದ್ದು, ಆರೋಪಿಯನ್ನು ಛೋಟು ಖಾನ್ ಎಂದು ಗುರುತಿಸಲಾಗಿದೆ. ಆತ ತನ್ನ ಪತ್ನಿಯ ಮೊಬೈಲ್ ಫೋನ್ ಕೇಳಿದ್ದ, ಆದರೆ ಆಕೆ ನೀಡಲು ನಿರಾಕರಿಸಿದಾಗ ಆಕೆಯ ಮೇಲೆ ಚಾಕುವಿನಿಂದ ಹಲ್ಲೆ ನಡೆಸಿದ್ದಾನೆ. ಘಟನೆಯಲ್ಲಿ 24 ವರ್ಷದ ಬಲಿಪಶುವಿನ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.



ದಂಪತಿ ಮದುವೆಯಾಗಿ ಮೂರು ವರ್ಷಗಳು ಕಳೆದಿದ್ದವು, ಆಗಾಗ ಅವರ ಮಧ್ಯೆ ವೈಮನಸ್ಸು ಮೂಡುತ್ತಿತ್ತು. ಪತ್ನಿಯ ಮೇಲೆ ಹಲ್ಲೆ ಮಾಡಿದ ನಂತರ, ಆ ವ್ಯಕ್ತಿ ಸ್ಥಳದಿಂದ ಪರಾರಿಯಾಗಿದ್ದಾನೆ. ನೆರೆಹೊರೆಯವರು ಸಂತ್ರಸ್ತೆಯ ಕುಟುಂಬಕ್ಕೆ ಮಾಹಿತಿ ನೀಡಿದ ನಂತರವೇ, ರಕ್ತಸಿಕ್ತವಾಗಿ ಬಿದ್ದಿದ್ದ ಆಕೆಯನ್ನು ಜಿಲ್ಲಾ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅಪರಾಧದ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಲಾಗಿದೆ.

**ಪೊಲೀಸ್ ಅಧಿಕಾರಿಗಳು ಪ್ರಸ್ತುತ ಸಂತ್ರಸ್ತೆ ಮತ್ತು ಆಕೆಯ ಕುಟುಂಬದಿಂದ ಹೇಳಿಕೆಗಳನ್ನು ದಾಖಲಿಸುತ್ತಿದ್ದಾರೆ. ಏತನ್ಮಧ್ಯೆ, ಪರಾರಿಯಾಗಿರುವವ ಪತಿ ಯನ್ನು ಪತ್ತೆಹಚ್ಚಲು ಶೋಧ ಕಾರ್ಯ ಆರಂಭಿಸಲಾಗಿದೆ. ಶೀಘ್ರದಲ್ಲೇ ಆತನನ್ನು ಬಂಧಿಸಲಾಗುವುದು ಎಂದು ಪೊಲೀಸರು ಭರವಸೆ ನೀಡಿದ್ದಾರೆ.**

# ಹೊಸ ಆದಾಯ ತೆರಿಗೆ ಕಾಯ್ದೆ ಜಾರಿಗೆ ಮುಂದಾದ ಕೇಂದ್ರ ಸರ್ಕಾರ

**ನವದೆಹಲಿ,** ಕೇಂದ್ರದಲ್ಲಿ 2014ರಲ್ಲಿ ಅಧಿಕಾರಕ್ಕೆ ಬಂದಾಗಿನಿಂದ ಆಡಳಿತಾತ್ಮಕವಾಗಿ ಹಲವಾರು ಸುಧಾರಣೆಗಳನ್ನು ಮಾಡಿರುವ ಮೋದಿ ಸರ್ಕಾರ, ಈ ಬಾರಿ 1961ರ ಆದಾಯ ತೆರಿಗೆ ಕಾಯ್ದೆಯನ್ನು ಕೈಬಿಟ್ಟು ಹೊಸದಾಗಿ 2025ರ ಆದಾಯ ತೆರಿಗೆ ಕಾಯ್ದೆಯನ್ನು ಜಾರಿಗೆ ತರಲು ಸಿದ್ಧವಾಗಿದೆ. ಬದಲಾದ ಸಂದರ್ಭದಲ್ಲಿ ಹಣ, ಆಸ್ತಿ ಎಂಬುದು ನಾನಾ ಸ್ವರೂಪ ತಾಳುತ್ತಿರುವ ಹಾಗೂ ಅದನ್ನು ಅರ್ಥೈಸುವ ರೀತಿಗಳೂ ಬದಲಾಗುತ್ತಿರುವ ಕಾಲಘಟ್ಟಕ್ಕೆ ಅನುಗುಣವಾಗಿ ಹೊಸ ಕಾಯ್ದೆ ಅಗತ್ಯತೆಯನ್ನು ಅರಿತಿರುವ ಕೇಂದ್ರ ಸರ್ಕಾರ ಆ ನಿಟ್ಟಿನಲ್ಲಿ ಹೆಜ್ಜೆಯನ್ನಿಟ್ಟಿದೆ.

**ಟ್ಯಾಕ್ಸ್ ಇಯರ್ ಹೊಸ ಪರಿಕಲ್ಪನೆ:** ಈವರೆಗಿನ ಕಾಯ್ದೆಯಲ್ಲಿ ಏ. 1ರಿಂದ ಅದರ ಮರುವರ್ಷದ ಮಾ. 31ರ ಅವಧಿಯನ್ನು ಹಣಕಾಸು ವರ್ಷ (ತೆರಿಗೆದಾರರಿಗೆ) ಎಂದು ಕರೆಯಲಾಗುತ್ತಿತ್ತು. ಆದರೆ, ಹೊಸ ಕಾಯ್ದೆಯಲ್ಲಿ ಈ 12 ತಿಂಗಳ ಅವಧಿಯನ್ನು ತೆರಿಗೆ ವರ್ಷ ಎಂದು ಹೆಸರಿಸಲಾಗಿದೆ. ಇನ್ನು, ಹೊಸದಾಗಿ ಬ್ಯುಸಿನೆಸ್ ಶುರು ಮಾಡುವವರಿಗೆ ಅವರು ತಮ್ಮ ವ್ಯವಹಾರ ಆರಂಭಗೊಳಿಸಿದ ದಿನಾಂಕದಿಂದ ಆ ಹಣಕಾಸು ವರ್ಷದ ಮಾ. 31 ರೊಳಗೆ ಎಷ್ಟು ವ್ಯವಹಾರವಾಗಿರುತ್ತದೋ ಅದರ ಆಧಾರದ ಮೇಲೆ ತೆರಿಗೆ ಲೆಕ್ಕಚಾರ ಹಾಕಲಾಗುತ್ತದೆ. ಅವರಿಗೂ ತೆರಿಗೆ ವರ್ಷ ಎಂಬ ಪದ ಅನ್ವಯಿಸಲಾಗಿದೆ. ಯಾವ ವರ್ಷ ಆದಾಯವೋ, ಅದೇ ವರ್ಷ ತೆರಿಗೆ ಈಗ ಚಾಲ್ತಿಯಲ್ಲಿರುವ ಕಾಯ್ದೆಯಂತೆ, ತೆರಿಗೆ ಪದ್ಧತಿಯನ್ನು ಆದಾಯ ವರ್ಷ ಹಾಗೂ ಮೌಲ್ಯಮಾಪನ ವರ್ಷ ವರ್ಷ ಎಂದು ಎರಡು ಭಾಗಗಳಾಗಿ ವಿಂಗಡಿಸಲಾಗುತ್ತಿತ್ತು. ಅಂದರೆ, 2024–25ರಲ್ಲಿ ನಿಮಗೆ ಬಂದಿರುವ ಆದಾಯವನ್ನು 2025–26ರಲ್ಲಿ ಮೌಲ್ಯಮಾಪನ (ಅಸ್ಸೆಸ್ ಮೆಂಟ್ ) ಮಾಡಲಾಗುತ್ತಿತ್ತು. ಹೊಸ ಕಾಯ್ದೆಯಲ್ಲಿ ಈ ಪದ್ಧತಿಯನ್ನು ತೆಗೆದುಹಾಕಲಾಗುತ್ತದೆ. ಅದರಲ್ಲಿ ಆದಾಯದ ವರ್ಷವನ್ನೇ ಮೌಲ್ಯಮಾಪನ ವರ್ಷ ಎಂದು ಪರಿಗಣಿಸಲಾಗುತ್ತದೆ.



ವಡ್ಯೂವಲ್ ಡಿಜಿಟಲ್ ಅಸೆಟ್ ಪರಿಕಲ್ಪನೆ ಸೇರ್ಪಡೆ

ಬದಲಾದ ಕಾಲಘಟ್ಟದಲ್ಲಿ ಹಣದ ಹೂಡಿಕೆಯು ನಾನಾ ಸ್ವರೂಪಗಳಲ್ಲಿ ನಡೆಯುತ್ತಿವೆ. ಕ್ರಿಪ್ಟೋ ಕರೆನ್ಸಿ ಸೇರಿದಂತೆ ಹಲವಾರು ರೀತಿಯ ವಿದ್ಯುನ್ಮಾನ ಮಾದರಿಯ ಹೂಡಿಕೆಗಳೂ ಈಗ ಚಾಲ್ತಿಗೆ ಬಂದಿವೆ. ಭಾರತೀಯರು ಅದರಲ್ಲಿ ದೊಡ್ಡ ಮಟ್ಟದ ಹೂಡಿಕೆಗಳನ್ನು ಮಾಡಿದ್ದಾರೆ. ಅದನ್ನು ಮನಗಂಡಿರುವ ಕೇಂದ್ರ ಆದಾಯ ತೆರಿಗೆ ಇಲಾಖೆ, 2025ರ ಆದಾಯ ತೆರಿಗೆ ವಿಧೇಯಕದಲ್ಲಿ ವರ್ಚ್ಯುವಲ್ ಡಿಜಿಟಲ್ ಅಸೆಟ್ (ತತ್ಸಮಾನ ವಿದ್ಯುನ್ಮಾನ ಆಸ್ತಿ) ಎಂಬ ಪರಿಕಲ್ಪನೆ ಆಧಾರದಲ್ಲಿ ತೆರಿಗೆ ಸಂಗ್ರಹಕ್ಕೆ ಮುಂದಾಗಿದೆ. ಅದರಂತೆ ಭಾರತೀಯರು ಕ್ರಿಪ್ಟೋ ಕರೆನ್ಸಿ, ಡಿಜಿಟಲ್ ಮಾದರಿಯ ಫೋಟೋ, ವಿಡಿಯೋ, ದಾಖಲೆಗಳ ಮೂಲಕ ಗಳಿಸುತ್ತಿರುವ ಆದಾಯವಾಗಿರಬಹುದು. ಈ ಎಲ್ಲಾ ರೀತಿಯ ವಿದ್ಯುನ್ಮಾನ ಆಸ್ತಿಪಾಸ್ತಿಗಳನ್ನು ಡಿಜಿಟಲ್ ಅಸೆಟ್ ಪರಿಕಲ್ಪನೆಯಡಿ ತರಲಾಗಿದೆ. **ಘೋಷಿಸದ ಆಸ್ತಿ ವರ್ಚ್ಯುವಲ್ ಆಸ್ತಿ!:** ಒಂದು ವೇಳೆ, ನಿರ್ದಿಷ್ಟ ಆದಾಯ ವರ್ಷದಲ್ಲಿ ನಿಮಗೆ ಬಂದಿರುವ ಹಣ, ಷೇರು ಮಾರುಕಟ್ಟೆ ಆದಾಯ ಅಥವಾ ಚಿನ್ನಾಭರಣಗಳು ಇತ್ಯಾದಿ ಬೆಲೆ ಬಾಳುವಂಥ ವಸ್ತುಗಳನ್ನು ಆದಾಯ ತೆರಿಗೆ ಇಲಾಖೆಯ ಗಮನಕ್ಕೆ ಸಲ್ಲಿಸದೇ ಇದ್ದರೆ ಅವುಗಳನ್ನು ವರ್ಚ್ಯುವಲ್ ಡಿಜಿಟಲ್ ಅಸೆಟ್‌ಗಳೆಂದು ಪರಿಗಣಿಸಲು ಹೊಸ ಕಾಯ್ದೆಯಲ್ಲಿ ಉಲ್ಲೇಖಿಸಲಾಗಿದೆ.

### ಸಾಮಾನ್ಯ ಭಾಷೆಯಲ್ಲಿರುವ ಮಸೂದೆ

**1951ರ ಆದಾಯ ತೆರಿಗೆ ಕಾಯ್ದೆಗೆ ಹೋಲಿಸಿದರೆ, 2025ರ ಆದಾಯ ತೆರಿಗೆ ಮಸೂದೆಯು ತೀರಾ ಸರಳ ಭಾಷೆಯಲ್ಲಿದೆ. 1951 ರ ಕಾಯ್ದೆಯಲ್ಲಿ 823 ಪುಟಗಳಿದ್ದರೆ, ಹೊಸ ಕಾಯ್ದೆಯಲ್ಲಿ 622 ಪುಟಗಳಷ್ಟು ಕಾನೂನುಗಳಿವೆ. ಆದಾಯ ತೆರಿಗೆ ವಿಧೇಯಕದಲ್ಲಿ 23 ಅಧ್ಯಾಯಗಳಿವೆ. 1961 ರ ಆದಾಯ ತೆರಿಗೆ ಕಾಯ್ದೆಯಲ್ಲಿರುವ ವಿಭಾಗಗಳು 298 ಇದ್ದರೆ, ಹೊಸ ಕಾಯ್ದೆಯಲ್ಲಿ 536 ವಿಭಾಗಗಳಿವೆ. ಹಳೆಯ ಕಾಯ್ದೆಯಲ್ಲಿ 14 ಶೆಡ್ಯೂಲುಗಳಿದ್ದರೆ, ಹೊಸ ಕಾಯ್ದೆಯಲ್ಲಿ 10 ಶೆಡ್ಯೂಲುಗಳಿವೆ.**

# ಪಾಕ್ ಸೈನಿಕರ ಹುಟ್ಟಡಗಿಸಿದ ಭಾರತೀಯ ಸೇನೆ

**ಶ್ರೀನಗರ,** ಪೂಂಚ್ ಗಡಿ ಭಾಗದಲ್ಲಿ ಕದನ ವಿರಾಮ ಉಲ್ಲಂಘಿಸಿದ್ದ ಪಾಕ್ ಸೈನಿಕರಿಗೆ ಭಾರತೀಯ ಸೇನೆ ತಕ್ಕ ಪ್ರತ್ಯುತ್ತರ ನೀಡಿದೆ. ಸೇನೆಯ ದಾಳಿ ಪರಿಣಾಮ ಹಲವು ಪಾಕ್ ಸೈನಿಕರು ಹತರಾಗಿದ್ದಾರೆ ಎಂದು ವರದಿಯಾಗಿದೆ.



**ಪಾಕಿಸ್ತಾನದ ಕಡೆಯ ಸಾವುನೋವುಗಳ ಪ್ರಮಾಣ ತಕ್ಷಣಕ್ಕೆ ತಿಳಿದುಬಂದಿಲ್ಲ, ಆದರೆ ಶತ್ರು ಪಡೆಗಳು ಭಾರೀ ನಷ್ಟ ಅನುಭವಿಸಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಭಾರತೀಯ ಸೇನೆಯು ಈ ಮಾಹಿತಿಯನ್ನು ದೃಢಪಡಿಸಿಲ್ಲ ಅಥವಾ ನಿರಾಕರಿಸಿಲ್ಲ. ಜಮ್ಮು ಜಿಲ್ಲೆಯ ಅದ್ದೂರ್ ಸೆಕ್ಟರ್‌ನ ನಿಯಂತ್ರಣ ರೇಖೆಯ ಬಳಿ ಶಂಕಿತ ಉಗ್ರರು ನಡೆಸಿದ ಐಇಡಿ ಸ್ಫೋಟದಲ್ಲಿ ಕ್ಯಾಪ್ಟನ್ ಸೇರಿದಂತೆ ಇಬ್ಬರು ಭಾರತೀಯ ಸೇನಾ ಸಿಬ್ಬಂದಿ ಸಾವನ್ನಪ್ಪಿದ ಒಂದು ದಿನದ ನಂತರ ಕೃಷ್ಣ ಘಾಟಿ ಸೆಕ್ಟರ್‌ನಲ್ಲಿ ಪಾಕಿಸ್ತಾನ ಕದನ ವಿರಾಮ ಉಲ್ಲಂಘನೆ ಮಾಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.**

ಭಾರತದ ಗಡಿಯಲ್ಲಿರುವ ನಿಯಂತ್ರಣ ರೇಖೆಯಲ್ಲಿ ಪಾಕಿಸ್ತಾನ ತನ್ನ ದುಷ್ಕೃತ್ಯಗಳನ್ನು ನಿಲ್ಲಿಸುತ್ತಿಲ್ಲ, ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ನಿಯಂತ್ರಣ ರೇಖೆಯ ಮೇಲೆ ಕದನ ವಿರಾಮ ಉಲ್ಲಂಘಿಸಿ ಗುಂಡು ಹಾರಿಸಿದ್ದಾರೆ. ಅಪ್ರಚೋದಿತ ಗುಂಡಿನ ದಾಳಿಗೆ ಭಾರತೀಯ ಸೇನೆಯು ಸೂಕ್ತ ಪ್ರತ್ಯುತ್ತರ ನೀಡಿದೆ. ಇದರಲ್ಲಿ ಹೆಚ್ಚಿನ ಸಂಖ್ಯೆಯ ಪಾಕಿಸ್ತಾನಿ ಸೈನಿಕರು ಸಾವನ್ನಪ್ಪಿರುವ ಸಾಧ್ಯತೆ ಇದೆ ಎಂದು ಭದ್ರತಾ ಅಧಿಕಾರಿಗಳು ಈ ಮಾಹಿತಿಯನ್ನು ನೀಡಿದ್ದಾರೆ. ಫೆಬ್ರವರಿ 25, 2021 ರಂದು ಭಾರತ ಮತ್ತು ಪಾಕಿಸ್ತಾನ ಕದನ ವಿರಾಮ ಒಪ್ಪಂದವನ್ನು ನವೀಕರಿಸಿದ ನಂತರ ಎಲ್‌ಒಸಿಯಲ್ಲಿ ಕದನ ವಿರಾಮ ಉಲ್ಲಂಘನೆಯ ಘಟನೆಗಳು ಬಹಳ ಕಡಿಮೆ ದಾಖಲಾಗಿವೆ.

# ರಾಜ್ಯಸಭೆಯಲ್ಲಿ ತಾಳ್ಮೆ ಕಳೆದುಕೊಂಡ ಜಯಾ ಬಚ್ಚನ್

**ಹೊಸದಿಲ್ಲಿ :** ಸಮಾಜವಾದಿ ಪಕ್ಷದ ನಾಯಕಿ ಮತ್ತು ರಾಜ್ಯಸಭಾ ಸದಸ್ಯೆ ಜಯಾ ಬಚ್ಚನ್ ಅವರು ರಾಜ್ಯಸಭೆಯಲ್ಲಿ ತಾಳ್ಮೆ ಕಳೆದುಕೊಂಡ ಘಟನೆ ನಡೆಯಿತು.



ಕೇಂದ್ರ ಬಜೆಟ್ ಮೇಲಿನ ಚರ್ಚೆಯ ಸಂದರ್ಭದಲ್ಲಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು ಸರ್ಕಾರ ಚಲನಚಿತ್ರೋದ್ಯಮವನ್ನು ನಿರ್ಲಕ್ಷಿಸಿದೆ ಎಂದು ಆರೋಪಿಸಿದರು. ದೇಶದ ಅತಿ ಹೆಚ್ಚು ತೆರಿಗೆದಾರರಲ್ಲಿ ಮನರಂಜನಾ ಉದ್ಯಮ ಒಂದಾಗಿದೆ.


ಆದರೆ, ಅದನ್ನು ಬಜೆಟ್‌ನಲ್ಲಿ ನಿರ್ಲಕ್ಷಿಸಲಾಗಿದೆ ಎಂದು ಹೇಳಿದರು. ಈ ವೇಳೆ ಆಡಳಿತ ಪಕ್ಷದ ಸದಸ್ಯರು ಆಕ್ಷೇಪ ಮಾಡಿದಾಗ, ಹಾಂ.. ನಮ್ಮದು ಅತಿ ಹೆಚ್ಚು ತೆರಿಗೆ ಪಾವತಿಸುವ ಉದ್ಯಮವಲ್ಲವೇ ನಾನೆಷ್ಟು ಇನ್‌ಕಂ ಟ್ಯಾಕ್ಸ್ ಕಟ್ಟೀನಿ ಗೊತ್ತಾ ಎಂದು ಕೇಳಿದರು.

ಅದಲ್ಲದೇ ನೀವು ಸುಮ್ಮನೇ ಸುಮ್ಮನೇ ಏನೇನೋ ಮಾತನಾಡಬೇಡಿ ಎಂದು ಜಯಾ ಬಚ್ಚನ್ ಕಿಡಿಕಾರಿದರು.

ಸಭಾಪತಿ ಆಕ್ಷೇಪಿಸಿದ್ದಕ್ಕೆ ತಾವೂ ಸಿಟ್ಟಾಗಿದ್ದಕ್ಕೆ ಜಯಾ ಬಚ್ಚನ್ ವಿಷಾದ ಕೂಡ ವ್ಯಕ್ತಪಡಿಸಿದರು.

# ಫ್ರಾನ್ಸ್‌ನಿಂದ ವಾಷಿಂಗ್ಟನ್ ತಲುಪಿದ ಪ್ರಧಾನಿ ಮೋದಿ

## ತುಳಸಿ ಗಬ್ಬಾರ್ಡ್ ಜೊತೆಗೆ ಗುಪ್ತಚರ ಸಹಕಾರದ ಚರ್ಚೆ, ಟ್ರಂಪ್ ಭೇಟಿಗೆ ಸಜ್ಜು



**ಅಮೆರಿಕಕ್ಕೆ ಹೊರಡುವುದಕ್ಕೂ ಮುನ್ನ ಮೋದಿಯವರು ಫ್ರಾನ್ಸ್‌ನ ಮಾರ್ಸೆಲ್ ನಗರದಲ್ಲಿ ಪ್ರಮುಖ ಸುತ್ತಾಡಿದ್ರು. ಮಾರ್ಸೇಲ್ ನಗರದಲ್ಲಿರುವ ಐತಿಹಾಸಿಕ ಮಜರ್ಗೆಸ್ ಸಮಾಧಿ ಸ್ಥಳಕ್ಕೆ ಭೇಟಿ ಕೊಟ್ಟು, ಭಾರತೀಯ ಹುತಾತ್ಮ ಸೈನಿಕರಿಗೆ ಗೌರವ ಸಲ್ಲಿಸಿದ್ರು. ವಿಶ್ವ ಯುದ್ಧಗಳಲ್ಲಿ ಮಡಿದಿರುವ ಯೋಧರ ಸಮಾಧಿಗಳು ಇಲ್ಲಿವೆ. ಇದರಲ್ಲಿ 205 ಭಾರತೀಯ ಸೈನಿಕರ ಸಮಾಧಿಗಳೂ ಇವೆ.**

**ಅಮೆರಿಕ:** ಈಗ ಜಗತ್ತಿನಾದ್ಯಂತ ಏನೇನೆಲ್ಲಾ ಆಗ್ತಿದೆ, ಅಮೆರಿಕದಲ್ಲಿ ಅಧ್ಯಕ್ಷ ಟ್ರಂಪ್ ತಗೊಳ್ತಿರೊ ನಿರ್ಧಾರಗಳು, ಮೂರನೇ ಅತಿ ದೊಡ್ಡ ಆರ್ಥಿಕತೆಯ ರಾಷ್ಟ್ರವಾ ಗೋ ಭಾರತದ ಪ್ರಯತ್ನ, ಈ ಎಲ್ಲದರ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿಯವರ ಅಮೆರಿಕ ಭೇಟಿಗೆ ಮಹತ್ವ ಬಂದಿದೆ. ಫ್ರಾನ್ಸ್‌ನಿಂದ ಬುಧವಾರವೇ ಮೋದಿವರು ವಾಷಿಂಗ್ಟನ್‌ಗೆ ಬಂದಿಳಿದಿದ್ದಾರೆ. ಜಗತ್ತಿನ ಯಾವ ದೇಶಕ್ಕೆ ಹೋದ್ರೂ ಅಲ್ಲಿ ಭಾರತೀಯರು ಮೋದಿಯವರ ಭೇಟಿಗಾಗಿ ಕಾದಿರ್ತಾರೆ. ಇಲ್ಲೂ ಕೂಡ ಮೋದಿಯವರನ್ನು ಭಾರತೀಯ ಸಮುದಾಯವು ಆತ್ಮೀಯವಾಗಿ ಬರ ಮಾಡಿಕೊಂಡಿದೆ. ವಾಷಿಂಗ್ಟನ್‌ನಲ್ಲಿ ಅಮೆರಿಕ ಅಧ್ಯಕ್ಷರ ಅತಿಥಿ ಗೃಹ ಬ್ಲೇರ್ ಹೌಸ್‌ನಲ್ಲಿ ಮೋದಿಯವರು ತಂಗಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಶ್ವೇತ ಭವನದಲ್ಲಿ ಮಾತುಕತೆ ನಡೆಯಲಿದೆ. ಆದರೆ, ಅದಕ್ಕೂ ಮುನ್ನ ಅಮೆರಿಕದ ಗುಪ್ತಚರ ವಿಭಾಗದ ನಿರ್ದೇಶಕಿ ತುಳಸಿ ಗಬ್ಬಾರ್ಡ್ ಅವರ ಜೊತೆಗೆ ಪ್ರಧಾನಿ ಮೋದಿಯವರ ಭೇಟಿ ನಡೆದಿದೆ. ಮುಖ್ಯವಾಗಿ ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದಂತೆ ಇಲ್ಲಿ ಮಾತುಕತೆ ಆಗಿದೆ. ಸೈಬರ್ ಸೆಕ್ಯುರಿಟಿ, ಭಯೋತ್ಪಾದನೆಯ ನಿಗ್ರಹ, ಉಭಯ ರಾಷ್ಟ್ರಗಳ ನಡುವೆ ಗುಪ್ತಚರ ಮಾಹಿತಿಯ ಸಹಕಾರಗಳ ಬಗ್ಗೆ ಚರ್ಚೆ ನಡೆದಿದೆ. ಇದರ ಜೊತೆಗೆ ಪ್ರಾದೇಶಿ ಹಾಗೂ ಜಾಗತಿಕ ಬೆಳವಣಿಗೆಗಳ ಬಗ್ಗೆಯೂ ಚರ್ಚೆಯಾಗಿದೆ. ಎರಡು ದಿನಗಳ ಅಮೆರಿಕ ಪ್ರವಾಸದಲ್ಲಿರುವ ಪ್ರಧಾನಿ ಮೋದಿಯವರಿಗೆ ಚಳಿಯಲ್ಲೂ ಬೆಚ್ಚಗಿನ ಸ್ವಾಗತ ಸಿಕ್ಕಿದೆ.

ಉಭಯ ರಾಷ್ಟ್ರಗಳ ನಡುವೆ ಗುಪ್ತಚರ ಮಾಹಿತಿ

ಅಟ್ರಂಪ್ ಗೆಳೆಯ ಆಗಿದ್ರೆ, ಭಾರತೀಯರನ್ನು ಸರಕು ಸಾಗಿಸೊ ವಿಮಾನದಲ್ಲಿ ತುಂಬಿ ಕಳಿಸ್ತಿದ್ರಾ ಅಂತ ಪ್ರಶ್ನೆ ಮಾಡಿದ್ರು. ಇಂಥ ಟೀಕೆಗಳ ನಡುವೆ ಅಧಿಕೃತ ಆಹ್ವಾನದ ಮೇರೆಗೆ ಮೋದಿಯವರು ಅಮೆರಿಕದಲ್ಲಿದ್ದಾರೆ. ಇದಕ್ಕೂ ಮೊದಲು ಫ್ರಾನ್ಸ್ ಪ್ರವಾಸದಲ್ಲಿದ್ದ ಮೋದಿ, ಎಐ ಆಕ್ಷನ್ ಶೃಂಗದಲ್ಲಿ ಕೃತಕ ಬುದ್ಧಿಮತ್ತೆಯ ಬಗ್ಗೆ ಭಾಷಣ ಮಾಡಿದ್ದರು. ಎಐ ಅಭಿವೃದ್ಧಿ ಹಾಗೂ ನೀತಿಯನ್ನು ರಚಿಸುವ ಬಗ್ಗೆ ಎಲ್ಲರೂ ಕೈಜೋಡಿಸಬೇಕು ಎಂದಿದ್ದರು.

ಅಲ್ಲಿಯೇ ಅಮೆರಿಕ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಭೇಟಿಯೂ ನಡೆದಿತ್ತು. ಅನಂತದಲ್ಲಿ ಭಾರತ–ಫ್ರಾನ್ಸ್ ಸಿಇಒಗಳನ್ನು ಉದ್ದೇಶಿಸಿ ಪ್ಯಾರಿಸ್‌ನಲ್ಲಿ ಭಾಷಣ ಮಾಡಿದ್ದ ಮೋದಿ, ಭಾರತದಲ್ಲಿ ಹೂಡಿಕೆ ಮತ್ತು ಪಾಲುದಾರಿಕೆಯ ಅವಕಾಶಗಳನ್ನು ತೆರೆದಿಟ್ಟಿದ್ದರು. ಇನ್ನು ಮಾರ್ಸೇಲ್ ನಗರದ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಿಕೊಂಡಿದ್ದ ಪ್ರಧಾನಿ ಮೋದಿವರು ಹೋರಾಟಗಾರ ವಿ.ಡಿ.ಸಾರ್ವಕರ್ ಅವರನ್ನು ಸ್ಮರಿಸಿದ್ದರು. ವೀರ ಸಾರ್ವಕರ್ ಅವರು ಬ್ರಿಟಿಷರ ಕೈಯಿಂದ ತಪ್ಪಿಸಿಕೊಳ್ಳಲು ಯತ್ನಿಸಿದ್ದು ಇಲ್ಲಿಯೇ ಎಂದು ಉಲ್ಲೇಖಿಸಿದ್ದರು.

**ಮೆರಿಕ-ಭಾರತದ ಬಾಂಧವ್ಯ, ದ್ವಿಪಕ್ಷೀಯ ಒಪ್ಪಂದಗಳು ಸುಂಕ ಹೇರುತ್ತ ಹಟಮಾರಿಯಂತೆ ಕಾಣುತ್ತಿರುವ ಟ್ರಂಪ್ ಅವರೊಂದಿಗೆ ವ್ಯಾಪಾರ, ವಲಸೆ, ಸುಂಕ, ರಕ್ಷಣೆಗೆ ಸಂಬಂಧಿಸಿದಂತೆ ಬಹಳಷ್ಟು ಮಾತುಗಳು ಆಗಬೇಕಿದೆ. ಚೀನಾ ಕಂಡರೆ ಕೆಂಡ ಕಾರುವ ಟ್ರಂಪ್, ಭಾರತದ ಜೊತೆಗೆ ಗೆಳೆತನ ವಿಸ್ತರಿಸಿಕೊಳ್ತಾರೆ ಕಾದು ನೋಡಬೇಕಿದೆ. ಅಂದಹಾಗೇ, ಟ್ರಂಪ್ ಅಧ್ಯಕ್ಷರಾದ ಬಳಿಕ ಇಸ್ರೇಲ್‌ನ ಅಧ್ಯಕ್ಷರು, ಜಪಾನ್‌ನ ಪ್ರಧಾನಿ ಹಾಗೂ ಜೋರ್ಡನ್‌ನ ದೊರೆ ಶ್ವೇತ ಭವನಕ್ಕೆ ಭೇಟಿ ಕೊಟ್ಟಿದ್ದಾರೆ. ಈಗ ಮೋದಿಯವರ ಈ ಭೇಟಿಯೂ ವಿಶ್ವದ ಗಮನ ಸೆಳೆದಿರೋದು ಸುಳ್ಳಲ್ಲ. ಅಮೆರಿಕಕ್ಕೆ ಪ್ರಧಾನಿ ಮೋದಿಯವರಿಗೆ ಆಹ್ವಾನವೇ ಇರಲಿಲ್ಲ ಅಂತ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿನ್ನೆಯಷ್ಟೇ ಹೇಳ್ತಿದ್ರು.**

ಇನ್ನು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಭಾರತಕ್ಕೆ ಕಾಯಂ ಸದಸ್ಯ ಸ್ಥಾನ ಕೊಡಲು ಫ್ರಾನ್ಸ್‌ನ ಬೆಂಬಲವಿದೆ ಎಂದು ಮ್ಯಾಕ್ರನ್ ಮತ್ತೆ ಸ್ಪಷ್ಟಪಡಿಸಿದ್ದಾರೆ. ಫ್ರಾನ್ಸ್ ಅಧ್ಯಕ್ಷ ಎಮಾನ್ಯುಯೆಲ್ ಮ್ಯಾಕ್ರನ್ ಅವರು ಎಲ್ಲಾ ಕಡೆಯೂ ಮೋದಿಯವರಿಗೆ ಜೊತೆಯಾಗಿದ್ದರು. ಅಮೆರಿಕಕ್ಕೆ ಹೊರಡುವಾಗಲೂ ಮೋದಿಯವರು ವಿಮಾನ ಏರುವವರೆಗೂ ಜೊತೆಯಲ್ಲಿದ್ದರು.

## ಮಿನಿ ನ್ಯೂಸ್

### ಪಾಕ್ ಟೀಕಾಕಾರ ಭಾರತೀಯನಿಗೆ ಮಣೆ ಹಾಕಿದ ಟ್ರಂಪ್

**ಕ್ಯಾಲಿಫೋರ್ನಿಯಾ:** ಪಾಕಿಸ್ತಾನದ ಕಟು ಟೀಕಾಕಾರ ಭಾರತೀಯ ಮೂಲದ ಪೌಲ್ ಕಪೂರ್ ಅವರು ದಕ್ಷಿಣ ಏಷ್ಯಾದ ವ್ಯವಹಾರಗಳ ಸಹಾಯಕ ರಾಜ್ಯ ಕಾರ್ಯದರ್ಶಿಯಾಗಲಿದ್ದಾರೆ ಎಂದು ಯುಎಸ್ ಪತ್ರಿಕಾ ಪ್ರಕಟಣೆ ತಿಳಿಸಿದೆ. ಜೋ ಬಿಡೆನ್ ಆಡಳಿತದ ಅವಧಿಯಲ್ಲಿ ದಕ್ಷಿಣ ಏಷ್ಯಾ ಬ್ಯೂರೋವನ್ನು ನೋಡಿಕೊಳ್ಳುತ್ತಿದ್ದ ಡೊನಾಲ್ಡ್ ಅವರ ಸ್ಥಾನವನ್ನು ಕಪೂರ್ ವಹಿಸಲಿದ್ದಾರೆ ಎಂದು ತಿಳಿದುಬಂದಿದೆ. ಯುಎಸ್–ಭಾರತ ಸಂಬಂಧಗಳ ಬಲವಾದ ಬೆಂಬಲಿಗ ಮತ್ತು ಪಾಕಿಸ್ತಾನದ ಕಟು ಟೀಕಾಕಾರ, ಕಪೂರ್ ಟ್ರಂಪ್ ಅಧ್ಯಕ್ಷರಾಗಿ ಮೊದಲ ಅವಧಿಯಲ್ಲಿ ದಕ್ಷಿಣ ಏಷ್ಯಾದ ಯುಎಸ್ ಸ್ಟೇಟ್ ಡಿಪಾ ರ್ಟಂಟ್‌ನಲ್ಲಿ ನೀತಿ ಯೋಜನಾ ತಂಡದ ಭಾಗವಾಗಿದ್ದರು. ಒಬ್ಬ ನಿಪುಣ ವಿದ್ವಾಂಸ ಮತ್ತು ದಕ್ಷಿಣ ಏಷ್ಯಾದ ರಾಜಕೀಯದಲ್ಲಿ ಪರಿಣತಿ ಹೊಂದಿರುವ ಹಲವಾರು ಪುಸ್ತಕಗಳ ಲೇಖಕ, ಅವರು ಪ್ರಸ್ತುತ ಯುಎಸ್ ನೇವಲ್ ಪೋಸ್ಟ್ ಗ್ರಾಜುಯೇಟ್ ಸ್ಕೂಲ್‌ನಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರು ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾನಿಲಯದ ಹೂವರ್ ಇನ್ಸ್ಟಿಟ್ಯೂಷನ್‌ಗೆ ಭೇಟಿ ನೀಡುವ ಸಹವರ್ತಿಯಾಗಿದ್ದಾರೆ.ಕಪೂರ್ ಬರೆದಿರುವ ಗಮನಾರ್ಹ ಪುಸ್ತಕಗಳಲ್ಲಿ ಜಿಹಾದ್ ಆಸ್ **ಗ್ರಾಂಡ್ ಸ್ಟ್ರಾಟಜಿ:** ಇಸ್ಲಾಮಿಸ್ಟ್ ಮಿಲಿಟೆನ್ಸಿ, ನ್ಯಾಶನಲ್ ಸೆಕ್ಯುರಿಟಿ ಮತ್ತು ಪಾಕಿಸ್ತಾನಿ ಸ್ಟೇಟ್ ಮತ್ತು ಡೇಂಜರಸ್ ಡಿಟರ್ರೆಂಟ್: ನ್ಯೂಕ್ಲಿಯರ್ ವೆಪನ್ಸ್ ಪ್ರೊಲಿಫರೇಶನ್ ಅಂಡ್ ಕಾನ್ಫ್ಲಿಕ್ಟ್ ಇನ್ ಸೌತ್ ಏಷ್ಯಾ ಸೇರಿವೆ.

### 1000 ಕಣ್ಣಾಗಲು ಹೆಲಿಕಾಪ್ಟರ್‌ಗಳ ಖರೀದಿಗೆ ಮುಂದಾದ ಕೇಂದ್ರ


**ನವದೆಹಲಿ,** ಸಮುದ್ರ ಮಟ್ಟದಿಂದ 5,500 ಮೀಟರ್ ಎತ್ತರದವರೆಗೆ ಮತ್ತು ಹಗಲು ಮತ್ತು ರಾತ್ರಿಯ ಸಮಯದಲ್ಲಿ ಕಾರ್ಯನಿರ್ವಹಿಸುವ ಸಾಮರ್ಥ್ಯವಿರುವ ಪರಿಕರಗಳೊಂದಿಗೆ ಸುಮಾರು 1,000 ಕಣ್ಣಾಗಲು ಹೆಲಿಕಾಪ್ಟರ್‌ಗಳನ್ನು ಖರೀದಿಸಲು ಕೇಂದ್ರ ಸರ್ಕಾರ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ. ಮೇಕ್ ಇನ್ ಇಂಡಿಯಾ ಮತ್ತು ಆತ್ಮನಿರ್ಭರ್ ಭಾರತ್ ಯೋಜನೆಯಡಿ ಕಣ್ಣಾಗಲು ಹೆಲಿಕಾಪ್ಟರ್‌ಗಳನ್ನು ಖರೀದಿಸಲು ಯೋಜಿಸಲಾಗಿದೆ ಯೋಜನೆಗೆ ಆದ್ಯತೆಯ ವರ್ಗೀಕರಣವನ್ನು ಮಾರಾಟಗಾರರು ಸರಿಯಾದ ಸಮರ್ಥನೆಯೊಂದಿಗೆ ಸೂಚಿಸಬಹುದು ಎಂದು ಹೇಳಿದೆ. ರಕ್ಷಣಾ ಸಚಿವಾಲಯವು ದಾಖಲೆಯ ಪ್ರಕಾರ, ಪರಿಕರಗಳೊಂದಿಗೆ ಅಂದಾಜು 1,000 ಕಣ್ಣಾವಲು ಕಾಪ್ಟರ್‌ಗಳನ್ನು (ಎತ್ತರದ ಪ್ರದೇಶ) ಸಂಗ್ರಹಿಸಲು ಉದ್ದೇಶಿಸಿದೆ. ಪೂರೈಸಲು ಸಮರ್ಥವಾಗಿರುವ ಸಂಭವನೀಯ ಭಾರತೀಯ ಮಾರಾಟಗಾರರನ್ನು ಗುರುತಿಸಲು ಮುಂದಾಗಿದೆ. ಮೊದಲ ಭಾಗವು ಉಪಕರಣದ ಉದ್ದೇಶಿತ ಬಳಕೆಯನ್ನು ಮತ್ತು ಪರಿಕರಗಳೊಂದಿಗೆ ಕಣ್ಣಾವಲು ಕಾಪ್ಟರ್‌ನಿಂದ ಪೂರೈಸಬೇಕಾದ ಕಾರ್ಯಾಚರಣೆಯ ಅವಶ್ಯಕತೆಗಳನ್ನು ಒಳಗೊಂಡಿದೆ. ಸಹ ಕಣ್ಣಾವಲು ಕಾಪ್ಟರ್‌ಗಳನ್ನು ಪ್ರಾಥಮಿಕವಾಗಿ ಭಾರತದಲ್ಲಿ ಎತ್ತರದ (5,500 ಮೀಟರ್‌ಗಳವರೆಗೆ) ಪರ್ವತ ಭೂಪ್ರದೇಶದಲ್ಲಿ ಬಳಸಿಕೊಳ್ಳುವ ಭೂಪ್ರದೇಶದ ಪರಿಸ್ಥಿತಿಗಳನ್ನು ಉಲ್ಲೇಖಿಸುತ್ತದೆ.ಸಾಮಾನ್ಯವಾಗಿ ಎದುರಾಗುವ ಹವಾಮಾನ ಪರಿಸ್ಥಿತಿಗಳಲ್ಲಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದೆ.

### ಅತ್ಯಾಚಾರಕ್ಕೊಳಗಾದ ಹೆಣ್ಣಿಗೆ ಗರ್ಭಪಾತದ ಹಕ್ಕಿದೆ

**ಅಲಹಾಬಾದ್:** ಅತ್ಯಾಚಾರಕ್ಕೆ ಒಳಗಾಗಿ ಗರ್ಭಿಣಿಯಾಗಿದ್ದ 17 ವರ್ಷದ ಬಾಲಕಿಗೆ ಮಗುವನ್ನು ಇಟ್ಟುಕೊಳ್ಳಬೇಕೆ ಅಥವಾ ಬೇಡವೇ ಎಂಬುದನ್ನು ಆಯ್ಕೆ ಮಾಡಲು ಅವಕಾಶ ನೀಡಿರುವ ಅಲಹಾಬಾದ್ ಹೈಕೋರ್ಟ್ ತಾನು ತಾಯಿಯಾಗಬೇಕೇ ಅಥವಾ ಗರ್ಭಪಾತ ಮಾಡಿಸಿಕೊಳ್ಳಬೇಕೇ ಎಂಬುದನ್ನು ನಿರ್ಧರಿಸಲು ಅವಕಾಶ ನೀಡಿದೆ. ನ್ಯಾಯಮೂರ್ತಿಗಳಾದ ಮಹೇಶ್ ಚಂದ್ರ ತ್ರಿಪಾಠಿ ಮತ್ತು ಪ್ರಶಾಂತ್ ಕುಮಾರ್ ಅವರನ್ನೊಳಗೊಂಡ ಇಬ್ಬರು ನ್ಯಾಯಾಧೀಶರ ಪೀಠವು 17 ವರ್ಷದ ಅತ್ಯಾಚಾರ ಸಂತ್ರಸ್ತೆಯ ಗರ್ಭಧಾರಣೆಯನ್ನು ವೈದ್ಯಕೀಯವಾಗಿ ಅಂತ್ಯಗೊಳಿಸಲು ಕೋರಿ ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದೆ. ಅತ್ಯಾಚಾರದಿಂದ ಯುವತಿ ಅಥವಾ ಮಹಿಳೆ ಗರ್ಭಿಣಿಯಾದರೆ ಆ ಮಗುವನ್ನು ಉಳಿಸಿಕೊಳ್ಳಬೇಕೇ, ಬೇಡವೇ ಎಂದು ನಿರ್ಧರಿಸಲು ಆಕೆಗೆ ಹಕ್ಕಿದೆ. ಕಾನೂನು ಲೈಂಗಿಕ ದೌರ್ಜನ್ಯಕ್ಕೊಳಗಾದ ಸಂತ್ರಸ್ತೆಗೆ ತನ್ನ ಗರ್ಭಧಾರಣೆಯನ್ನು ವೈದ್ಯಕೀಯವಾಗಿ ಅಂತ್ಯಗೊಳಿಸಲು ಹಕ್ಕನ್ನು ಒದಗಿಸುತ್ತದೆ ಎಂದು ಕೋರ್ಟ್ ಹೇಳಿದೆ. ವೈದ್ಯಕೀಯ ಗರ್ಭಪಾತ ಕಾಯ್ದೆಯ ಸೆಕ್ಷನ್ 3(2) ಲೈಂಗಿಕ ದೌರ್ಜನ್ಯಕ್ಕೊಳಗಾದ ಸಂತ್ರಸ್ತೆಗೆ ತನ್ನ ಗರ್ಭಾವಸ್ಥೆಯನ್ನು ವೈದ್ಯಕೀಯವಾಗಿ ಅಂತ್ಯಗೊಳಿಸುವ ಹಕ್ಕನ್ನು ಒದಗಿಸುತ್ತದೆ. ಆಕೆಗೆ ವೈದ್ಯಕೀಯವಾಗಿ ಗರ್ಭಪಾತವನ್ನು ಮಾಡಿಸಿಕೊಳ್ಳುವ ಅಥವಾ ಆ ಮಗುವನ್ನು ಹೆತ್ತು ಅದರ ಜವಾಬ್ದಾರಿ ವಹಿಸಿಕೊಳ್ಳುವ ಎರಡೂ ಹಕ್ಕುಗಳಿರುತ್ತದೆ. ಆಕೆಯ ಮಾತೃತ್ವದ ಜವಾಬ್ದಾರಿಯನ್ನು ವಹಿಸಿ ಕೊಳ್ಳುವ ಹಕ್ಕನ್ನು ನಿರಾಕರಿಸುವುದು ಅವಳ ಘನತೆಯಿಂದ ಬದುಕುವ ಮಾನವ ಹಕ್ಕನ್ನು ನಿರಾಕರಿಸುವುದಕ್ಕೆ ಸಮಾನವಾಗಿರುತ್ತದೆ ಎಂದು ನ್ಯಾಯಪೀಠ ಹೇಳಿದೆ. ಒಂದುವೇಳೆ ಆ ಮಗುವನ್ನು ಆಕೆ ಹೆರಲೇಬೇಕೆಂದು ಒತ್ತಾಯಿಸಿದರೆ ಅದು ಆಕೆಗೆ ಜೀವನಪರ್ಯಂತ ನೋವು, ದುಃಖ ನೀಡುವ ಸಂಗತಿಯಾಗುವುದರಿಂದ ಕೋರ್ಟ್ ಈ ತೀರ್ಪು ನೀಡಿದೆ ಎಂದು ನ್ಯಾಯಪೀಠ ಹೇಳಿದೆ.

### ಕೇರಳದ ಕಾಲೇಜಿನಲ್ಲಿ ಆಘಾತಕಾರಿ ಘಟನೆ

**ಕೊಟ್ಟಾಯಂ:** ಕೇರಳದ ಕೊಟ್ಟಾಯಂನ ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ 3ನೇ ವರ್ಷದ 5 ನರ್ಸಿಂಗ್ ವಿದ್ಯಾರ್ಥಿಗಳನ್ನು ತಮ್ಮ ಕೆಲವು ಜೂನಿಯರ್‌ಗಳಿಗೆ ದೈಹಿಕವಾಗಿ ಕಿರುಕುಳ ನೀಡಿದ ಆರೋಪದ ಮೇಲೆ ಬಂಧಿಸಲಾಗಿದೆ. ರ್‍ಯಾಗಿಂಗ್‌ಗೆ ಸಂಬಂಧಿಸಿದಂತೆ ಬಂಧಿತ ವಿದ್ಯಾರ್ಥಿಗಳ ವಿರುದ್ಧ ಕಾಲೇಜಿನ ಮೂವರು ಜೂನಿಯರ್ ನರ್ಸಿಂಗ್ ವಿದ್ಯಾರ್ಥಿಗಳು ದೂರು ಸಲ್ಲಿಸಿದ್ದಾರೆ. ಆ ದೂರಿನ ಪ್ರಕಾರ, ಆ ಜೂನಿಯರ್‌ಗಳ ಬಟ್ಟೆ ಬಿಚ್ಚಿ, ಅವರ ಗುಪ್ತಾಂಗಕ್ಕೆ ಡಂಬ್‌ಬೆಲ್ ಕಟ್ಟಿ, ಚಿತ್ರಹಿಂಸೆ ನೀಡಲಾಗಿದೆ. ವೇಟ್‌ಲಿಫ್ಟಿಂಗ್‌ಗಾಗಿ ಬಳಸಲಾಗುವ ಡಂಬ್‌ಬೆಲ್‌ಗಳನ್ನು ಗುಪ್ತಾಂಗಕ್ಕೆ ಕಟ್ಟಿ, ಬೆತ್ತಲೆಯಾಗಿ ನಿಲ್ಲುವಂತೆ ಮಾಡಲಾಗಿದೆ. ನಂತರ ಚಿತ್ರಹಿಂಸೆ ನೀಡಲಾಗಿದೆ ಎಂದು ವಿದ್ಯಾರ್ಥಿಗಳು ಆರೋಪಿಸಿದ್ದಾರೆ. ಡಂಬ್‌ಬೆಲ್‌ಗಳನ್ನು ವಿದ್ಯಾರ್ಥಿಗಳ ಖಾಸಗಿ ಭಾಗಗಳಿಗೆ ನೇತುಹಾಕಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಆ ವಿದ್ಯಾರ್ಥಿಗಳ ದೇಹದ ಮೇಲೆ ಗಾಯಗಳೂ ಆಗಿವೆ. ಬಳಿಕ, ಅವರ ಮುಖ, ತಲೆ ಮತ್ತು ಬಾಯಿಗೆ ಕ್ರೀಮ್ ಹಚ್ಚಿಕೊಳ್ಳಲು ಒತ್ತಾಯಿಸಲಾಯಿತು. ಹಿರಿಯ ವಿದ್ಯಾರ್ಥಿಗಳು ಮದ್ಯ ಖರೀದಿಸಲು ತಮ್ಮಿಂದ ನಿಯಮಿತವಾಗಿ ಹಣವನ್ನು ಸುಲಿಗೆ ಮಾಡುತ್ತಿದ್ದಾರೆ ಎಂದು ಜೂನಿಯರ್ ವಿದ್ಯಾರ್ಥಿಗಳು ದೂರಿನಲ್ಲಿ ಆರೋಪಿಸಿದ್ದಾರೆ.



# ಪೌರಾಣಿಕ ಪಾತ್ರದಲ್ಲಿ ಮಿಂಚಲಿದ್ದಾರೆ ರಾಮ್ ಚರಣ್

ಆರ್‌ಆರ್‌ಆರ್ ಸಿನಿಮಾದ ಭಾರಿ ಯಶಸ್ಸಿನ ಬಳಿಕ ರಾಮ್ ಚರಣ್ ನಟಿಸಿರುವ ಎರಡು ಸಿನಿಮಾಗಳು ಫ್ಲಾಪ್ ಆಗಿವೆ. ಹಾಗಿದ್ದರೂ ಸಹ ರಾಮ್ ಚರಣ್‌ಗೆ ಕೆಲ ಒಳ್ಳೆ ಸಿನಿಮಾ ಅವಕಾಶಗಳು ಅರಸಿ ಬರುತ್ತಲೇ ಇವೆ. ಇದೀಗ ರಾಮ್ ಚರಣ್‌ಗೆ ಪೌರಾಣಿಕ ಹಿನ್ನೆಲೆಯುಳ್ಳ ಕತೆಯೊಂದನ್ನು ಯುವ ಬಾಲಿವುಡ್ ನಿರ್ದೇಶಕ ಹೇಳಿದ್ದಾರೆ. ಸಿನಿಮಾದ ಕತೆ ರಾಮ್ ಚರಣ್‌ಗೆ ಬಹುವಾಗಿ ಮೆಚ್ಚುಗೆಯಾಗಿದ್ದು ಸಿನಿಮಾ ಶೀಘ್ರವೇ ಪ್ರಾರಂಭ ಆಗಲಿದೆ. 'ಆರ್‌ಆರ್‌ಆರ್' ಸಿನಿಮಾದ ಬಳಿಕ ರಾಮ್ ಚರಣ್ ನಟಿಸಿದ ಎರಡು ಸಿನಿಮಾಗಳು ಫ್ಲಾಪ್ ಆಗಿವೆ. 'ಆಚಾರ್ಯ' ಮತ್ತು 'ಗೇಮ್ ಚೇಂಜರ್' ಎರಡೂ ಸಿನಿಮಾಗಳು ಮಕಾಡೆ ಮಲಗಿವೆ. ಇದೀಗ ರಾಮ್ ಚರಣ್ ಬುಚ್ಚಿಬಾಬು ಸನಾ ನಿರ್ದೇಶನದ ಹೊಸ ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಈ ಸಿನಿಮಾದಲ್ಲಿ ಜಾನ್ವಿ ಕಪೂರ್ ನಾಯಕಿ. ಸತತ ಎರಡು ಫ್ಲಾಪ್ ನೀಡಿದರೂ ಸಹ ರಾಮ್ ಚರಣ್‌ಗೆ ಸಿನಿಮಾ ಅವಕಾಶಗಳೇನೂ ಕಡಿಮೆ ಆಗಿಲ್ಲ ಬದಲಿಗೆ ಬಹಳ ಒಳ್ಳೆಯ ಆಫರ್‌ಗಳೇ ಬರುತ್ತಿವೆ. ಇದೀಗ ಪೌರಾಣಿಕ ಸಿನಿಮಾದ ಆಫರ್ ಒಂದು ರಾಮ್ ಚರಣ್ ಅವರನ್ನು ಅರಸಿ ಬಂದಿದೆ. ಕಳೆದ ವರ್ಷ ಜುಲೈ ತಿಂಗಳಲ್ಲಿ ಬಿಡುಗಡೆ ಆಗಿ ಹವಾ ಎಬ್ಬಿಸಿದ್ದ ಹಿಂದಿಯ 'ಕಿಲ್' ಸಿನಿಮಾದ ನಿರ್ದೇಶಕ ನಿಖಿಲ್ ನಾಗೇಶ್ ಭಟ್, ರಾಮ್ ಚರಣ್‌ಗೆ ಪೌರಾಣಿಕ ಜಾನರ್‌ನ ಕತೆಯೊಂದನ್ನು ಹೇಳಿದ್ದು, ರಾಮ್ ಚರಣ್ ಸಹ ಕತೆ ಒಪ್ಪಿದ್ದಾರಂತೆ. ಇದೊಂದು ಪೌರಾಣಿಕ ಥ್ರಿಲ್ಲರ್ ಕತೆಯಾಗಿದ್ದು, ಒಂದು ಪ್ರಮುಖ ಘಟನೆಯ ಕುರಿತಾದ ಕತೆಯನ್ನು ಈ ಸಿನಿಮಾ ಒಳಗೊಂಡಿರಲಿದೆ. ಪೂರ್ಣ ರಾಮಾಯಣ ಅಥವಾ ಮಹಾಭಾರತದ ಕತೆಯ ಬದಲಿಗೆ ಕೇವಲ ಒಂದು ಪ್ರಮುಖ ಘಟನೆಯನ್ನು ಮಾತ್ರವೇ ಸಿನಿಮಾ ಮಾಡುತ್ತಿದ್ದಾರೆ ನಿಖಿಲ್ ನಾಗೇಶ್ ಭಟ್.





# ಒಂದು ಬಿಡಿಗಾಸು ಪಡೆಯದೆ ಸಿನಿಮಾದಲ್ಲಿ ನಟಿಸಿದ ಪ್ರಭಾಸ್

ಭಾರತದ ಅತ್ಯಂತ ದುಬಾರಿ ನಟರಲ್ಲಿ ಪ್ರಭಾಸ್ ಸಹ ಒಬ್ಬರು. ಪ್ರತಿ ಸಿನಿಮಾಕ್ಕೆ ನೂರಾರು ಕೋಟಿ ಸಂಭಾವನೆ ಪಡೆಯುತ್ತಾರೆ. ಪ್ರಭಾಸ್ ಎಷ್ಟೇ ಸಂಭಾವನೆ ಕೇಳಿದರೂ ಕೊಡಲು ಸಿದ್ಧವಾಗಿ ನಿಂತಿದ್ದಾರೆ ಹಲವು ನಿರ್ಮಾಪಕರು. ಪರಿಸ್ಥಿತಿ ಹೀಗಿರುವಾಗ ಪ್ರಭಾಸ್, ಇತ್ತೀಚೆಗೆ ಸಿನಿಮಾ ಒಂದರಲ್ಲಿ ನಟಿಸಿದ್ದು, ಸಿನಿಮಾದಲ್ಲಿ ನಟಿಸಲು ಒಂದು ರೂಪಾಯಿ ಸಂಭಾವನೆಯನ್ನೂ ಅವರು ಪಡೆದಿಲ್ಲ. ಪ್ರಭಾಸ್, ಪ್ರಸ್ತುತ ಭಾರತೀಯ ಚಿತ್ರರಂಗದ ಅತ್ಯಂತ ದುಬಾರಿ ನಟರಲ್ಲಿ ಪ್ರಮುಖರು. ಸಿನಿಮಾದಲ್ಲಿ ನಟಿಸಲು 100-200 ಕೋಟಿ ಹಣ ಸಂಭಾವನೆಯಾಗಿ ಪಡೆದುಕೊಳ್ಳುತ್ತಾರೆ. ಪ್ರಭಾಸ್ ಎಷ್ಟೇ ದುಬಾರಿ ಸಂಭಾವನೆ ಕೇಳಿದರೂ ಕೊಡಲು ಹಲವು ನಿರ್ಮಾಪಕರು ಸರತಿ ಸಾಲಿನಲ್ಲಿ ನಿಂತು ಕಾಯುತ್ತಿದ್ದಾರೆ. ಹೀಗಿದ್ದಾಗಲೂ ಸಹ ಪ್ರಭಾಸ್ ಇತ್ತೀಚೆಗಿನ ಸಿನಿಮಾ ಒಂದರಲ್ಲಿ ಒಂದು ರೂಪಾಯಿ ಹಣವನ್ನೂ ಪಡೆಯದೆ ಉಚಿತವಾಗಿ ನಟಿಸಿದ್ದಾರೆ. ಆದರೆ ಅದಕ್ಕೆ ಕಾರಣವೂ ಇದೆ. ಪ್ರಭಾಸ್, ಬೇರೆಯವರ ಸಿನಿಮಾಗಳಲ್ಲಿ ಕ್ಯಾಮಿಯೋ ಅಥವಾ ಅತಿಥಿ ಪಾತ್ರಗಳಲ್ಲಿ ಕಾಣಿಸಿಕೊಳ್ಳುವುದು ಬಹಳ ವಿರಳ. ಪ್ರಭಾಸ್ ಈ ವರೆಗೆ ಅತಿಥಿ ಪಾತ್ರದಲ್ಲಿ ನಟಿಸಿರುವುದು ಕೇವಲ ಒಂದೇ ಸಿನಿಮಾದಲ್ಲಿ ಅದೂ ಹಿಂದಿ ಸಿನಿಮಾ 'ಆಕ್ಷನ್ ಜಾಕ್ಸನ್'. ಅದರ ಹೊರತಾಗಿ ಇನ್ಯಾವುದೇ ಸಿನಿಮಾದಲ್ಲಿ ಪ್ರಭಾಸ್ ಅತಿಥಿ ಪಾತ್ರದಲ್ಲಿ ನಟಿಸಿಲ್ಲ. ಆದರೆ ಇತ್ತೀಚೆಗೆ ಸಿನಿಮಾ ಒಂದರಲ್ಲಿ ಪ್ರಭಾಸ್ ಅತಿಥಿ ಪಾತ್ರದಲ್ಲಿ ನಟಿಸಿದ್ದಾರೆ. ಅದೂ ತಾವೇ ಸ್ವತಃ ಬಯಸಿ ಈ ಸಿನಿಮಾದಲ್ಲಿ ನಟಿಸಿದ್ದಾರೆ. ಸಿನಿಮಾದಲ್ಲಿ ನಟಿಸಲು ಹಣವನ್ನು ಸಹ ಪ್ರಭಾಸ್ ಪಡೆದುಕೊಂಡಿಲ್ಲ. ಡಾ ರಾಜ್‌ಕುಮಾರ್ ನಾಯಕನಾಗಿ ನಟಿಸಿದ ಮೊದಲ ಸಿನಿಮಾ 'ಬೇಡರ ಕಣ್ಣಪ್ಪ' ಸಿನಿಮಾ ಇದೀಗ ತೆಲುಗಿನಲ್ಲಿ 'ಕಣ್ಣಪ್ಪ' ಹೆಸರಿನಲ್ಲಿ ತೆರೆಗೆ ಬರಲಿದ್ದು ಈ ಸಿನಿಮಾದಲ್ಲಿ ಪ್ರಭಾಸ್ ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

# ಬ್ಲಾಕ್‌ಬಸ್ಟರ್ ಲವ್‌ಸ್ಟೋರಿಯಲ್ಲಿ ಸಾರಾ-ರಣವೀರ್

ರಣ್ವೀರ್ ಸಿಂಗ್ ಮತ್ತು ಸಾರಾ ಅಲಿ ಖಾನ್ ಅವರುಗಳು ಮತ್ತೆ ತೆರೆ ಮೇಲೆ ಒಂದಾಗುತ್ತಿದ್ದಾರೆ. ಈ ಹಿಂದೆ ರೋಹಿತ್ ಶೆಟ್ಟಿ ನಿರ್ದೇಶನದ 'ಸಿಂಭ' ಸಿನಿಮಾದಲ್ಲಿ ಇವರು ಒಟ್ಟಿಗೆ ನಟಿಸಿದ್ದರು. ಇದೀಗ ಈ ಜೋಡಿ ಮತ್ತೊಮ್ಮೆ ರೋಹಿತ್ ಶೆಟ್ಟಿ ಸಿನಿಮಾ ಮೂಲಕವೇ ಒಂದಾಗುತ್ತಿದ್ದಾರೆ. ರೋಹಿತ್ ಶೆಟ್ಟಿ ಸಿನಿಮಾಗಳಲ್ಲಿ ಆಯಕ್ಷನ್ ಮತ್ತು ಲವ್‌ಸ್ಟೋರಿ ಸಾಮಾನ್ಯವಾಗಿ ಕಾಣ ಸಿಗುತ್ತದೆ. ಇದೆರಡೂ ಅವರ ಚಿತ್ರದ ಹೈಲೈಟ್ ಆಗಿರುತ್ತದೆ. ಇತ್ತೀಚೆಗೆ ತೆರೆಗೆ ಬಂದ 'ಸಿಂಗಂ ಅಗೇನ್' ಚಿತ್ರದಲ್ಲಿ ಇದೆರಡೂ ವಿಚಾರಗಳು ಇದ್ದಿದ್ದನ್ನು ನೀವು ಗಮನಿಸಿರಬಹುದು. ಈಗ ರೋಹಿತ್ ಶೆಟ್ಟಿ ಅವರು ಮತ್ತೊಂದು ಬ್ಲಾಕ್‌ಬಸ್ಟರ್ ಲವ್‌ಸ್ಟೋರಿ ಜೊತೆ ಪ್ರೇಕ್ಷಕರ ಎದುರು ಬರುತ್ತಿದ್ದಾರೆ ಎಂದು ಹೇಳಲಾಗಿದೆ. ಇದರಲ್ಲಿ ರಣವೀರ್ ಸಿಂಗ್ ಹಾಗೂ ಸಾರಾ ಅಲಿ ಖಾನ್ ಮುಖ್ಯಭೂಮಿಕೆ ನಿರ್ವಹಿಸಲಿದ್ದಾರೆ. ರೋಹಿತ್ ಶೆಟ್ಟಿ ಅವರು 'ಸಿಂಬಾ' ಹೆಸರಿನ ಸಿನಿಮಾ ನಿರ್ದೇಶನ ಮಾಡಿದ್ದರು. ಈ ಚಿತ್ರದಲ್ಲಿ ರಣವೀರ್ ಸಿಂಗ್ ಹಾಗೂ ಸಾರಾ ಅಲಿ ಖಾನ್ ಕೂಡ ಮುಖ್ಯ ಭೂಮಿಕೆಯಲ್ಲಿ ಕಾಣಿಸಿಕೊಂಡಿದ್ದರು. ಈಗ ಈ ಜೋಡಿಯನ್ನು ಮತ್ತೆ ತೆರೆಮೇಲೆ ಒಟ್ಟಿಗೆ ತರುವ ಪ್ರಯತ್ನ ನಡೆದಿದೆ. ಈ ಬಗ್ಗೆ ರೋಹಿತ್ ಶೆಟ್ಟಿ ಅವರು ದೊಡ್ಡ ಸೂಚನೆ ಕೊಟ್ಟಿದ್ದಾರೆ.

ಸಿನಿ ವಾಹಿನಿ



# ದರ್ಶನ್ ಬಗ್ಗೆ ಪ್ರಶ್ನೆ ಕೇಳ್ತಿದ್ದಂತೆ ಉತ್ತರಿಸಲು ನಿರಾಕರಿಸಿದ ರಮ್ಯಾ

ಮೋಹಕತಾರೆ ರಮ್ಯಾ, ಸಿನಿಮಾ ಕಾರ್ಯಕ್ರಮವೊಂದಕ್ಕೆ ಹಾಜರಿ ಹಾಕಿದ್ದರು. ಈ ವೇಳೆ, ಮದುವೆ, ಸಿನಿಮಾ ಕಮ್‌ಬ್ಯಾಕ್ ಬಗ್ಗೆ ಮಾತನಾಡುವುದರ ಜೊತೆಗೆ ಹಲವು ವಿಚಾರಗಳ ಬಗ್ಗೆ ಪ್ರತಿಕ್ರಿಯೆ ನೀಡಿದ್ದಾರೆ. ದರ್ಶನ್ ಬಗ್ಗೆ ಕೇಳ್ತಿದ್ದಂತೆ ಉತ್ತರಿಸಲು ಅವರು ನಿರಾಕರಿಸಿದ್ದಾರೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬೇಲ್‌ನಲ್ಲಿರುವ ದರ್ಶನ್ ಬಗ್ಗೆ ಎದುರಾದ ಪ್ರಶ್ನೆಗೆ ರಮ್ಯಾ, ಆ ಬಗ್ಗೆ ಮಾತನಾಡುವುದಿಲ್ಲ ಎಂದು ನಿರಾಕರಿಸಿದ್ದಾರೆ. ದರ್ಶನ್ ಕೇಸ್ ಹೆಸರು ಹೇಳ್ತಿದ್ದಂತೆ ನೋ ಎಂದಿದ್ದಾರೆ.

ಈ ಹಿಂದೆ ಮಾಧ್ಯಮದ ಜೊತೆ ಮಾತನಾಡಿದ ರಮ್ಯಾ, ನಟರಾಗಿ ಜವಾಬ್ದಾರಿಯುತ ಸ್ಥಾನದಲ್ಲಿ ಸಮಾಜಕ್ಕೆ ಒಳ್ಳೆಯದನ್ನು ನೀಡಬೇಕು. ಅಭಿಮಾನಿಗಳನ್ನು ಬಳಸಿಕೊಂಡು ಕೊಲೆ ಮಾಡುವುದು ಎಷ್ಟು ಸರಿ ಇಂತಹದ್ದನ್ನು ಸಮರ್ಥಿಸಿಕೊಂಡರೆ ಸಮಾಜಕ್ಕೆ ನಾವು ಕೊಡುವ ಸಂದೇಶ ಏನು ಕಾನೂನಿಗಿಂತ ಯಾರೂ ದೊಡ್ಡವರಿಲ್ಲ ಎಂದು ರೇಣುಕಾಸ್ವಾಮಿ ಕೇಸ್ ಬಗ್ಗೆ ಮಾತನಾಡಿದ್ದರು.



# ಎಲ್ಲೋ ಜೋಗಪ್ಪ ನಿನ್ನರಮನೆ ಟ್ರೈಲರ್‌ನಲಿ ಭಿನ್ನ ಕಥನದ ಸುಳಿವು!

ಟೈಟಲ್ ಲಾಂಚ್ ಆದ ಘಳಿಗೆಯಿಂದಲೇ ಕುತೂಹಲ ಮೂಡಿಸಿದ್ದ ಚಿತ್ರ 'ಎಲ್ಲೋ ಜೋಗಪ್ಪ ನಿನ್ನರಮನೆ'. ಈಗಾಗಲೇ ಕಿರುತೆರೆಯಲ್ಲಿ ಅನೇಕ ಹಿಟ್ ಧಾರಾವಾಹಿಗಳನ್ನು ನಿರ್ದೇಶನ ಮಾಡಿರುವ ಹಯವದನ ನಿರ್ದೇಶನ ಮೊದಲ ಚಿತ್ರವಿದು. ಕಿರುತೆರೆ ಮೂಲಕವೇ ಪ್ರೇಕ್ಷಕರ ನಾಡಿ ಮಿಡಿತ ಅರಿತುಕೊಂಡಿರುವ ಹಯವದನ ಅವರ ನಿರ್ದೇಶನದ ಮೇಲೆ ಸಹಜವಾಗಿಯೇ ಕುತೂಹಲಗಳಿದ್ದವು. ಆ ಬಳಿಕ ಒಂದೆರಡು ಹಾಡುಗಳು ಬಿಡುಗಡೆಗೊಂಡು ಜನಮನ ಸೆಳೆದುಕೊಂಡಿದ್ದವು. ಇದೀಗ ಫೆಬ್ರವರಿ 21 ರಂದು ಬಿಡುಗಡೆಗೊಳ್ಳಲು ತಯಾರಾಗಿರುವ ಈ ಚಿತ್ರದ ಟ್ರೈಲರ್ ಬಿಡುಗಡೆಗೊಂಡಿದೆ. ಯಾವುದೇ ಟ್ರೈಲರ್‌ಗಳನ್ನು ನೋಡಿದಾಗ ಅಪ್ರಜ್ಞಾಪೂರ್ವಕವಾಗೊಂದು ಆಹ್ಲಾದ ನೋಡುಗರಲ್ಲಿ ಮೂಡಿಕೊಳ್ಳೋದು ವಿರಳ. ಹಾಗೊಂದು ಭಾವ ಮೂಡಿಸಿದ ಸಿನಿಮಾಗಳು ಚಿತ್ರಮಂದಿರಗಳಲ್ಲಿ ಯಶ ಕಂಡ ಅನೇಕ ಉದಾಹರಣೆಗಳಿದ್ದಾವೆ. ಎಲ್ಲೋ ಜೋಗಪ್ಪ ನಿನ್ನರಮನೆ ಚಿತ್ರದ ಟ್ರೈಲರಿನಲ್ಲಿಯೂ ಅಂಥಾದ್ದೊಂದು ಆಹ್ಲಾದ ಸ್ಪಷ್ಟವಾಗಿ ಕಾಣ ಸಿಗುವಂತಿದೆ. ಅಲೆಮಾರಿಯೊಬ್ಬನ ಯಾನದ ಹಾದಿಯ ರೋಚಕ ಕಥನದ ಸುಳಿವೂ ಈ ಮೂಲಕವೇ ದಾಟಿಕೊಂಡಿದೆ. ಅದರಲ್ಲಿಯೂ ವಿಶೇಷವಾಗಿ ಮೌಂಟ್ ಎವರೆಸ್ಟಿನ ಹಿಮಚ್ಛಾದಿತ ಸುಂದರ ಪರಿಸರದಿಂದ ಈ ಟ್ರೈಲರ್ ತೆರೆದುಕೊಂಡಿದೆ. ಆ ನಂತರದ ದೃಶ್ಯಗಳಲ್ಲಿ, ಆ ಮೂಲಕ ಜಾಹೀರಾದ ಕಥೆಯ ಸುಳಿವುಗಳಲ್ಲಿಯೂ ಅದೇ ತೀವ್ರತೆಯ ಸೆಳೆತ ಸದರಿ ಟ್ರೈಲರಿನ ನಿಜವಾದ ಪ್ಲಸ್ ಪಾಯಿಂಟ್. ಈ ಹಿಂದೆ ಕಂಬ್ಳಿ ಹುಳ ಚಿತ್ರದ ಮೂಲಕ ಗಮನ ಸೆಳೆದಿದ್ದ ಅಚಿಜನ್ ನಾಗೇಂದ್ರ ಈ ಚಿತ್ರದ ನಾಯಕನಾಗಿ, ನಾನಾ ಚಹರೆಗಳಿರುವ ಪಾತ್ರದಲ್ಲಿ ನಟಿಸಿದ್ದಾರೆ. ವೆನ್ಯಾ ರೈ ನಾಯಕಿಯಾಗಿ ಸಾಥ್ ಕೊಟ್ಟಿದ್ದಾರೆ. ಸಂಜನಾ ದಾಸ್ ಪ್ರಧಾನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಇನ್ನುಳಿದಂತೆ ಶರತ್ ಲೋಹಿತಾಶ್ವ, ದಾನಪ್ಪ, ದಿನೇಶ್ ಮಂಗಳೂರು, ಸ್ವಾತಿ ಬಿರಾದಾರ್, ಲಕ್ಷ್ಮಿ, ನಾಡಗೌಡ, ರೇಖಾ ರಾವ್, ಇಳಾ ವಿಟ್ಲ ಮುಂತಾ ದವರು ಮಹತ್ವದ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಆ ಎಲ್ಲಾ ಪಾತ್ರಗಳು ಕೂಡಾ ಈ ಟ್ರೈಲರ್ ಮೂಲಕ ಪರಿಚಯಗೊಂಡಿವೆ. ಎಲ್ಲರ ಬದುಕಿಗೂ ಹತ್ತಿರಾಗಬಲ್ಲ, ನೋಡುಗರನ್ನೆಲ್ಲ ಕಾಡಬಲ್ಲ, ಕಾಮಿಡಿ, ಲವ್, ಸೆಂಟಿಮೆಂಟ್ ಸೇರಿದಂತೆ ಎಲ್ಲಾ ಗುಣಗಳನ್ನೂ ಒಳಗೊಂಡಿರುವ ಈ ಟ್ರೈಲರ್ ಪ್ರೇಕ್ಷಕರಿಂದಲೂ ಮೆಚ್ಚುಗೆ ಪಡೆದುಕೊಳ್ಳುತ್ತಿದೆ.

# ಹದಗೆಟ್ಟ ಬುಮ್ರಾ ಆರೋಗ್ಯ

## ಆಸ್ಪತ್ರೆಯಲ್ಲಿ ಮಲಗಿರುವ ಫೋಟೋ ವೈರಲ್




ನಿಜಾಂಶವನ್ನು ತಿಳಿಯಲು ನಾವು ಮೊದಲು ಜಸ್ಪ್ರಿತ್ ಬುಮ್ರಾ ಆಸ್ಪತ್ರೆಗೆ ದಾಖಲಾಗಿದ್ದಾರ ಅಥವಾ ವೈರಲ್ ಫೋಟೋದಲ್ಲಿ ಇರುವಂತೆ ಬೆಡ್ ಮೇಲೆ ಮಲಗಿದ್ದಾರ ಎಂಬ ಕುರಿತು ಹುಡುಕಿದ್ದೇವೆ. ಆದರೆ, ಇದಕ್ಕೆ ಸಂಬಂಧಿಸಿದ ಯಾವುದೇ ವಿಶ್ವಾಸಾರ್ಹ ವರದಿ ನಮಗೆ ಕಂಡುಬಂದಿಲ್ಲ. ಬಳಿಕ ಈ ಫೋಟೋಗಳನ್ನು ಎಚ್ಚರಿಕೆಯಿಂದ ನೋಡಿದ್ದೇವೆ ಇತ್ತೀಚೆಗಷ್ಟೆ ಮುಕ್ತಾಯಗೊಂಡ ಬಾರ್ಡರ್-ಗವಾಸ್ಕರ್ ಟ್ರೋಫಿಯ ಸಿಡ್ನಿ ಟೆಸ್ಟ್ ಪಂದ್ಯದ ವೇಳೆ ಭಾರತದ ಸ್ಟಾರ್ ವೇಗಿ ಜಸ್‌ಪ್ರಿತ್ ಬುಮ್ರಾ ಬೆನ್ನಿಗೆ ಗಾಯ ಮಾಡಿಕೊಂಡರು. ಅಂದಿನಿಂದ ಅವರು ಟೀಮ್ ಇಂಡಿಯಾದಿಂದ ಹೊರಗುಳಿದಿದ್ದಾರೆ. ಅಲ್ಲದೆ ಮುಂಬರುವ ಬಹುನಿರೀಕ್ಷಿತ ಚಾಂಪಿಯನ್ ಟ್ರೋಫಿಯಿಂದ ಕೂಡ ಔಟ್ ಆಗಿದ್ದಾರೆ. ಏತನ್ಮಧ್ಯೆ, ಅವರ ಆರೋಗ್ಯಕ್ಕೆ ಸಂಬಂಧಿಸಿದ ಎರಡು ಫೋಟೋಗಳು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿವೆ. ಅದರಲ್ಲಿ ಅವರು ಆಸ್ಪತ್ರೆಯ ಹಾಸಿಗೆಯ ಮೇಲೆ ಮಲಗಿರುವುದನ್ನು ಕಾಣಬಹುದಾಗಿದೆ. ಅನೇಕ ಜನರು ಚಿತ್ರಗಳನ್ನು ನಿಜವೆಂದು ಭಾವಿಸಿ ಹಂಚಿಕೊಳ್ಳುತ್ತಿದ್ದಾರೆ. ಫೇಸ್‌ಬುಕ್ ಬಳಕೆದಾರರೊಬ್ಬರು ಈ ಫೋಟೋವನ್ನು ಹಂಚಿಕೊಂಡು, ''ಜಸ್ಪ್ರೀತ್ ಬುಮ್ರಾ ಅವರ ಸ್ಥಿತಿ ಹದಗೆಟ್ಟಿದೆ. ಅವರನ್ನು ನಿಜವಾದ ದೇಶಭಕ್ತರನ್ನಾಗಿ ಮಾಡಿ ಮತ್ತು ಅವರಿಗೆ ಒಂದು ಲೈಕ್ ನೀಡುವ ಮೂಲಕ ಆಶೀರ್ವದಿಸಿ. ಅವರಿಗೆ ಪ್ರೀತಿಯನ್ನು ನೀಡಿ. ಅವರು ನಮ್ಮ ಭಾರತದ ಹೆಮ್ಮೆ'' ಎಂಬ ಶೀರ್ಷಿಕೆಯಲ್ಲಿ ಬರೆದಿದ್ದಾರೆ.

ಈ ಸುದ್ದಿಯ ಸತ್ಯಾಸತ್ಯತೆಯನ್ನು ಪರಿಶೋಧಿಸಿದಾಗ ಸುಳ್ಳು ಹೇಳಿಕೆಯೊಂದಿಗೆ ಈ ಫೋಟೋ ವೈರಲ್ ಮಾಡಲಾಗುತ್ತಿದೆ ಎಂದು ಕಂಡುಬಂದಿದೆ. ವಾಸ್ತವವಾಗಿ ವೈರಲ್ ಚಿತ್ರವನ್ನು ಕೃತಕ ಬುದ್ದಿಮತ್ತೆ ಸಹಾಯದಿಂದ ರಚಿಸಲಾಗಿದೆ. ನಿಜಾಂಶವನ್ನು ತಿಳಿಯಲು ನಾವು ಮೊದಲು ಜಸ್‌ಪ್ರಿತ್ ಬುಮ್ರಾ ಆಸ್ಪತ್ರೆಗೆ ದಾಖಲಾಗಿದ್ದಾರ ಅಥವಾ ವೈರಲ್ ಫೋಟೋದಲ್ಲಿ ಇರುವಂತೆ ಬೆಡ್ ಮೇಲೆ ಮಲಗಿದ್ದಾರ ಎಂಬ ಕುರಿತು ಹುಡುಕಿದ್ದೇವೆ. ಆದರೆ, ಇದಕ್ಕೆ ಸಂಬಂಧಿಸಿದ ಯಾವುದೇ ವಿಶ್ವಾಸಾರ್ಹ ವರದಿ ನಮಗೆ ಕಂಡುಬಂದಿಲ್ಲ. ಬಳಿಕ ಈ ಫೋಟೋಗಳನ್ನು ಎಚ್ಚರಿಕೆಯಿಂದ ನೋಡಿದ್ದೇವೆ. ಎರಡೂ ಫೋಟೋಗಳಲ್ಲಿ, ಮುಖವು ತುಂಬಾ ಮೃದುವಾಗಿ ಕಾಣುತ್ತದೆ ಮತ್ತು ಬ್ಯಾಕ್‌ಗ್ರೌಂಡ್ ಮಸುಕಾಗಿದ್ದು, ಕೃತಕವಾಗಿ ಕಾಣುತ್ತದೆ. ಈ ಫೋಟೋ ನೈಜ್ಯಕ್ಕೆ ಹತ್ತಿರವಾಗಿಲ್ಲ ಎಂಬುದು ಸ್ಪಷ್ಟವಾಯಿತು. ಹೀಗಾಗಿ ನಾವು ಈ ಫೋಟೋಗಳನ್ನು ಎಐ ಇಮೇಜ್ ಪತ್ತೆ ಪರಿಕರಗಳೊಂದಿಗೆ ಪರೀಕ್ಷಿಸಿದ್ದೇವೆ. ಎಐ ಇಮೇಜ್ ಡಿಟೆಕ್ಷನ್ ಟೂಲ್ ಹೈವ್ ಮಾಡರೇಶನ್ ಅಂದಾಜಿನ ಪ್ರಕಾರ ಈ ಚಿತ್ರಗಳು 97 ರಿಂದ 99 ಪ್ರತಿಶತದಷ್ಟು ಎಐ- ರಚಿತವಾಗಿರುವ ಸಾಧ್ಯತೆಯಿದೆ ಎಂದು ಹೇಳಿದೆ.

# ತಂಡದ 8 ನಾಯಕರುಗಳು ಯಾರು ಗೊತ್ತಾ




ಐಪಿಎಲ್ ಸೀಸನ್-17 ರವರೆಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಒಟ್ಟು 7 ನಾಯಕರುಗಳು ಮುನ್ನಡೆಸಿದ್ದಾರೆ. ಇವರಲ್ಲಿ ಕೊನೆಯವರು ಫಾಫ್ ಡುಪ್ಲೆಸಿಸ್. ಐಪಿಎಲ್ 2024 ರಲ್ಲಿ ಆರ್‌ಸಿಬಿ ತಂಡದ ನಾಯಕರಾಗಿ ಕಾಣಿಸಿಕೊಂಡಿದ್ದ ಫಾಫ್ ಈ ಬಾರಿ ಡೆಲ್ಲಿ ಕ್ಯಾಪಿಟಲ್ಸ್ ಪರ ಕಣಕ್ಕಿಳಿಯಲಿದ್ದಾರೆ. ಅದರಂತೆ ಇದೀಗ ಆರ್‌ಸಿಬಿ ತಂಡದ ಹೊಸ ನಾಯಕನಾಗಿ ರಜತ್ ಪಾಟಿದಾರ್ ಆಯ್ಕೆಯಾಗಿದ್ದಾರೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಈವರೆಗೆ 7 ಕ್ಯಾಪ್ಟನ್‌ಗಳು ಮುನ್ನಡೆಸಿದ್ದಾರೆ. ಇದೀಗ 8ನೇ ನಾಯಕನಾಗಿ ರಜತ್ ಪಾಟಿದಾರ್ ಆಯ್ಕೆಯಾಗಿದ್ದಾರೆ. ಅದರಂತೆ ಐಪಿಎಲ್ 2025 ರಲ್ಲಿ ಆರ್‌ಸಿಬಿ ತಂಡವು ಪಾಟಿದಾರ್ ಸಾರಥ್ಯದಲ್ಲಿ ಕಣಕ್ಕಿಳಿಯಲಿದೆ. ಇದಕ್ಕೂ ಮುನ್ನ ಆರ್‌ಸಿಬಿ ತಂಡವನ್ನು ಮುನ್ನಡೆಸಿದ ನಾಯಕರುಗಳು ಯಾರೆಲ್ಲಾ ಎಂದು ನೋಡುವುದಾದರೆ...

**ರಾಹುಲ್ ದ್ರಾವಿಡ್:** ಆರ್‌ಸಿಬಿ ತಂಡದ ಮೊದಲ ನಾಯಕ ರಾಹುಲ್ ದ್ರಾವಿಡ್. 2008 ರ ಚೊಚ್ಚಲ ಐಪಿಎಲ್‌ನಲ್ಲಿ ಆರ್‌ಸಿಬಿ ತಂಡವನ್ನು 14 ಪಂದ್ಯಗಳಲ್ಲಿ ದ್ರಾವಿಡ್ ಮುನ್ನಡೆಸಿದ್ದರು. ಈ ವೇಳೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪಡೆ ಕೇವಲ 4 ಪಂದ್ಯಗಳಲ್ಲಿ ಮಾತ್ರ ಜಯ ಸಾಧಿಸಿತ್ತು.

**ಕೆವಿನ್ ಪೀಟರ್ಸನ್:** ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ 2ನೇ ನಾಯಕ ಇಂಗ್ಲೆಂಡ್ ಕ್ರಿಕೆಟಿಗ ಕೆವಿನ್ ಪೀಟರ್ಸನ್. 2009 ರಲ್ಲಿ ಪೀಟರ್ಸನ್ ಆರ್‌ಸಿಬಿ ತಂಡವನ್ನು 6 ಪಂದ್ಯಗಳಲ್ಲಿ ಮುನ್ನಡೆಸಿದ್ದರು. ಈ ವೇಳೆ ಆರ್‌ಸಿಬಿ ಕೇವಲ 2 ಪಂದ್ಯಗಳಲ್ಲಿ ಮಾತ್ರ ಗೆಲುವು ದಾಖಲಿಸಿತ್ತು.

**ಅನಿಲ್ ಕುಂಬ್ಳೆ:** 2009 ರಲ್ಲಿ ಕೆವಿನ್ ಪೀಟರ್ಸನ್ ಅರ್ಧದಲ್ಲೇ ಟೂರ್ನಿ ತೊರೆದಿದ್ದರು. ಹೀಗಾಗಿ ಅನಿಲ್ ಕುಂಬ್ಳೆ ಉಳಿದ ಪಂದ್ಯಗಳಲ್ಲಿ ತಂಡವನ್ನು ಮುನ್ನಡೆಸಿದ್ದರು. ಈ ವೇಳೆ ಮೊದಲ ಬಾರಿಗೆ ಫೈನಲ್ ಪ್ರವೇಶಿಸಿದ್ದ ಆರ್‌ಸಿಬಿ ಅಂತಿಮ ಮ್ಯಾಚ್‌ನಲ್ಲಿ ಡೆಕ್ಕನ್ ಚಾರ್ಜರ್ಸ್ ವಿರುದ್ಧ ಸೋತು ಪ್ರಶಸ್ತಿಯನ್ನು ಕೈಚೆಲ್ಲಿಕೊಂಡಿತು.

# ಐಪಿಎಲ್‌ನಲ್ಲಿ ನೋಡಿಕೊಳ್ತೇನೆ..

ಓಪನ್ ಚಾಲೆಂಜ್ ಹಾಕಿದ್ರಾ ಚಾಹಲ್



ಯುಜುವೇಂದ್ರ ಚಹಲ್ ತಮ್ಮ ಅಧಿಕೃತ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಒಂದು ಸ್ಟೋರಿ ಹಂಚಿಕೊಂಡಿದ್ದಾರೆ, ಇದರಲ್ಲಿ ಅವರ ಶೀರ್ಷಿಕೆ ಜನರ ಮನಸ್ಸಿನಲ್ಲಿ ಕುತೂಹಲ ಮೂಡಿಸಿದೆ.

ಯಜುವೇಂದ್ರ ಚಹಲ್ ಇನ್‌ಸ್ಟಾಗ್ರಾಮ್‌ನಲ್ಲಿ ಕುತೂಹಲಕಾರಿ ಸ್ಟೋರಿ ಹಂಚಿಕೊಂಡಿದ್ದಾರೆ: ಟೀಮ್ ಇಂಡಿಯಾದ ಕ್ರಿಕೆಟಿಗ ಯಜುವೇಂದ್ರ ಚಹಲ್ ಸಾಕಷ್ಟು ಸುದ್ದಿಯಲ್ಲಿದ್ದಾರೆ ಮತ್ತು ಇದಕ್ಕೆ ಪ್ರಮುಖ ಕಾರಣ ಅವರ ಪತ್ನಿ ಧನಶ್ರೀ ವರ್ಮಾ. ಮಾಧ್ಯಮಗಳ ಹಲವು ವರದಿಗಳಲ್ಲಿ ಇಬ್ಬರೂ ಶೀಘ್ರದಲ್ಲೇ ಬೇರ್ಪಡಲಿದ್ದಾರೆ ಎಂದು ಹೇಳಲಾಗುತ್ತಿದೆ. ಇನ್‌ಸ್ಟಾಗ್ರಾಮ್‌ನಲ್ಲಿ ಇಬ್ಬರೂ ಅನ್‌ಫಾಲೋ ಮಾಡಿದ್ದರಿಂದ ಈ ಸುದ್ದಿಗೆ ಮತ್ತಷ್ಟು ಬಲ ಬಂದಿದೆ. ಆದರೂ, ವಿಚ್ಛೇದನದ ಬಗ್ಗೆ ಇನ್ನೂ ಯಾವುದೇ ಅಧಿಕೃತ ದೃಢೀಕರಣ ಬಂದಿಲ್ಲ. ಯಜು ಮತ್ತು ಧನಶ್ರೀ ಇಬ್ಬರೂ ತಮ್ಮ ಕೆಲಸಗಳಲ್ಲಿ ನಿರತರಾಗಿದ್ದಾರೆ. ಈ ಮಧ್ಯೆ, ಚಹಲ್ ತಮ್ಮ ಅಧಿಕೃತ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಒಂದು ಸ್ಟೋರಿ ಹಂಚಿಕೊಂಡಿದ್ದಾರೆ. ಈ ಸ್ಟೋರಿ ಎಲ್ಲಾರ ಗಮನ ಸೆಳೆದಿದೆ. ಎಲ್ಲಾರ ಮನಸ್ಸಿನಲ್ಲಿ ಅವರು ಪೋಸ್ಟ್ ನಿಂದ ಕುತೂಹಲ ಮೂಡಿಸಿದ್ದಾರೆ. ಯಜು ಚಹಲ್ ಅವರ ಹೊಸ ಇನ್‌ಸ್ಟಾಗ್ರಾಮ್ ಸ್ಟೋರಿ ಅಭಿಮಾನಿಗಳ ಮನಸ್ಸಿನಲ್ಲಿ ಕುತೂಹಲ ಮೂಡಿಸಿದೆ.

ಚಹಲ್ ಗುರುವಾರ ತಮ್ಮ ಅಧಿಕೃತ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಒಂದು ಸ್ಟೋರಿ ಹಂಚಿಕೊಂಡಿದ್ದಾರೆ. ಆ ಸ್ಟೋರಿಯಲ್ಲಿ ಅವರು ಸ್ವತಃ ಕಾಣಿಸಿಕೊಂಡಿದ್ದಾರೆ ಮತ್ತು ಬೆರಳಿನಿಂದ ಸನ್ನೆ ಮಾಡುತ್ತಾ ಶೀರ್ಷಿಕೆಯನ್ನೂ ಬರೆದಿದ್ದಾರೆ. ಚಹಲ್ ಸ್ಟೋರಿಯ ಶೀರ್ಷಿಕೆ ಯಲ್ಲಿ ಐಪಿಎಲ್'ನಲ್ಲಿ ನೋಡ್ಕೊಳ್ಳೋಣ ಎಂದು ಬರೆದಿದ್ದಾರೆ.




# ಎರಡೇ ಎರಡು ಪಂದ್ಯದಲ್ಲಿ ವಿಶ್ವ ದಾಖಲೆ ನಿರ್ಮಿಸಿದ ಮ್ಯಾಥ್ಯೂ ಬ್ರೀಟ್ಝ್ಕೆ

ಬ್ರೀಟ್ಝ್ಕೆ ವಿಶೇಷ ವಿಶ್ವದಾಖಲೆ

ಕರಾಚಿಯಲ್ಲಿ ನಡೆದ ಪಾಕಿಸ್ತಾನ್ ವಿರುದ್ಧದ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಸೌತ್ ಆಫ್ರಿಕಾ ಪರ ಮ್ಯಾಥ್ಯೂ ಬ್ರೀಟ್ಝ್ಕೆ 83 ರನ್ ಬಾರಿಸಿದ್ದರು. ಈ ಅರ್ಧಶತಕದ ನೆರವಿನಿಂದ ಸೌತ್ ಆಫ್ರಿಕಾ 50 ಓವರ್‌ಗಳಲ್ಲಿ 352 ರನ್ ಕಲೆಹಾಕಿತ್ತು. ಈ ಗುರಿಯನ್ನು 49 ಓವರ್‌ಗಳಲ್ಲಿ ಚೇಸ್ ಮಾಡುವ ಮೂಲಕ ಪಾಕಿಸ್ತಾನ್ ತಂಡ 6 ವಿಕೆಟ್‌ಗಳ ಜಯ ಸಾಧಿಸಿದೆ.

ಈ ಸೋಲಿನ ಹೊರತಾಗಿಯೂ ಈ ಪಂದ್ಯದ ಮೂಲಕ ಮ್ಯಾಥ್ಯೂ ಬ್ರೀಟ್ಝ್ಕೆ ವಿಶೇಷ ವಿಶ್ವ ದಾಖಲೆ ನಿರ್ಮಿಸಿದ್ದಾರೆ. ಏಕದಿನ ಕ್ರಿಕೆಟ್‌ನ ಪಾದಾರ್ಪಣೆ ಪಂದ್ಯದಲ್ಲೇ 150 ರನ್ ಸಿಡಿಸಿ ವಿಶ್ವ ದಾಖಲೆ ನಿರ್ಮಿಸಿದ್ದ ಸೌತ್ ಆಫ್ರಿಕಾ ದಾಂಡಿಗ ಮ್ಯಾಥ್ಯೂ ಬ್ರೀಟ್ಝ್ಕೆ ಇದೀಗ ಮತ್ತೊಂದು ವರ್ಲ್ಡ್ ರೆಕಾರ್ಡ್‌ಗೆ ಕೊರಳೊಡ್ಡಿದ್ದಾರೆ. ಅದು ಕೂಡ 50 ವರ್ಷಗಳ ಹಳೆಯ ವಿಶ್ವ ದಾಖಲೆಯನ್ನು ಮುರಿಯುವ ಮೂಲಕ ಎಂಬುದು ವಿಶೇಷ. ಬುಧವಾರ (ಫೆ.12) ಕರಾಚಿಯಲ್ಲಿ ಪಾಕಿಸ್ತಾನ್ ವಿರುದ್ಧ ನಡೆದ ಏಕದಿನ ಪಂದ್ಯದಲ್ಲಿ ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಮ್ಯಾಥ್ಯೂ ಬ್ರೀಟ್ಝ್ಕೆ 84 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ 83 ರನ್ ಬಾರಿಸಿದ್ದರು. ಇದಕ್ಕೂ ಮುನ್ನ ನ್ಯೂಝಿಲೆಂಡ್ ವಿರುದ್ಧ ನಡೆದ ಪಂದ್ಯದಲ್ಲಿ ಮ್ಯಾಥ್ಯೂ 148 ಎಸೆತಗಳಲ್ಲಿ 150 ರನ್ ಚಚ್ಚಿದ್ದರು. ಈ ಎರಡು ಇನಿಂಗ್ಸ್‌ಗಳ ಮೂಲಕ ಮ್ಯಾಥ್ಯೂ ಬ್ರೀಟ್ಝ್ಕೆ ಒಟ್ಟು 233 ರನ್ ಕಲೆಹಾಕಿದ್ದಾರೆ. ಈ ಮೂಲಕ ಏಕದಿನ ಕ್ರಿಕೆಟ್ ಇತಿಹಾಸದಲ್ಲೇ ಮೊದಲೆರಡು ಪಂದ್ಯಗಳಲ್ಲಿ ಅತೀ ಹೆಚ್ಚು ರನ್ ಬಾರಿಸಿದ ಬ್ಯಾಟರ್ ಎಂಬ ವಿಶ್ವ ದಾಖಲೆಯನ್ನು ತಮ್ಮದಾಗಿಸಿ ಕೊಂಡಿದ್ದಾರೆ. ಇದಕ್ಕೂ ಮುನ್ನ ಈ ಅಪರೂಪದ ದಾಖಲೆ ವೆಸ್ಟ್ ಇಂಡೀಸ್ ದಾಂಡಿಗನ ಹೆಸರಿನಲ್ಲಿತ್ತು. 1975 ರಲ್ಲಿ ವೆಸ್ಟ್ ಇಂಡೀಸ್ ಪರ ಏಕದಿನ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ್ದ ಡೆಸ್ಮಂಡ್ ಹೇನ್ಸ್ ಮೊದಲೆರಡು ಪಂದ್ಯಗಳ ಮೂಲಕ ಒಟ್ಟು 195 ರನ್ ಬಾರಿಸಿದ್ದರು. ಈ ಮೂಲಕ ಏಕದಿನ ಕ್ರಿಕೆಟ್ ಇತಿಹಾಸದಲ್ಲೇ ಮೊದಲ ಎರಡು ಇನಿಂಗ್ಸ್‌ಗಳಲ್ಲಿ ಅತೀ ಹೆಚ್ಚು ರನ್ ಕಲೆಹಾಕಿದ ಬ್ಯಾಟರ್ ಎನಿಸಿಕೊಂಡಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966